ಸಂಪುಟ: ೦೭/ ಸಂಚಿಕೆ: ೧೯೭/ ಗುರುವಾರ ದಿನಾಂಕ : ೨೫-೦೯-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 197/ THURSDAY Date : 25-09-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00



ನವರಾತ್ರಿ ಉತ್ಸವದ ಮೂರನೆಯ ದಿನವಾದ ಬುಧವಾರ ಧಾರವಾಡ ಶಾಂತಿ ನಿಕೇತನ ನಗರದ ಶ್ರೀ ಕರಿಯಮ್ಮ ದೇವಿಗೆ ಶ್ರೀ ಅಂಭಾ ಭವಾನಿ ದೇವಿ ಅಲಂಕಾರ.

## 39ನಿಗಮ ಮಂಡಳಿಗಳಿಗೆ ಅಧ್ಯಕ್ಷರ ನೇಮಕಕ್ಕೆ ಹೈಕಮಾಂಡ್ ಅಸ್ತು



**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರಕಾರ ಅಧಿಕಾರಕ್ಕೆ ಬಂದು ಎರಡೂವರೆ ವರ್ಷ ಪೂರ್ಣಗೊಳ್ಳುತ್ತಿರುವ ಸಂದರ್ಭದಲ್ಲಿ, ನೆನೆಗುದಿಗೆ ಬಿದ್ದಿದ್ದ ಹಲವು ನಿಗಮ, ಮಂಡಳಿ, ಆಯೋಗಗಳಿಗೆ ನೂತನ ಅಧ್ಯಕ್ಷರ ನೇಮಕಕ್ಕೆ ಕಾಂಗ್ರೆಸ್ ಹೈಕಮಾಂಡ್ ಕೊನೆಗೂ ಅಸ್ತು ಎಂದಿದೆ. ರಾಜ್ಯ ಸರಕಾರದ ವಿವಿಧ 39 ನಿಗಮ, ಮಂಡಳಿ, ಆಯೋಗಗಳಿಗೆ ನೂತನ ಅಧ್ಯಕ್ಷರ ನೇಮಕಕ್ಕೆ ಹೈಕಮಾಂಡ್ ಒಪ್ಪಿಗೆ ನೀಡುವ ಮೂಲಕ ಕಾಂಗ್ರೆಸ್ ಕಾರ್ಯಕರ್ತರಿಗೆ ದಸರಾ ಉಡುಗೊರೆ ನೀಡಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್, ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲಾ ಸುದೀರ್ಘ ಚರ್ಚೆಗಳನ್ನು ನಡೆಸಿ ಪಟ್ಟಿಯನ್ನು ಅಂತಿಮಗೊಳಿಸಿದ್ದರು.

ರಾಜ್ಯದಿಂದ ಅಂತಿಮಗೊಳಿಸಿ ಕಳುಹಿಸಿದ್ದ ಪಟ್ಟಿಯಲ್ಲಿ ಕೆಲವು ಬದಲಾವಣೆಗಳನ್ನು ಮಾಡಿ ಮಲ್ಲಿಕಾರ್ಜುನ ಖರ್ಗೆ, ಅದನ್ನು ಮುಖ್ಯಮಂತ್ರಿ ಸಿದ್ದರಾಮಯ್ಯಗೆ ಕಳುಹಿಸಿಕೊಟ್ಟಿದ್ದಾರೆ. ಮುಖ್ಯಮಂತ್ರಿ ಈ ಪಟ್ಟಿಗೆ ಅನುಮೋದನೆ ನೀಡಿದ ಬಳಿಕ ಸಂಬಂಧಪಟ್ಟ ಇಲಾಖೆಗಳು ನೇಮಕಾತಿ ಆದೇಶವನ್ನು ಪ್ರಕಟಿಸಲಿವೆ.

### ನಿಗಮ, ಮಂಡಳಿಗಳ ನೂತನ ಅಧ್ಯಕ್ಷರು ಪಟ್ಟಿ

ಕರಾವಳಿ ಅಭಿವೃದ್ಧಿ ಪ್ರಾಧಿಕಾರ–ಎಂ.ಎ.ಗಫೂರ್, ಮಂಗಳೂರು ವಿದ್ಯುತ್ ಸರಬರಾಜು ಕಂಪನಿ(ಮೆಸ್ಕಾಂ)–ಕೆ.ಹರೀಶ್ ಕುಮಾರ್, ಕೇಂದ್ರ ಪರಿಹಾರ ಸಮಿತಿ–ಆಗಾ ಸುಲ್ತಾನ್, ರಾಜ್ಯ ಬೀಜ ಮತ್ತು ಸಾವಯವ ಪ್ರಮಾಣೀಕರಣ ಸಂಸ್ಥೆ–ಲಾವಣ್ಯ ಬಲ್ಲಾಳ್ ಜೈನ್.ರಾಜ್ಯ ಸಫಾಯಿ ಕರ್ಮಚಾರಿ ಆಯೋಗ–ಪಿ.ರಘು, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ನಿಗಮ–ಅರುಣ್ ಪಾಟೀಲ್, ರಾಜ್ಯ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ–ಶಿವಲೀಲಾ ವಿನಯ್ ಕುಲಕರ್ಣಿ, ಜೈವಿಕ ವೈವಿಧ್ಯ ಮಂಡಳಿ–ವಡ್ನಾಳ್ ಜಗದೀಶ್, ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮ–ಮುರಳಿ ಅಶೋಕ್.ರಾಜ್ಯ ಎಸ್.ಸಿ ಮತ್ತು ಎಸ್.ಟಿ ಆಯೋಗ–ಡಾ.ಮೂರ್ತಿ, ಮಾಜಿ ಸೈನಿಕರ ಕಲ್ಯಾಣ ಮಂಡಳಿ–ಕರ್ನಲ್ ಮಲ್ಲಿಕಾರ್ಜುನ್, ರಾಜ್ಯ ಮಾವು ಅಭಿವೃದ್ಧಿ ಮತ್ತು ಮಾರುಕಟ್ಟೆ ನಿಗಮ–ಡಾ.ಬಿ.ಸಿ.ಮುದ್ದುಗಂಗಾಧರ್, ರಾಜ್ಯ ಪರಿಸರ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿ–ಶಾರ್ಲೆಟ್ ಪಿಂಟೋ, ರಾಜ್ಯ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮ–ಮಾರಿಯೋಜಿ ರಾವ್.ರಾಜ್ಯ ಗೋದಾಮು ನಿಗಮ–ಎನ್.ಸಂಪಂಗಿ, ದೇವರಾಜ ಅರಸು ಟ್ರಕ್ ಟರ್ಮಿನಲ್–ವೈ.ಸಯೀದ್ ಅಹ್ಮದ್, ಕಾಡುಗೊಲ್ಲ ಅಭಿವೃದ್ಧಿ ನಿಗಮ–ಮಹೇಶ್, ಬಯಲುಸೀಮೆ ಅಭಿವೃದ್ಧಿ ಮಂಡಳಿ(ಚಿತ್ರದುರ್ಗ)–ಮಂಜಪ್ಪ, ರಾಜ್ಯ ಉಪ್ಪಾರ ಅಭಿವೃದ್ಧಿ ನಿಗಮ–ಧರ್ಮಣ್ಣ ಉಪ್ಪಾರ.ರಾಜ್ಯ ಕೈಗಾರಿಕಾ ಮತ್ತು ಮೂಲಸೌಕರ್ಯ ಅಭಿವೃದ್ಧಿ ನಿಗಮ–ಎಸ್.ಜಿ.ನಂಜಯ್ಯನಮಠ, ರಾಜ್ಯ ಬೀಜ ಅಭಿವೃದ್ಧಿ ನಿಗಮ–ಆಂಜನಪ್ಪ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ–ನೀಲಕಂಠ ಮುಳ್ಗೆ, ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಮಂಡಳಿ(ಕಾಡಾ–ಕಲಬುರಗಿ)–ಬಾಬು ಹೊನ್ನ ನಾಯ್ಕ್, ಮಲಪ್ರಭಾ ಮತ್ತು ಘಟಪ್ರಭಾ ಯೋಜನೆಯ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಮಂಡಳಿ(ಬೆಳಗಾವಿ)–ಯುವರಾಜ್ ಕದಂ.ರಾಜ್ಯ ತೊಗರಿ ಬೆಳೆ ಅಭಿವೃದ್ಧಿ ನಿಗಮ(ಕಲಬುರಗಿ)– ಅನಿಲ್ ಕುಮಾರ್ ಜಾಮದಾರ್, ಗುಲ್ಬರ್ಗ ವಿದ್ಯುತ್ ಸರಬರಾಜು ಕಂಪನಿ–ಪ್ರವೀಣ್ ಹಾರ್ವಲ್, ಶ್ರೀ ನಾರಾಯಣ ಗುರು ಅಭಿವೃದ್ಧಿ ನಿಗಮ–ಮಂಜುನಾಥ ಪೂಜಾರಿ, ರಾಜ್ಯ ಸಿರಿಧಾನ್ಯ ಅಭಿವೃದ್ಧಿ ಮಂಡಳಿ(ಕಲಬುರಗಿ)–ಸೈಯದ್ ಮೆಹ್ಮೂದ್ ಚಿಸ್ತಿ, ರಾಜ್ಯ ಸವಿತಾ ಸಮಾಜ ಅಭಿವೃದ್ಧಿ ನಿಗಮ–ಎಂ.ಎಸ್.ಮುತ್ತುರಾಜ್.ರಾಜ್ಯ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮ–ನಂಜಪ್ಪ, ರಾಜ್ಯ ಗಾಣಿಗ ಅಭಿವೃದ್ಧಿ ನಿಗಮ–ವಿಶ್ವಾಸ್ ದಾಸ್, ರಾಜ್ಯ ಸಂಯಮ ಮಂಡಳಿ–ಆರ್.ಎಸ್.ಸತ್ಯನಾರಾಯಣ, ರಾಜ್ಯ ರೇಷ್ಮೆ ಮಾರುಕಟ್ಟೆ ಮಂಡಳಿ–ಗಂಗಾಧರ್, ಹಾಸನ ನಗರಾಭಿವೃದ್ಧಿ ಪ್ರಾಧಿಕಾರ–ಶಿವಪ್ಪ, ರಾಜ್ಯ ಲಿಂಬೆ ಅಭಿವೃದ್ಧಿ ಮಂಡಳಿ–ಬಿ.ಎಸ್.ಕವಲಗಿ.ಕುಂಬಾರ ಅಭಿವೃದ್ಧಿ ನಿಗಮ–ಡಾ.ಶ್ರೀನಿವಾಸ ವೇಲು, ರಾಜ್ಯ ಕನಿಷ್ಠ ವೇತನ ಮಂಡಳಿ–ಟಿ.ಎಂ.ಶಾಹಿದ್ ಟೆಕ್ಕಿಲ್, ರಾಜ್ಯ ಕೈಮಗ್ಗ ಮೂಲಸೌಕರ್ಯ ಮಂಡಳಿ–ಚೇತನ್ ಕೆ.ಗೌಡ, ರಾಜ್ಯ ಕೃಷಿ ಉತ್ಪನ್ನ ಸಂಸ್ಕರಣೆ ಮತ್ತು ರಫ್ತು ಮಂಡಳಿ–ಶರಣಪ್ಪ ಸಲಾದ್ಪುರ್ ಅವರ ಹೆಸರನ್ನು ಕಾಂಗ್ರೆಸ್ ಹೈಕಮಾಂಡ್ ಅಂತಿಮಗೊಳಿಸಿ ಪ್ರಕಟಿಸಿದೆ.

## ಜಾತಿ ಗಣತಿಗೆ ತಡೆ ಕೋರಿ ಅರ್ಜಿ ಇಂದು ಮತ್ತೆ ವಿಚಾರಣೆ

**ಬೆಂಗಳೂರು:** ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ನಡೆಸುತ್ತಿರುವ ಸಾಮಾಜಿಕ–ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆ(ಜಾತಿ ಗಣತಿ)ಗೆ ತಡೆ ಕೋರಿ ಸಲ್ಲಿಸಲಾಗಿದ್ದ ಅರ್ಜಿಗಳನ್ನು ಹೈಕೋರ್ಟ್ ಬುಧವಾರ ವಿಚಾರಣೆ ನಡೆಸಿತು.

ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಮತ್ತು ನ್ಯಾಯಮೂರ್ತಿ ಸಿ ಎಂ ಜೋಶಿ ಅವರನ್ನೊಳಗೊಂಡ ವಿಭಾಗೀಯ ಪೀಠ, ವಿವರವಾದ ವಾದಗಳನ್ನು ಆಲಿಸಿತು. ಆದರೆ ಯಾವುದೇ ಮಧ್ಯಂತರ ತಡೆ ನೀಡದೆ ವಿಚಾರಣೆಯನ್ನು ಗುರುವಾರಕ್ಕೆ ಮುಂದೂಡಿತು.

ರಾಜ್ಯ ಸರ್ಕಾರದ ಪರವಾಗಿ ವಾದ ಮಂಡಿಸಿದ ಹಿರಿಯ ವಕೀಲ ಅಭಿಷೇಕ್ ಮನು ಸಿಂಘ್ವಿ, ಈ ಅರ್ಜಿಗಳು ಯಾವುದೇ ಸಾಂವಿಧಾನಿಕ ನಿಬಂಧನೆಗಳನ್ನು ಅಥವಾ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ ಕಾಯ್ದೆ, 1995 ರ ನಿರ್ದಿಷ್ಟ ವಿಭಾಗಗಳನ್ನು ಗುರಿಯಾಗಿಸಿಕೊಂಡಿಲ್ಲ. ಆದರೆ ವಾಸ್ತವವಾಗಿ ಸರ್ಕಾರ ಅಧಿಕಾರ ಚಲಾಯಿಸುವುದನ್ನು ತಡೆಯಲು ಪ್ರಯತ್ನಿಸುತ್ತಿವೆ ಎಂದು ಹೇಳಿದರು.

**ಜಾತಿ ಗಣತಿಗೆ ತಡೆ ಕೋರಿ ಅರ್ಜಿ;** ವಿಚಾರಣೆ ನಾಳೆಗೆ ಮುಂದೂಡಿದ ಹೈಕೋರ್ಟ್ಅರ್ಜಿದಾರರು ಎತ್ತಿರುವ ಆಕ್ಷೇಪಣೆಗಳು, ಸಮೀಕ್ಷೆಯು "ಅವೈಜ್ಞಾನಿಕ" ಎಂಬ ಸಾಮಾನ್ಯ ಆರೋಪಗಳಾಗಿವೆ. ಸಮೀಕ್ಷೆಯ ವರದಿಯನ್ನು ಸಾರ್ವಜನಿಕಗೊಳಿಸಿದ ನಂತರ ಮಾತ್ರ ಇದನ್ನು ಪರಿಶೀಲಿಸಬಹುದು ಎಂದು ಅವರು ಸಮರ್ಥಿಸಿಕೊಂಡರು.

ಅರ್ಜಿದಾರರು ಸಮೀಕ್ಷೆಗಳನ್ನು ನಡೆಸುವ ಸರ್ಕಾರದ ಅಧಿಕಾರವನ್ನು ಪ್ರಶ್ನಿಸುತ್ತಿಲ್ಲ. ಆದರೆ ಜಾತಿಗಳ ಸಂಖ್ಯೆಯಲ್ಲಿನ ಹಠಾತ್ ಹೆಚ್ಚಳ ಮತ್ತು ಆಪಾದಿತ ರಾಜಕೀಯ ಉದ್ದೇಶಗಳನ್ನು ಉಲ್ಲೇಖಿಸಿ ಕಾರ್ಯಗತಗೊಳಿಸುವ ವಿಧಾನವನ್ನು ಪ್ರಶ್ನಿಸಿದ್ದಾರೆ ಎಂದು ಪೀಠ ಸ್ಪಷ್ಟಪಡಿಸಿತು. **ಕರ್ನಾಟಕ ಜಾತಿ ಗಣತಿ:** ಕ್ರಿಶ್ಚಿಯನ್ ಟ್ಯಾಗ್ ಹೊಂದಿರುವ 14 ಜಾತಿಗಳನ್ನು ಕೈಬಿಟ್ಟ ಆಯೋಗ; ಕೇಂದ್ರ ಸರ್ಕಾರದ ಪರವಾಗಿ ಹಾಜರಾದ ಹೆಚ್ಚುವರಿ ಸಾಲಿಸಿಟರ್ ಜನರಲ್ ಅರವಿಂದ್ ಕಾಮತ್, ಸಾಂವಿಧಾನಿಕ ಚೌಕಟ್ಟಿನಲ್ಲಿ ಕೇಂದ್ರ ಸರ್ಕಾರ 2027ರಲ್ಲಿ ಜನಗಣತಿ ಆರಂಭಿಸಲಿದೆ. ಜನಗಣತಿ ಜೊತೆಗೆ ಜಾತಿ ಗಣತಿಯನ್ನು ನಡೆಸಲಾಗುವುದು ಮತ್ತು ಇದು ಮಾತ್ರ ಜನಸಂಖ್ಯಾ ದತ್ತಾಂಶದ ಅಧಿಕೃತ ಮೂಲವೆಂದು ಪರಿಗಣಿಸಲಾಗುತ್ತದೆ ಎಂದು ವಾದಿಸಿದರು. ಕರ್ನಾಟಕ ಸರ್ಕಾರದ ಪ್ರಯತ್ನ "ಸಮೀಕ್ಷೆಯ ವೇಷ ಧರಿಸಿದ ಜನಗಣತಿ" ಎಂದು ಕಾಮತ್ ವಿವರಿಸಿದರು. ವಾದ, ಪ್ರತಿವಾದ ಆಲಿಸಿದ ಹೈಕೋರ್ಟ್, ವಿಚಾರಣೆಯನ್ನು ಗುರುವಾರ ಮುಂದೂಡಿದೆ.

## ಲಡಾಖ್ ಹಿಂಸಾಚಾರಕ್ಕೆ ನಾಲ್ವರು ಬಲಿ

**ಲಡಾಖ್:** ಲಡಾಖ್‌ಗೆ ರಾಜ್ಯದ ಸ್ಥಾನಮಾನ ಮತ್ತು ಆರನೇ ಪರಿಚ್ಛೇದದಡಿಯಲ್ಲಿ ಸೇರಿಸುವಂತೆ ಒತ್ತಾಯಿಸಿ ಬುಧವಾರ ನಡೆಸಲಾಗುತ್ತಿದ್ದ ಪ್ರತಿಭಟನೆ ಮತ್ತು ಬಂದ್ ಹಿಂಸಾಚಾರಕ್ಕೆ ತಿರುಗಿದ್ದು, ಬಿಜೆಪಿ ಕಚೇರಿ ಮತ್ತು ಹಲವಾರು ವಾಹನಗಳಿಗೆ ಬೆಂಕಿ ಹಚ್ಚಲಾಗಿದೆ. ಇಂದು ನೂರಾರು ಯುವಕರು ಬೀದಿಗಿಳಿದು ಪ್ರತಿಭಟನೆ ನಡೆಸಿದ್ದು, ಲೇಹ್ ಬಿಜೆಪಿ ಕಚೇರಿಗೆ ಬೆಂಕಿ ಹಚ್ಚಿ, ಪೊಲೀಸ್ ವಾಹನಗಳ ಮೇಲೆ ಕಲ್ಲು ತೂರಾಟ ಸಹ ನಡೆಸಿದರು. ಪರಿಸ್ಥಿತಿ ನಿಯಂತ್ರಿಸಲು ಪೊಲೀಸರು ಅಶ್ರುವಾಯು ಶೆಲ್‌ಗಳನ್ನು ಹಾರಿಸಿ ಲಾಠಿ ಪ್ರಹಾರ ನಡೆಸಿದರು.

ಲೇಹ್ ಪಟ್ಟಣದಲ್ಲಿ ಲೇಹ್ ಅಪೆಕ್ಸ್ ಬಾಡಿ(ಐಂಃ) ಪ್ರಾಯೋಜಿತ ಬಂದ್ ಸಂದರ್ಭದಲ್ಲಿ ಪ್ರತಿಭಟನಾಕಾರರು ಮತ್ತು ಭದ್ರತಾ ಸಿಬ್ಬಂದಿಗಳ ನಡುವೆ ನಡೆದ ಘರ್ಷಣೆಯಲ್ಲಿ ಕನಿಷ್ಠ ನಾಲ್ವರು ಸಾವನ್ನಪ್ಪಿ, 30 ಮಂದಿ ಗಾಯಗೊಂಡಿದ್ದಾರೆ.

## ರಸ್ತೆಗುಂಡಿ ಮುಚ್ಚಿ ಸರ್ಕಾರದ ವಿರುದ್ಧ ಬಿಜೆಪಿ ಆಕ್ರೋಶ

**ಬೆಂಗಳೂರು:** ರಾಜಧಾನಿಯ ರಸ್ತೆಗಳಲ್ಲಿನ ಗುಂಡಿ ಮುಚ್ಚುವ ಮೂಲಕ ಆಕ್ರೋಶ ಹೊರಹಾಕಿರುವ ರಾಜ್ಯ ಬಿಜೆಪಿ ನಾಯಕರು, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಿವಾಸದ ರಸ್ತೆ ಸೇರಿದಂತೆ ಬೆಂಗಳೂರಿನ ಪ್ರಮುಖ ರಸ್ತೆಗಳಲ್ಲಿ ಗುಂಡಿ ಮುಚ್ಚುವ ಅಭಿಯಾನ ನಡೆಸಿದರು.

ಹೆಗಲ ಮೇಲಿದ್ದ ಶಾಲನ್ನು ಸೊಂಟಕ್ಕೆ ಬಿಗಿದು, ಗುದ್ದಲಿ–ಬಾಣಲೆ ಹಿಡಿದ ಬಿಜೆಪಿ ನಾಯಕರು, ರಸ್ತೆಗುಂಡಿಗೆ ಜಲ್ಲಿಕಲ್ಲು, ಮರಳು, ಸಿಮೆಂಟ್, ಡಾಂಬರು ಸುರಿದು ಮುಚ್ಚುವ ಕಾರ್ಯದಲ್ಲಿ ತೊಡಗಿಕೊಂಡರು. ಇದ್ದಕ್ಕಿದ್ದಂತೆ ನಗರದ ಹಲವೆಡೆ ಬಿಜೆಪಿ ನಾಯಕರು ರಸ್ತೆಗಿಳಿದು, ಡಾಂಬರು ಲಾರಿಗಳನ್ನು ತರಿಸಿದ್ದು ಕಂಡು ಸಂಚಾರ ಪೊಲೀಸರು, ಸಾರ್ವಜನಿಕರೂ ಅಚ್ಚರಿಗೊಂಡರು. ಬಿಜೆಪಿಯ ವಿನೂತನ ಪ್ರತಿಭಟನೆಯು ಸಾರ್ವಜನಿಕರ ಗಮನ ಸೆಳೆದಿದೆ.



ಬನಶಂಕರಿಯ ಕಾಮಾಕ್ಯ ಲೇಔಟ್ ಬಳಿ ರಸ್ತೆ ತಡೆ ಚಳವಳಿಯ ಜತೆಗೆ ಗುಂಡಿ ಮುಚ್ಚುವ ಅಭಿಯಾನದಲ್ಲಿ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ ಪಾಲ್ಗೊಂಡರೆ, ಸದಾಶಿವನಗರ 18ನೇ ಅಡ್ಡರಸ್ತೆಯಲ್ಲಿನ ಗಿರಿಯಾಸ್ ಶೋ ರೂಮ್ ಬಳಿ ರಸ್ತೆ ಗುಂಡಿ ಮುಚ್ಚುವ ಅಭಿಯಾನದಲ್ಲಿ ಮೇಲ್ಮನೆ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಭಾಗಿಯಾದರು. ಅದೇ ರೀತಿ ಚಿಕ್ಕಪೇಟೆಯಲ್ಲಿ ಸಂಸದ ಪಿ.ಸಿ. ಮೋಹನ್, ಛಲವಾದಿ ನಾರಾಯಣಸ್ವಾಮಿ, ರಾಜ್ಯ ಉಪಾಧ್ಯಕ್ಷ ಎನ್.ಮಹೇಶ್ ಸೇರಿದಂತೆ ಇನ್ನಿತರರು ಭಾಗಿಯಾದರೆ, ಶ್ರೀಕಂಠೀರವ ಸ್ಟುಡಿಯೋ ರಸ್ತೆಯಲ್ಲಿ ಮಾಜಿ ಶಾಸಕ ನೆ.ಲ. ನರೇಂದ್ರಬಾಬು, ಮಾಜಿ ಉಪಮೇಯರ್ ಎಸ್.ಹರೀಶ್ ಸೇರಿದಂತೆ ಮತ್ತಿತರರು ಗುಂಡಿ ಮುಚ್ಚಿದರು. ರಾಜ್ಯ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದ ಕಾರ್ಯಕರ್ತರು, ಮುಚ್ಚಿ ಮುಚ್ಚಿ ಗುಂಡಿ ಮುಚ್ಚಿ... ಉಳಿಸಿ ಉಳಿಸಿ ಬೆಂಗಳೂರು ಉಳಿಸಿ... ಎಂಬ ಉದ್ಘೋಷಗಳೊಂದಿಗೆ ಕರಸೇವೆ ಮಾಡಿದರು. ಗುಂಡಿಗಳ ಸುತ್ತ ಪೈಂಟ್ ಬಳಿಯುವ ಮೂಲಕ ವಾಹನ ಸವಾರರು, ಸಾರ್ವಜನಿಕರಿಗೆ ಜಾಗೃತಿ ಮೂಡಿಸಿದರು. ರಾಜ್ಯದ ರಸ್ತೆಗಳ ಅಭಿವೃದ್ಧಿಗೆ ಹಣ ಇಲ್ಲ... ಜೀವಕ್ಕೆ ಗ್ಯಾರಂಟಿ ಇಲ್ಲ.. ಗುಂಡಿಗಳ ಊರು ಎನ್ನುವ ಘೋಷವಾಕ್ಯಗಳುಳ್ಳ ಫಲಕಗಳನ್ನು ಮುಚ್ಚಿದ ಗುಂಡಿಗೆ ಅಳವಡಿಸಿದರು. ಇದು ಸಾಂಕೇತಿಕ ಹೋರಾಟವಾಗಿದ್ದು, ಸರ್ಕಾರ ಎಚ್ಚೆತ್ತುಕೊಳ್ಳದಿದ್ದರೆ ಈ ಹೋರಾಟವನ್ನು ತೀವ್ರಗೊಳಿಸುವ ಎಚ್ಚರಿಕೆಯನ್ನೂ ನೀಡಿದರು.

## ಹಿರಿಯ ಸಾಹಿತಿ ಎಸ್‌ಎಲ್ ಭೈರಪ್ಪ ವಿಧಿವಶ

**ಬೆಂಗಳೂರು:** ಸರಸ್ವತಿ ಸಮ್ಮಾನ್, ಪದ್ಮಭೂಷಣ ಪ್ರಶಸ್ತಿ ಪುರಸ್ಕೃತ, ಹಿರಿಯ ಸಾಹಿತಿ, ಎಸ್‌ಎಲ್ ಭೈರಪ್ಪ (94) ಇಂದು ನಿಧನರಾದರು.

ಪರ್ವ, ಉತ್ತರಕಾಂಡ, ವಂಶವೃಕ್ಷ, ಆವರಣ ಸೇರಿ ಹಲವು ಕೃತಿಗಳನ್ನು ಎಸ್‌ಎಲ್ ಭೈರಪ್ಪ ರಚಿಸಿದ್ದರು. ಗೃಹ ಭಂಗ ಕಾದಂಬರಿ ಧಾರಾವಾಹಿಯಾಗಿದ್ದರೆ, ವಂಶವೃಕ್ಷ, ತಬ್ಬಲಿಯು ನೀನಾದೆ ಮಗನೆ ಕಾದಂಬರಿಗಳು ಸಿನಿಮಾಗಳಾಗಿವೆ. ಇಂದಿಗೂ ಕೂಡ ಎಸ್‌ಎಲ್ ಭೈರಪ್ಪನವರ ಕೃತಿಗಳು ಜನಮಾನಸದಲ್ಲಿ ಅಚ್ಚಳಿಯದೇ ಉಳಿದಿವೆ.

ಮೈಸೂರಿನಲ್ಲಿ ವಾಸವಿದ್ದ ಎಸ್‌ಎಲ್ ಭೈರಪ್ಪ ಹಲವು ದಿನಗಳಿಂದ ಅನಾರೋಗ್ಯಕ್ಕೆ ಒಳಗಾಗಿದ್ದರು. ಎಸ್‌ಎಲ್ ಭೈರಪ್ಪ ಅವರ ಅನೇಕ ಕೃತಿಗಳು ಮರಾಠಿ, ಗುಜರಾತ್ ಸೇರಿದಂತೆ ದೇಶದ ಅನೇಕ ಭಾಷೆಗಳಿಗೆ ಅನುವಾದಗೊಂಡಿವೆ.

ಬೆಂಗಳೂರಿನ ರಾಜರಾಜೇಶ್ವರಿ ನಗರದ ರಾಷ್ಟ್ರೋತ್ಥಾನ ಆಸ್ಪತ್ರೆಯಲ್ಲಿ ಎಸ್ ಎಲ್ ಭೈರಪ್ಪ ನಿಧನರಾಗಿದ್ದಾರೆ.

ಹಾಸನ ಜಿಲ್ಲೆ ಚನ್ನರಾಯಪಟ್ಟಣದ ಸಂತೇಶಿವರದಲ್ಲಿ 20ಅಗಸ್ಟ 1931 ರಂದು ಹುಟ್ಟಿದ ಭೈರಪ್ಪನವರು ಪ್ರಾಥಮಿಕ ಶಿಕ್ಷಣವನ್ನು ಹುಟ್ಟೂರಿನಲ್ಲೇ ಪಡೆದರು. ಕಿತ್ತು ತಿನ್ನುವ ಬಡತನ, ಪ್ಲೇಗ್ ಮಾರಿಯಿಂದ ತತ್ತರಗೊಂಡ ಪರಿಸರದಲ್ಲೂ ಅವರ ಸಣ್ಣ ವಯಸ್ಸಿನಲ್ಲೇ ಅವರ ತಾಯಿಯ ಧೀಮಂತಿಕೆಯನ್ನು ಮೈಗೂಡಿಸಿಕೊಂಡರು. ಅತ್ಯಂತ ಬಡತನದಲ್ಲೇ ಪ್ರೌಢ ಶಿಕ್ಷಣ ಹಾಗೂ ಕಾಲೇಜು ವ್ಯಾಸಂಗವನ್ನು



ಮೈಸೂರಿನಲ್ಲಿ ಮುಂದುವರೆಸಿದ ಭೈರಪ್ಪನವರು ಎಂ.ಎ.ನಲ್ಲಿ ಸುವರ್ಣ ಪದಕದೊಂದಿಗೆ ತೇರ್ಗಡೆಯಾದರು. ಬರೋಡಾದ ಮಹಾರಾಜ ಸಯ್ಯಾಜಿರಾವ್ ವಿಶ್ವವಿದ್ಯಾಲಯದಿಂದ "ಸತ್ಯ ಮತ್ತು ಸೌಂದರ್ಯ", ಎಂಬ ಇಂಗ್ಲಿಷ್‌ನಲ್ಲಿ ರಚಿಸಿದ ಮಹಾ ಪ್ರಬಂಧಕ್ಕಾಗಿ ಡಾಕ್ಟರೇಟ್ ಪದವಿ ಗಳಿಸಿದರು.

ಹುಬ್ಬಳ್ಳಿ, ಗುಜರಾತಿನ ಸರದಾರ್ ಪಟೇಲ್ ವಿಶ್ವ ವಿದ್ಯಾಲಯ, ದೆಹಲಿಗಳಲ್ಲಿ ತಮ್ಮ ಉಪನ್ಯಾಸಕ ವೃತ್ತಿ ಕೈಗೊಂಡ ಭೈರಪ್ಪನವರು, ಶಾಸ್ತ್ರಿಯ ಶಿಸ್ತಿನ ಓದಿನ ನಡುವೆ ಮಹತ್ವದ ಕಾದಂಬರಿಗಳನ್ನು ರಚಿಸಿದ್ದಾರೆ. 1961 ರಲ್ಲಿ 'ಧರ್ಮಶ್ರೀ' ಕಾದಂಬರಿ ಪ್ರಕಟಿಸಿ ಇದುವರೆವಿಗೆ ನಾಲ್ಕು ದಶಕಗಳಲ್ಲಿ 21 ಕಾದಂಬರಿಗಳನ್ನು ಬರೆದಿದ್ದಾರೆ. ವಂಶವೃಕ್ಷ, ತಬ್ಬಲಿಯು ನೀನಾದೆ ಮಗನೆ, ಮತದಾನ ಕಾದಂಬರಿಗಳು ಚಲನಚಿತ್ರವಾಗಿ ಪ್ರಶಸ್ತಿ ಗಳಿಸಿವೆ. ವಂಶವೃಕ್ಷಕ್ಕೆ 1966 ರಲ್ಲಿ ರಾಜ್ಯ ಸಾಹಿತ್ಯ ಅಕಾಡೆಮಿ ಪ್ರಶಸ್ತಿ, 1975ರಲ್ಲಿ ದಾಟು ಕಾದಂಬರಿಗೆ ರಾಜ್ಯ ಹಾಗೂ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ದೊರೆತಿದೆ. 'ಪರ್ವ' ಭೈರಪ್ಪನವರು ರಚಿಸಿದ ಕಾದಂಬರಿಗಳಲ್ಲೇ ಭಾರೀ ಚರ್ಚೆಗೆ ಒಳಗಾದದ್ದು. ಮಹಾಭಾರತ ಕಾಲದ ಭಾರತೀಯ ಸಮಾಜದ ರೀತಿ ನೀತಿಗಳನ್ನೂ, ಆ ಕಾಲದ ಜೀವನ ಮೌಲ್ಯಗಳನ್ನು, ಮೃತ್ಯುವಿನ ರಹಸ್ಯಾತ್ಮಕತೆಯನ್ನು ಕಾದಂಬರಿಯಲ್ಲಿ ಅರ್ಥಪೂರ್ಣವಾಗಿ ಬಿಂಬಿಸಲಾಗಿದೆ.

### ಕನ್ನಡ ಸಾಹಿತ್ಯ ಲೋಕಕ್ಕೆ ತುಂಬಲಾರದ ನಷ್ಟ

**ಬೆಂಗಳೂರು:** ಸಾರಸ್ವತ ಲೋಕಕ್ಕೆ ಬಹಳಷ್ಟು ಕೊಡುಗೆ ನೀಡಿದ್ದ, ಕನ್ನಡದ ಶ್ರೇಷ್ಠ ಕಾದಂಬರಿಕಾರರು ಹಾಗೂ ಪದ್ಮಭೂಷಣ ಪ್ರಶಸ್ತಿ ಪುರಸ್ಕೃತರಾದ ಡಾ.ಎಸ್.ಎಲ್. ಭೈರಪ್ಪನವರ ನಿಧನಕ್ಕೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಅವರು ಸಂತಾಪ ವ್ಯಕ್ತಪಡಿಸಿದ್ದಾರೆ. ಪ್ರತಿಷ್ಠಿತ ಸರಸ್ವತಿ ಸಮ್ಮಾನ್ ಪ್ರಶಸ್ತಿ ಪುರಸ್ಕೃತರಾಗಿದ್ದ ಎಸ್.ಎಲ್. ಭೈರಪ್ಪನವರ ನಿಧನದ ಸುದ್ದಿ ತಿಳಿದು ಮನಸ್ಸಿಗೆ ನೋವಾಯಿತು.ಅಪಾರ ಅಭಿಮಾನಿಗಳನ್ನು ಹೊಂದಿದ್ದ ಭೈರಪ್ಪನವರ ನಿಧನದಿಂದ ಸಾಹಿತ್ಯಲೋಕ ಬಡವಾಗಿದೆ ಎಂದರು. ಈ ಸಂದರ್ಭದಲ್ಲಿ ಮೃತರ ಆತ್ಮಕ್ಕೆ ಶಾಂತಿ ಕೋರುತ್ತಾ, ಅವರ ಕುಟುಂಬಸ್ಥರಿಗೆ ನೋವು ಸಹಿಸುವ ಶಕ್ತಿ ನೀಡಲಿ ಎಂದು ಭಗವಂತನಲ್ಲಿ ಪ್ರಾರ್ಥಿಸುತ್ತೇನೆ ಎಂದು ಸಚಿವರು ತಿಳಿಸಿದ್ದಾರೆ.

### ಸಾಮಾಜಿಕ ಮಾಧ್ಯಮಗಳ ಮೇಲೆ ನಿಯಂತ್ರಣ ಅಗತ್ಯ

## ಅರ್ಜಿ ವಜಾಗೊಳಿಸದ ಹೈಕೋರ್ಟ್

**ಬೆಂಗಳೂರು:** ಮಾಹಿತಿ ತಂತ್ರಜ್ಞಾನ ಕಾಯ್ದೆ 2000 ರ ಸೆಕ್ಷನ್ 79(3)(b) ಅಡಿ ಟ್ವೀಟ್ ಗಳನ್ನು ನಿರ್ಬಂಧಿಸುವಂತೆ ಕೇಂದ್ರ ಸರ್ಕಾರ ಹೊರಡಿಸಿದ್ದ ಆದೇಶಗಳನ್ನು ಪ್ರಶ್ನಿಸಿ ಎಕ್ಸ್ ಸಂಸ್ಥೆ ಸಲ್ಲಿಸಿದ್ದ ಅರ್ಜಿಯನ್ನು ಕರ್ನಾಟಕ ಹೈಕೋರ್ಟ್ ಬುಧವಾರ ವಜಾಗೊಳಿಸಿದೆ.

ನಿರ್ಬಂಧಿಸುವ ಆದೇಶ ನೀಡುವ ಕೇಂದ್ರ ಸರ್ಕಾರದ ಸೆನ್ಸಾರ್‌ಶಿಪ್(ಸಹಯೋಗ್) ಪೋರ್ಟಲ್, ತನ್ನ ವಿರುದ್ಧ ಬಲವಂತದ ಅಥವಾ ಪೂರ್ವಾಗ್ರಹ ಪೀಡಿತ ಕ್ರಮ ಕೈಗೊಳ್ಳದಂತೆ ತಡೆಯುವಂತೆ ಎಕ್ಸ್ ಕಾರ್ಪ್ ನ್ಯಾಯಾಲಯವನ್ನು ಕೋರಿತ್ತು.

ಸಾಮಾಜಿಕ ಮಾಧ್ಯಮವನ್ನು ನಿಯಂತ್ರಿ ಸುವುದು ಅಗತ್ಯ. ವಿಶೇಷವಾಗಿ ಮಹಿಳೆ ಮತ್ತು ಮಕ್ಕಳ ಗೌರವ ಕಾಪಾಡಲು ಸಾಮಾಜಿಕ ಮಾಧ್ಯಮಗಳ ಮೇಲೆ ನಿಯಂತ್ರಣ ಅಗತ್ಯ. ಇಲ್ಲದಿದ್ದರೆ ಸಂವಿಧಾನದಲ್ಲಿ ನಿಗದಿಪಡಿಸಲಾದ ಘನತೆಯ ಹಕ್ಕನ್ನು ಹಳಿತಪ್ಪಿಸಲಾಗುತ್ತದೆ ಎಂದು ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರ ಪೀಠ ಹೇಳಿದೆ.

ಮಾಹಿತಿ ಮತ್ತು ಸಂವಹನ, ಅದರ ಹರಡುವಿಕೆ ಅಥವಾ ವೇಗವನ್ನು ಯಾವತ್ತೂ ನಿಯಂತ್ರಿಸದೆ ಬಿಟ್ಟಿಲ್ಲ. ಇದು ನಿಯಂತ್ರಣದ ವಿಷಯವಾಗಿದೆ. ತಂತ್ರಜ್ಞಾನವು ಸಂದೇಶವಾಹಕರಿಂದ ಅಂಚೆ ಸಾಧನಗಳವರೆಗೆ, ವಾಟ್ಸಾಪ್, ಇನ್‌ಸ್ಟಾಗ್ರಾಮ್



ಮತ್ತು ಸ್ನ್ಯಾಪ್‌ಚಾಟ್‌ಗಳ ಯುಗದವರೆಗೆ ಅಭಿವೃದ್ಧಿ ಹೊಂದಿದಾಗ, ಎಲ್ಲವನ್ನೂ ಜಾಗತಿಕವಾಗಿ ಮತ್ತು ಸ್ಥಳೀಯವಾಗಿ ಆಡಳಿತಗಳಿಂದ ನಿಯಂತ್ರಿಸಲಾಗಿದೆ. ಸಾಮಾಜಿಕ ತಾಣಗಳ ಮೇಲೆ ನಿಯಂತ್ರಣ ಹೇರುವುದು ಈ ಕಾಲದ ಅತ್ಯಂತ ಅವಶ್ಯವಾಗಿದೆ" ಎಂದು ನ್ಯಾಯಾಲಯ ತನ್ನ ಆದೇಶದಲ್ಲಿ ತಿಳಿಸಿದೆ.

ದೇಶದ ನಾಗರಿಕರು ಮತ್ತು ಟ್ವೀಟರ್ ಮಧ್ಯೆ ಸಹಯೋಗ್ ಪೋರ್ಟಲ್ ಭರವಸೆ ಬೆಳಕಾಗಿ ಕೆಲಸ ಮಾಡಲಿದೆ ಎಂದು ಹೈಕೋರ್ಟ್ ಹೇಳಿದೆ. ದೇಶದಲ್ಲಿ ಸೈಬರ್ ಕ್ರೈಮ್ ಗಳನ್ನು ತಡೆಯುವ ವ್ಯವಸ್ಥೆಯಾಗಿ ಸಹಯೋಗ್ ಪೋರ್ಟಲ್ ಕೆಲಸ ಮಾಡಲಿದೆ.

ಹೈಕೋರ್ಟ್ ಆದೇಶ ಪ್ರಶ್ನಿಸಿ ಟ್ವೀಟರ್ ಅಥವಾ ಎಕ್ಸ್ ಈಗ ಸುಪ್ರೀಂಕೋರ್ಟ್ ಮೆಟ್ಟಿಲೇರಬಹುದು. ಈ ಅವಕಾಶ ಕಾನೂನಿನಲ್ಲಿದೆ.

### ಮತದಾರ ಪಟ್ಟಿಯಿಂದ ಹೆಸರು ತೆಗೆದು ಹಾಕಲು

## ಚುನಾವಣಾ ಆಯೋಗ ಹೊಸ ವ್ಯವಸ್ಥೆ

**ನವದೆಹಲಿ:** ದೇಶಾದ್ಯಂತ ಭಾರೀ ವಿವಾದ ಸೃಷ್ಟಿಸಿರುವ ಮತದಾರರ ಪಟ್ಟಿಯಿಂದ ಹೆಸರುಗಳನ್ನು ತೆಗೆದು ಹಾಕುವ ಭಾರತೀಯ ಚುನಾವಣಾ ಆಯೋಗ ಹೊಸ ತಾಂತ್ರಿಕ ವ್ಯವಸ್ಥೆಯನ್ನು ಪರಿಚಯಿಸಿದೆ.

ಹೆಚ್ಚುತ್ತಿರುವ ದುರುಪಯೋಗವನ್ನು ತಡೆಗಟ್ಟಿ ಮತದಾರರಲ್ಲಿ ಅನುಮಾನವನ್ನು ನಿವಾರಿಸಿ ಹೆಚ್ಚು ಪಾರದರ್ಶಕತೆ ಉಂಟು ಮಾಡುವ ಸದುದ್ದೇಶದಿಂದ ಚುನಾವಣಾ ಆಯೋಗ ದುರುಪಯೋಗ ತಡೆಗಟ್ಟಲು ಇಸಿಐಎನ್‌ಇಟಿ ಪೋರ್ಟಲ್ ಮತ್ತು ಅರ್ಜಿಗಳಲ್ಲಿ ಇ–ಸೈನ್ ಎಂಬ ವಿನೂತನ ತಂತ್ರಜ್ಞಾನವನ್ನು ಪರಿಚಯಿಸಿದೆ.

ಇದರಿಂದಾಗಿ ಬರುವ ದಿನಗಳಲ್ಲಿ ಮತದಾರರ ಪಟ್ಟಿಯಿಂದ ಯಾರೊಬ್ಬರು ಅಷ್ಟು ಸುಲಭವಾಗಿ ತಮ ಹೆಸರುಗಳನ್ನು ತೆಗೆದು ಹಾಕುವುದಾಗಲಿ ಇಲ್ಲವೇ ಸೇರ್ಪಡೆ ಮಾಡಲು ಅವಕಾಶ ಇರುವುದಿಲ್ಲ. ಹೊಸದಾಗಿ ಮತದಾರರಪಟ್ಟಿಗೆ ಸೇರ್ಪಡೆಯಾಗುವವರು ತಮ ಹೆಸರುಗಳನ್ನು ನೊಂದಾಯಿಸಿಕೊಳ್ಳಲು ಅರ್ಜಿ ಸಲ್ಲಿಸುವವರು ತಮ ಆಧಾರ್‌ಲಿಂಕ್ ಮಾಡಲಾದ ಫೋನ್ ಸಂಖ್ಯೆಗಳನ್ನು ಬಳಸಿಕೊಂಡು ತಮ ಗುರುತನ್ನು ಬಳಸಬೇಕಾಗುತ್ತದೆ.ಈ ಹಿಂದೆ ಅರ್ಜಿದಾರರು ಯಾವುದೇ ಪರಿಶೀಲನೆ ಇಲ್ಲದೆ ಅರ್ಜಿಗಳನ್ನು ಸಲ್ಲಿಸಲು ಅವಕಾಶವಿತ್ತು. ಇದು ಮತದಾರರ ಗುರುತಿನಚೀಟಿಯ ದುರುಪಯೋಗವಾಗುವ ಸಾಧ್ಯತೆ ಇತ್ತು. ಇದನ್ನು ಮನಗಂಡೇ ಚುನಾವಣಾ ಆಯೋಗ ಇ–ಸೈನ್ ವ್ಯವಸ್ಥೆಯನ್ನು ಜಾರಿಗೆ ತಂದಿದೆ. ಸಾಮಾನ್ಯವಾಗಿ ಅರ್ಜಿದಾರರು ಚುನಾವಣಾ ಆಯೋಗದ ಅಪ್ಲಿಕೇಷನ್‌ಗಳು ಮತ್ತು ಪೋರ್ಟಲ್‌ನಲ್ಲಿ ಅಸ್ತಿತ್ವದಲ್ಲಿರುವ ಮತದಾರರ ಫೋಟೋ ಗುರುತಿನ ಚೀಟಿ(ಎಪಿಕ್) ಸಂಖ್ಯೆಯೊಂದಿಗೆ ಫೋನ್ ಸಂಖ್ಯೆಯನ್ನು ಲಿಂಕ್ ಮಾಡಿ ಅರ್ಜಿ ಹಾಕಿದ್ದರೆ ಸಾಕಿತ್ತು.

ಇದನ್ನು ತಡೆಗಟ್ಟುವ ಉದ್ದೇಶದಿಂದಲೇ ಚುನಾವಣಾ ಆಯೋಗ ವಿನೂತನವಾದ ವ್ಯವಸ್ಥೆಯನ್ನು ಜಾರಿ ಮಾಡಿದ್ದು, ದುರುಪಯೋಗವನ್ನು ತಡೆಗಟ್ಟಲು ಸಾಧ್ಯತೆ ಇದೆ ಎಂದು ಆಯೋಗ ಹೇಳಿಕೊಂಡಿದೆ.

### ರಾಜ್ಯದ ಅಯ್ಯಪ್ಪ ಸ್ವಾಮಿ ಭಕ್ತರಿಗೆ ಕೇಂದ್ರ ಸರ್ಕಾರದಿಂದ ಸಿಹಿಸುದ್ದಿ

## ಹುಬ್ಬಳ್ಳಿಯಿಂದ ಕೊಲ್ಲಂಗೆ ವಿಶೇಷ ರೈಲು

**ನವದೆಹಲಿ:** ರಾಜ್ಯದಿಂದ ಅಯ್ಯಪ್ಪ ಸ್ವಾಮಿ ದರ್ಶನಕ್ಕೆ ತೆರಳುವ ಭಕ್ತರಿಗೆ ಕೇಂದ್ರ ಸರ್ಕಾರ ದಸರಾ ಹಬ್ಬದಲ್ಲಿ ಸಿಹಿ ಸುದ್ದಿ ನೀಡಿದೆ. ಶಬರಿಮಲೈಗೆ ತೆರಳುವ ಯಾತ್ರಿಕರಿಗೆ ಅನುಕೂಲವಾಗುವಂತೆ ವಿಶೇಷ ರೈಲು ಸಂಚಾರ ಆರಂಭಿಸಿದೆ.

ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಅವರ ಪ್ರಯತ್ನದ ಫಲವಾಗಿ ಹುಬ್ಬಳ್ಳಿಯಿಂದ ಕೊಲ್ಲಂವರೆಗೆ 22 ಕೋಚ್‌ಗಳುಳ್ಳ ವಿಶೇಷ ರೈಲು ಸಂಚಾರಕ್ಕೆ ಕೇಂದ್ರ ಸರ್ಕಾರ ಸಮ್ಮತಿ ಸೂಚಿಸಿದ್ದು, ಇದೇ ಸೆಪ್ಟೆಂಬರ್ 28ರಿಂದ ಸಂಚಾರ ಆರಂಭಕ್ಕೆ ಕ್ರಮ ಕೈಗೊಳ್ಳಲಾಗಿದೆ.

ರಾಜ್ಯದ ಹುಬ್ಬಳ್ಳಿ, ಹಾವೇರಿ, ದಾವಣಗೆರೆ, ಬೀರೂರು, ಅರಸೀಕೆರೆ, ತುಮಕೂರು, ಬೆಂಗಳೂರು ಮಾರ್ಗವಾಗಿ ಹಾಗೂ ಕೃಷ್ಣರಾಜಪುರಂ, ಬಂಗಾರಪೇಟ್, ಸೇಲಂ, ಇರೋಡ್, ತಿರುಪುರ, ಪೊದನೂರ, ತ್ರಿಸ್ಸೂರ, ಅಲುವಾ, ಎರ್ನಾಕುಲಂ ಟೌನ್, ಕೊಟ್ಟಯಾಂ, ಚಂಗನಸ್ಸೇರಿ, ತಿರುವಳ್ಳಾ, ಚೆಂಗನ್ನೂರ್, ಕರುನಾಗಪಲ್ಲಿ, ಸಸ್ಥನಕೊಟ್ಟಾ ಮಾರ್ಗದಲ್ಲಿ ಈ ವಿಶೇಷ ರೈಲು ಸಂಚರಿಸಲಿದೆ. ಉತ್ತರ ಕರ್ನಾಟಕದ ವಾಣಿಜ್ಯ ನಗರಿ ಹುಬ್ಬಳ್ಳಿ ಮತ್ತು ಕೊಲ್ಲಮ್ಮ ಮಧ್ಯೆ ಪ್ರತಿ ಭಾನುವಾರ ಮತ್ತು ಸೋಮವಾರ ಈ ವಿಶೇಷ ಎಕ್ಸ್‌ಪ್ರೆಸ್ ರೈಲು ಒಟ್ಟು 14 ವಾರ ಸಂಚರಿಸಲಿದೆ ಎಂದು ರೈಲ್ವೆ ಇಲಾಖೆ ಮಾಹಿತಿ ನೀಡಿದೆ. ರೈಲು ಸಂಖ್ಯೆ 07313 ಸೆ.28ರಿಂದ ಪ್ರತಿ ಭಾನುವಾರ ಮಧ್ಯಾಹ್ನ 3.15ಕ್ಕೆ ಹುಬ್ಬಳ್ಳಿಯಿಂದ ಸಂಚರಿಸಲಿದ್ದರೆ, ರೈಲು ಸಂಖ್ಯೆ 07314 ಸೆ.29ರಿಂದ ಪ್ರತಿ ಸೋಮವಾರ ಸಂಜೆ 5 ಗಂಟೆಗೆ ಕೊಲ್ಲಂನಿಂದ ಸಂಚಾರ ಆರಂಭಿಸಲಿದೆ.



### ಸಚಿವರಿಗೆ ಅಭಿನಂದನೆ

ಇದೇ ವೇಳೆ ಸಚಿವ ಪ್ರಲ್ಹಾದ ಜೋಶಿ ಅವರು ತಮ್ಮ ಮನವಿಗೆ ಸ್ಪಂದಿಸಿ ರಾಜ್ಯದ ಶ್ರೀ ಅಯ್ಯಪ್ಪ ಭಕ್ತರಿಗೆ ವಿಶೇಷ ರೈಲು ಒದಗಿಸಿದ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಮತ್ತು ರಾಜ್ಯ ಸಚಿವ ವಿ.ಸೋಮಣ್ಣ ಅವರಿಗೆ ಧನ್ಯವಾದ ಅರ್ಪಿಸಿದ್ದಾರೆ.

ದಸರಾ ಹಬ್ಬದ ಈ ಸಂದರ್ಭದಲ್ಲಿ ಉತ್ತರ ಕರ್ನಾಟಕ ಸೇರಿದಂತೆ, ರಾಜ್ಯದಿಂದ ಸಂಚರಿಸುವ ಶ್ರೀ ಅಯ್ಯಪ್ಪ ಸ್ವಾಮಿ ಭಕ್ತರಿಗೆ ಅನುಕೂಲವಾಗುವಂತೆ ವಿಶೇಷ ರೈಲು ಸಂಚಾರ ವ್ಯವಸ್ಥೆಗಾಗಿ ಭಾರತೀಯ ಅಯ್ಯಪ್ಪ ಸೇವಾ ಸಂಘ ಸಚಿವ ಪ್ರಲ್ಹಾದ ಜೋಶಿ ಅವರಿಗೆ ಮನವಿ ಸಲ್ಲಿಸಿತ್ತು. ಈ ಹಿನ್ನೆಲೆಯಲ್ಲಿ ಸಚಿವ ಜೋಶಿ ಅವರು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಮತ್ತು ರಾಜ್ಯ ಸಚಿವ ವಿ.ಸೋಮಣ್ಣ ಅವರ ಗಮನ ಸೆಳೆದು ವಿಶೇಷ ರೈಲು ಸಂಚಾರ ಸೇವೆ ಕಲ್ಪಿಸಿದ್ದಾರೆ.

# ಪೋಷಣ ಅಭಿಯಾನ ಮಕ್ಕಳ ಆರೋಗ್ಯದ ಭವಿಷ್ಯ ರೂಪಿಸುವ ಹಾದಿ

**ಧಾರವಾಡ:** ಪೋಷಣ ಅಭಿಯಾನವು ಮಕ್ಕಳ ಭವಿಷ್ಯವನ್ನು ಬದಲಾಯಿಸುವ ಶಕ್ತಿಯುತ ಕಾರ್ಯಕ್ರಮವಾಗಿದೆ. ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು ಮತ್ತು ಆರೋಗ್ಯ ಸಿಬ್ಬಂದಿ ಒಟ್ಟಾಗಿ ಪೋಷಣ ಕಾರ್ಯದಲ್ಲಿ ನಿರಂತರ ಶ್ರಮಿಸುತ್ತಿದ್ದಾರೆ. ಇದರಿಂದ ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಸಾಧ್ಯವಾಗುತ್ತದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಭುವನೇಶ ಪಾಟೀಲ ಅವರು ಹೇಳಿದರು.

ಅವರು ಮಂಗಳವಾರ ಬೆಳಿಗ್ಗೆ ನಗರದ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಧಾರವಾಡ ಇವರ ಸಂಯುಕ್ತಾಶ್ರಯದಲ್ಲಿ ಜರುಗಿದ ಜಿಲ್ಲಾ ಮಟ್ಟದ 8 ನೇ ರಾಷ್ಟ್ರೀಯ ಪೋಷಣ ಮಾಸಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ, ಮಾತನಾಡಿದರು.

ವಿಶೇಷವಾಗಿ ಮಕ್ಕಳಿಗೆ ಆದಷ್ಟು ಸಕ್ಕರೆ ಆಹಾರ ಕಡಿಮೆ ಕೊಡಬೇಕು. ಶಿಶುವಿಗೆ ಮೊದಲ ಆರು ತಿಂಗಳು ತಾಯಿ ಹಾಲೇ ಶ್ರೇಷ್ಠ ಆಹಾರ. ಆ ನಂತರ ದ್ರವ ರೂಪದ ಪೌಷ್ಟಿಕ ಆಹಾರವನ್ನು ನೀಡಿದರೆ ಮಕ್ಕಳ ಆರೋಗ್ಯವೂ ಉತ್ತಮವಾಗಿರುತ್ತದೆ. ಹಸಿರು ಸೊಪ್ಪು, ಸಿರಿಧಾನ್ಯ, ಹಣ್ಣುಗಳು ನಮ್ಮ ಮನೆಗಳಲ್ಲಿ ದೊರೆಯುವ ಸರಳ ಪೋಷಕ ಆಹಾರ. ಇವುಗಳನ್ನು ಮಕ್ಕಳ ದಿನನಿತ್ಯದ ಆಹಾರದಲ್ಲಿ ಸೇರಿಸುವುದರಿಂದ ಪೌಷ್ಟಿಕತೆಯ ಕೊರತೆ ಆಗದಂತೆ ಮಾಡಬಹುದು ಎಂದು ಹೇಳಿದರು.



ಪೋಷಣ ಅಭಿಯಾನವು ಕೇವಲ ಒಂದು ದಿನಕ್ಕೆ ಮಾತ್ರ ಸೀಮಿತವಾಗಬಾರದು. ಶೇ.100 ಮಕ್ಕಳಿಗೂ ತಾಯಿ ಹಾಲು. ಶೇ.100 ಗರ್ಭಿಣಿಯರಿಗೂ ಪೌಷ್ಟಿಕಾಹಾರ ದೊರಕಬೇಕು. ಮತ್ತು ಎಲ್ಲರಲ್ಲಿಯೂ ಇದರ ಮಹತ್ಮದ ಅರಿವು ಮೂಡಿಸಬೇಕು ಎಂದು ಅವರು ಹೇಳಿದರು.

ಸಹಜವಾದ, ಪ್ರಕೃತಿಯ ಆಹಾರ ಸೇವನೆ ಮಾಡುವುದು ಆರೋಗ್ಯಕ್ಕೆ ಆಧಾರ. ಇಂದಿನ ಮಕ್ಕಳಿಗೆ ಸಿರಿಧಾನ್ಯಗಳ ಮಹತ್ವವೇ ತಿಳಿದಿಲ್ಲ. ಸಿರಿಧಾನ್ಯಗಳಲ್ಲಿ ಇರುವ ಪೌಷ್ಟಿಕಾಂಶ, ಶಕ್ತಿಯುತ ಗುಣಗಳನ್ನು ಅವರಿಗೆ ತಿಳಿಸಿಕೊಡುವುದು ನಮ್ಮ ಜವಾಬ್ದಾರಿ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಭುವನೇಶ ಪಾಟೀಲ ಅವರು ಹೇಳಿದರು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಪರಶುರಾಮ ಎಫ್. ದೊಡ್ಡಮನಿ ಅವರು ಮಾತನಾಡಿ, ಪೋಷಣೆಯ ಕೊರತೆಯಿಂದ ಮಕ್ಕಳ ದೈಹಿಕ ಮತ್ತು ಮಾನಸಿಕ ಬೆಳವಣಿಗೆ ಕುಂಠಿತವಾಗುತ್ತದೆ. ವಿಶೇಷವಾಗಿ ಗರ್ಭಿಣಿಯರು, ಶಿಶುಗಳು ಹಾಗೂ ಕುಮಾರಾಸ್ಥೆಯಲ್ಲಿರುವ ಮಕ್ಕಳಿಗೆ ಸಮತೋಲನ ಆಹಾರ, ಪೋಷಕಾಂಶಯುತ ಆಹಾರವು ಅವಶ್ಯವಾಗಿದೆ ಎಂದು ಹೇಳಿದರು.

ಪ್ರತಿ ಕುಟುಂಬದಲ್ಲಿ ದಿನನಿತ್ಯವೂ ಪೋಷಣದ ಪ್ರಗತಿ ನಡೆಯಬೇಕು. ನಮ್ಮ ಹಿರಿಯರೆಲ್ಲರೂ ಆರೋಗ್ಯದಿಂದ ಇದ್ದದ್ದು, ಅವರು ಸೇವಿಸಿದ ಆಹಾರದಿಂದ ಮತ್ತು ಆಹಾರ ಸೇವನೆ ಕ್ರಮ ಸರಳವಾಗಿದ್ದು, ಕಾಲಮಾನಕ್ಕೆ ತಕ್ಕಂತೆ ಆಹಾರ ಸೇವಿಸುತ್ತಿದ್ದರು. ಆದ್ದರಿಂದ ಮಕ್ಕಳಿಗೂ ಸಮಯೋಚಿತ, ಸರಿಯಾದ ಆಹಾರ ಪದ್ಧತಿ ಬೆಳೆಸುವುದು ಅತ್ಯಂತ ಅವಶ್ಯಕವಾಗಿದೆ ಎಂದು ಅವರು ಹೇಳಿದರು. ಕಾರ್ಯಕ್ರಮದಲ್ಲಿ ಅತಿಥಿಗಳು ಶಿಶುಗಳಿಗೆ ಅನ್ನಪ್ರಾಶನ ಮಾಡಿಸಿದರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಇದೇ ಸಂದರ್ಭದಲ್ಲಿ ಗರ್ಭಿಣಿ ಮಹಿಳೆಯರಿಗೆ ಸೀಮಂತ ಕಾರ್ಯಕ್ರಮವನ್ನು ಮಾಡಲಾಯಿತು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಡಾ. ಎಚ್.ಎಚ್.ಕುಕನೂರ ಅವರು ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಹಾಗೂ ಸುನಿತಾ ನಾಡಿಗೇರ ಅವರು ಕಾರ್ಯಕ್ರಮ ನಿರೂಪಿಸಿ, ವಂದಿಸಿದರು. ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ಡಾ. ಕಮಲಾ ಬೈಲೂರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ವಿಜಯಲಕ್ಷ್ಮೀ ಪಾಟೀಲ, ಹಾಗೂ ಎಲ್ಲ ತಾಲೂಕುಗಳ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ವೇದಿಕೆ ಮೇಲೆ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಮೇಲ್ವಿಚಾರಕರು, ಸಿಬ್ಬಂದಿ ವರ್ಗ ಹಾಗೂ ಗರ್ಭಿಣಿ ಮಹಿಳೆಯರು ಸೇರಿದಂತೆ, ಸಾರ್ವಜನಿಕರು ಉಪಸ್ಥಿತರಿದ್ದರು.

## ಲಿಂಗತ್ವ ಅಲ್ಪಸಂಖ್ಯಾತರ ಸಮೀಕ್ಷೆ: ನ.21 ಕೊನೆದಿನ

**ಧಾರವಾಡ:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ ಲಿಂಗತ್ವ ಅಲ್ಪಸಂಖ್ಯಾತರವರನ್ನು ಮುಖ್ಯ ವಾಹಿನಿಗೆ ತರಲು ಹಾಗೂ ಅಗತ್ಯವಾದ ಸೌಲಭ್ಯಗಳನ್ನು ಒದಗಿಸುವ ಸಲುವಾಗಿ ಮೂಲ ಹಂತದ ಸಮೀಕ್ಷೆಯು ಸೆಪ್ಟೆಂಬರ 15, 2025 ರಿಂದ ಪ್ರಾರಂಭವಾಗಿ ನವೆಂಬರ 21, 2025 ರವರೆಗೂ ನಡೆಯಲಿದ್ದು, ಜಿಲ್ಲೆಯಲ್ಲಿರುವ ಲಿಂಗತ್ವ ಅಲ್ಪಸಂಖ್ಯಾತರರು ಸಮೀಕ್ಷೆಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 0836-2447850 ಗೆ ಸಂಪರ್ಕಿಸಬಹುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಷ್ಟ್ರೀಯ ಶಿಶಿಕ್ಷು ಮೇಳ



**ಬೆಳಗಾವಿ:** ನಗರದ ಉದ್ಯಮಭಾಗದಲ್ಲಿರುವ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ (ಮಹಿಳಾ) ಯಲ್ಲಿ ಮಂಗಳವಾರ ಪ್ರಧಾನಮಂತ್ರಿ ರಾಷ್ಟ್ರೀಯ ಶಿಶಿಕ್ಷು ಮೇಳ– 2025 ಜರುಗಿತು.

ಉದ್ದಿಮೆದಾರ ಸೋಮಶೇಖರ ಚೌಲಗೆ ಅವರು ಕಾರ್ಯಕ್ರಮವನ್ನು ಉದ್ಘಾಟಿಸಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಆರ್. ಎಸ್. ಚಿಕ್ಕಮಠ, ಚಿದಾನಂದ ಬಾಕೆ, ತರಬೇತಿ ಅಧಿಕಾರಿಗಳಾದ ರಿಯಾಜ್ ಅಹ್ಮದ್ ಬುಯಾರ್, ಎಫ್. ಎಮ್. ಹವಾಲ್ದಾರ, ಉದ್ದಿಮೆದಾರರಾದ ಗಿರೀಶ ಎಮ್.ಇ, ರವಿ, ಜಿಲ್ಲಾ ಶಿಶಿಕ್ಷು ಸಲಹೆಗಾರರು ಸೇರಿದಂತೆ ಜಿಲ್ಲೆಯ ಸರ್ಕಾರಿ/ಅನುದಾನಿತ/ಖಾಸಗಿ ಕೈಗಾರಿಕಾ ಸಂಸ್ಥೆಗಳ ಮುಖ್ಯಸ್ಥರುಗಳು ಹಾಜರಿದ್ದರು.

## ತೇರದಾಳಕ್ಕೆ ಅಗ್ನಿಶಾಮಕ ದಳ ಕಟ್ಟಡಕ್ಕೆ ಅನುದಾನ ಮಂಜುರು



**ತೇರದಾಳ:** ತೇರದಾಳ ಅಗ್ನಿಶಾಮಕ ದಳ ಕಟ್ಟಡ ಹಾಗೂ ಸಿಬ್ಬಂದಿಗಳ ವಸತಿ ಗೃಹ ನಿರ್ಮಾಣಕ್ಕೆ ಸರಕಾರ 3ಕೋಟಿ ಅನುದಾನ ಮಂಜುರುಗೊಳಿಸಿರುವ ಹಿನ್ನಲೆಯಲ್ಲಿ ಅಗ್ನಿಶಾಮಕ ದಳಕ್ಕೆ ಕಂದಾಯ ಇಲಾಖೆ ನೀಡಿರುವ ಹನಗಂಡಿ ಸರ್ವೆ ನಂ 13ಅ ರಲ್ಲಿನ ಎರಡು ಎಕರೆ ಜಾಗದ ಸರಹದ್ದು ಗುರುತಿಸಲು ಬೆಳಗಾವಿ ವಿಭಾಗದ ಅರಣ್ಯ ಇಲಾಖೆ ಅಧಿಕಾರಿಗಳು ಹಾಗೂ ಕಂದಾಯ ಇಲಾಖೆ ಅಧಿಕಾರಿಗಳು ಜಂಟಿಯಾಗಿ ಸರ್ವೆ ಕೆಲಸ ಪ್ರಾರಂಭಿಸಿದ್ದಾರೆ.

ಕಂದಾಯ ಇಲಾಖೆಗೆ ಅರಣ್ಯ ಇಲಾಖೆ ಜಾಗ ಹೊಂದಿಕೊಂಡಿರುವುದರಿಂದ ಬೆಳಗಾವಿ ವಿಭಾಗದ ಅರಣ್ಯ ಇಲಾಖೆ ಅಧಿಕಾರಿಗಳು ಆಗಮಿಸಿದ್ದಾರೆ. ಸ್ಥಳಕ್ಕೆ ಬೇಟಿ ನೀಡಿದ ತಹಸೀಲ್ದಾರ್ ವಿಜಯಕುಮಾರ ಕಡಕೋಳ, ಅಗ್ನಿಶಾಮಕ ದಳಕ್ಕೆ ಜಾಗ ನೀಡಿ ಬಹಳ ದಿನಗಳಾಗಿದೆ. ಕಟ್ಟಡಕ್ಕೆ ಈಗ ಅನುದಾನವು ಬಂದಿದೆ. ಆದ್ದರಿಂದ ಸರ್ವೆ ಕಾರ್ಯವನ್ನು ಶೀಘ್ರದಲ್ಲಿ ಪೂರ್ಣಗೊಳಿಸಬೇಕು. ಕಟ್ಟಡ ಕಾಮಗಾರಿ ಪ್ರಾರಂಭಿಸಲು ಅನಕೂಲ ಆಗುತ್ತದೆ ಎಂದು ಹೇಳಿದರು. ಅಗ್ನಿಶಾಮಕ ದಳದ ಜಿಲ್ಲಾ ಅಧಿಕಾರಿ ಪ್ರಕಾಶ ಪವಾರ, ಸರಹದ್ದು ಗುರುತಿಸಿದ ಬಳಿಕ ಕಟ್ಟಡ ಪ್ರಾರಂಭಿಸಲು ನಾವು ಪ್ರಸ್ತಾವನೆ ಸಲ್ಲಿಸಬೇಕಾಗುತ್ತದೆ. ಕಾಮಗಾರಿ ಪ್ರಾರಂಭಿಸಲು ಮೇಲಾಧಿಕಾರಿಗಳ ಒತ್ತಡ ಕೂಡ ಇದೆ. ಆದ್ದರಿಂದ ಈ ಕುರಿತು ಸೂಕ್ತ ಕ್ರಮ ಕೈಗೊಳ್ಳಲು ತಹಸೀಲ್ದಾರ್ ಅವರಿಗೆ ಮನವಿ ಮಾಡಿದರು. ಬೆಳಗಾವಿ ಅರಣ್ಯ ಇಲಾಖೆ ಸರ್ವೆ ಅಧಿಕಾರಿ ಸಚಿನ ಪಾಟೀಲ, ತಾಲೂಕು ಕಂದಾಯ ಇಲಾಖೆ ಸರ್ವೆ ಅಧಿಕಾರಿ ಏಕನಾಥ ಮುಂಡಾಸ, ವಿಶಾಲ ರಾಠೋಡ, ಮುಖಂಡರಾದ ಗೌತಮ ರೋಡಕರ, ಕಾಶಿನಾಥ ರಾಠೋಡ, ಶಂಕರ ಕುಂಬಾರ, ಅಗ್ನಿಶಾಮಕ ದಳದ ರಮೇಶ ಚೌವಟೆ, ಗೋಪಾಲ ಮಾಂಗ ಹಾಗೂ ಮತ್ತಿತರಿದ್ದರು.

# ಕಾನೂನಿನ ಬಗ್ಗೆ ಮಾಹಿತಿ ನೀಡುವಲ್ಲಿ ಸ್ವಯಂ ಸೇವಕರ ಪಾತ್ರ ಬಹಳ ಮುಖ್ಯ

**ಕೊಪ್ಪಳ:** ಜನರ ಸಮಸ್ಯೆಗಳನ್ನು ತಿಳಿಯಲು ಮತ್ತು ಸರ್ಕಾರದ ವಿವಿಧ ಯೋಜನೆಗಳ ಬಗ್ಗೆ, ಕಾನೂನಿನ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ತಲುಪಿಸುವಲ್ಲಿ ಅರೆ ಕಾನೂನು ಸ್ವಯಂ ಸೇವಕರ ಪಾತ್ರ ಬಹಳ ಮುಖ್ಯವಾದದ್ದು, ಹಾಗಾಗಿ ರಾಜ್ಯದ ಎಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಲ್ಲಿ ಅರೆ ಕಾಲಿಕ ಸ್ವಯಂ ಸೇವಕರ ಹುದ್ದೆಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ಸದಸ್ಯರಾದ ನ್ಯಾ. ಶಶಿಧರ್ ಶೆಟ್ಟಿ ಹೇಳಿದರು.

ಅವರು ಮಂಗಳವಾರ ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ಕಛೇರಿ, ಬೆಂಗಳೂರಿನಿಂದ ರಾಜ್ಯದ ಎಲ್ಲಾ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಚೇರಿಯ ಸದಸ್ಯ ಕಾರ್ಯದರ್ಶಿಗಳು ಮತ್ತು ಮಾಧ್ಯಮ ಪ್ರತಿನಿಧಿಗಳೊಂದಿಗೆ ಆನ್ ಲೈನ್ ಸಭೆ ನಡೆಸಿ ಮಾತನಾಡಿದರು.

ಹಳ್ಳಿಯಲ್ಲಿ ಇನ್ನೂ ಹಲವಾರು ಜನರಿಗೆ ಜನನ ನೋಂದಣಿ ಹೇಗೆ ಮಾಡಿಸಬೇಕೆಂಬ ಮಾಹಿತಿ ಇಲ್ಲ. ಮಕ್ಕಳು ಕಳೆದು ಹೋದಾಗ ತಕ್ಷಣ ಮಾಹಿತಿ ಬಂದರೆ ಮಕ್ಕಳ ಕಲ್ಯಾಣ ಇಲಾಖೆಗೆ ಹಾಗೂ ಪೊಲೀಸ್ ಇಲಾಖೆಗಳಿಂದ ಸಹಾಯವನ್ನು ಪಡೆದು ಮಕ್ಕಳನ್ನು ಪತ್ತೆ ಹಚ್ಚಲು ಅನುಕೂಲವಾಗುತ್ತದೆ. ಕೆಲವೊಂದು ಪ್ರಕರಣಗಳಲ್ಲಿ ಮಾನಸಿಕ ಅಸ್ವಸ್ಥರನ್ನು ಮನೆಯಲ್ಲಿ ಕೂಡಿ ಹಾಕಿರುತ್ತಾರೆ. ಅಂತಹವರನ್ನು ಆಶಾ, ಅಂಗನವಾಡಿ



ಕಾರ್ಯಕರ್ತರು ಮತ್ತು ಅರೆ ಕಾನೂನು ಸ್ವಯಂ ಸೇವಕರ ಮೂಲಕ ಮಾಹಿತಿ ಪಡೆದು ಅವರನ್ನು ರಕ್ಷಣೆ ಮಾಡಲಾಗುತ್ತದೆ.

ಇನ್ನೂ ಬಹಳಷ್ಟು ಹಳ್ಳಿಯ ಜನರಿಗೆ ಅವರು ಎಲ್ಲಿ ಹೋಗಿ ಮಾಹಿತಿ ಪಡೆಯಬೇಕು ಎನ್ನುವ ಅರಿವು ಇರುವುದಿಲ್ಲ. ಈ ಕೆಲಸವನ್ನು ಅರೆ ಕಾನೂನು ಸ್ವಯಂ ಸೇವಕರು ಮಾಡಬೇಕು. ಸರ್ಕಾರದ ವಿವಿಧ ಯೋಜನೆಗಳ ಜೊತೆಗೆ ಕಾನೂನು ಅರಿವು ನೆರವಿನ ಮಾಹಿತಿ ಜನರಿಗೆ ತಿಳಿಸುವ ಕಾರ್ಯಕ್ರಮ ಹಮ್ಮಿಕೊಳ್ಳಬೇಕಿದೆ. ಹಳ್ಳಿಯಲ್ಲಿ ಇನ್ನೂ ಕೆಲವು ಕಡೆ ಅಲ್ಲಲ್ಲಿ ಬಾಲ್ಯ ವಿವಾಹಗಳು ನಡೆಯುತ್ತವೆ. ಅವುಗಳ ಮಾಹಿತಿಯನ್ನು ನಮ್ಮ ಸ್ವಯಂ ಸೇವಕರಿಂದ ಪಡೆದು ಅವುಗಳನ್ನು ನಿಲ್ಲಿಸಬಹುದು ಎಂದರು.

ಕೌಟುಂಬಿಕ ಕಲಹ, ಸಣ್ಣಪುಟ್ಟ ವಿಚಾರದ ಕಲಹಗಳನ್ನು ಕೋರ್ಟ್ ಮೆಟ್ಟಿಲು ಏರದೆ ಇಬ್ಬರು ಪಕ್ಷಗಾರರ ಸಮ್ಮುಖದಲ್ಲಿ ಪರಿಹಾರ ಆಗುವಂತಾಗಬೇಕು. ಬಾಲ ಕಾರ್ಮಿಕರು ಇಟ್ಟಂಗಿ ಭಟ್ಟಿ, ಅಗರಬತ್ತಿ ಕಾರ್ಖಾನೆ, ಹೋಟೆಲ್ ಸೇರಿದಂತೆ ಇತರೆ ಕಡೆಗಳಲ್ಲಿ ಕಂಡುಬರುತ್ತಾರೆ. ಅವರನ್ನು ಪತ್ತೆಹಚ್ಚಿ ಮುಖ್ಯ ವಾಹಿನಿಗೆ ತಂದು ಅವರಿಗೆ ಸಹಾಯ ಮಾಡಬೇಕು. ಇಂತಹ ಸೇವಾ ಮನೋಭಾವವುಳ್ಳ ಕಾರ್ಯಗಳ ಬಗ್ಗೆ ಆಸಕ್ತಿ ಹೊಂದಿದವರು ಸ್ವಯಂ ಇಚ್ಚೆಯಿಂದ ಅರೆ ಕಾನೂನು ಸ್ವಯಂ ಸೇವಕರ ಹುದ್ದೆಗಳಿಗೆ ಅರ್ಜಿಗಳನ್ನು ಸಲ್ಲಿಸಬಹುದು. ಇದಕ್ಕೆ ಯಾವುದೇ ಸಂಬಳ ಇರುವುದಿಲ್ಲ. ಅಕ್ಟೋಬರ್ 20 ರವರೆಗೆ ರಾಜ್ಯದಲ್ಲಿ ಅರ್ಜಿಗಳನ್ನು ಸಲ್ಲಿಸಲು ಕಾಲಾವಕಾಶವಿದೆ ಎಂದರು. ನಿವೃತ್ತ ಶಿಕ್ಷಕರು, ಮಾಜಿ ಪಂಚಾಯತ ಸದಸ್ಯರು, ನಿವೃತ್ತ ಸರಕಾರಿ ನೌಕರರು, ತೃತೀಯ ಲಿಂಗಿಗಳು, ಅಂಗನವಾಡಿ ಕಾರ್ಯಕರ್ತೆಯರು, ವೈದ್ಯರು, ಕಾನೂನು ವಿದ್ಯಾರ್ಥಿಗಳು, ಮಹಿಳಾ ಸಂಘಗಳ ಸದಸ್ಯರು, ನಿವೃತ್ತ ಸೈನಿಕರು ಸೇರಿದಂತೆ ಇತರರು ಅರೆ ಕಾನೂನು ಸ್ವಯಂ ಸೇವಕರ ಹುದ್ದೆಗಳಿಗೆ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಕೊಪ್ಪಳ ಜಿಲ್ಲೆಯಲ್ಲಿ ಇದಕ್ಕೆ ಅರ್ಜಿಗಳನ್ನು ಸಲ್ಲಿಸಲು ಅಕ್ಟೋಬರ್ 4 ವರೆಗೆ ಕಾಲಾವಕಾಶವಿದ್ದು ಜಿಲ್ಲಾ ಮತ್ತು ತಾಲ್ಲೂಕು ಕಾನೂನು ಸೇವಾ ಪ್ರಾಧಿಕಾರದ ಕಛೇರಿಯಲ್ಲಿ ಅರ್ಜಿಗಳನ್ನು ಪಡೆದು ಸಲ್ಲಿಸಬಹುದಾಗಿದೆ ಎಂದರು.

ಈ ಆನ್‌ಲೈನ್ ಸಭೆಯಲ್ಲಿ ರಾಜ್ಯ ಕಾನೂನು ಸೇವಾ ಪ್ರಾಧಿಕಾರ, ಬೆಂಗಳೂರು ಕಛೇರಿಯ ಶ್ರೀಧರ್ ಬಾಲಸುಬ್ರಹ್ಮಣ್ಯಂ ಹಾಗೂ ರಾಜ್ಯದ ಎಲ್ಲಾ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಮತ್ತು ಮಾಧ್ಯಮ ಪ್ರತಿನಿಧಿಗಳು ಉಪಸ್ಥಿತರಿದ್ದರು.

## ವಾಲ್ಮೀಕಿ ಜಯಂತಿ: ಪೂರ್ವಭಾವಿ ಸಭೆ

**ಬೈಲಹೊಂಗಲ:** 2025–26ನೇ ಸಾಲಿನಲ್ಲಿನ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಪ್ರತಿ ವರ್ಷ ಪದ್ದತಿಯಂತೆ ದಿ. 07/10/2025 ರಂದು ಬೈಲಹೊಂಗಲ ಹಾಗೂ ಚೆನ್ನಮ್ಮನ ಕಿತ್ತೂರಿನಲ್ಲಿ ಆಚರಣೆ ಮಾಡುವ ಉದ್ದೇಶದಿಂದ ಸದರಿ ಜಯಂತಿ ಆಚರಣೆ ಕುರಿತಂತೆ ಪೂರ್ವಸಿದ್ಧತಾ ಸಭೆಯನ್ನು ಸ. 25 ರಂದು ಚೆನ್ನಮ್ಮನ ಕಿತ್ತೂರಿನಲ್ಲಿ ಮತ್ತು ಸ. 26 ರಂದು ಮಧ್ಯಾಹ್ನ 4.00 ಗಂಟೆಗೆ ತಹಶೀಲ್ದಾರ ಸಭಾ ಭವನದಲ್ಲಿ ಕರೆಯಲಾಗಿದೆ. ಕಾರಣ ಈ ಸಭೆಗೆ ಸಾರ್ವಜನಿಕರು ಅಗತ್ಯ ಹಾಜರಾಗಿ ಸೂಕ್ತ ಸಲಹೆ– ಸೂಚನೆಗಳನ್ನು ನೀಡಬೇಕೆಂದು ತಾಲೂಕಾ ಸಮಾಜ ಕಲ್ಯಾಣಾಧಿಕಾರಿ ಗ್ರೇಡ್ 2 ನ ಮಲ್ಲಿಕಾರ್ಜುನ ಉಳ್ಳಾಗಡ್ಡಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಕಾರವಾರ:** ಜಿಲ್ಲೆಯಲ್ಲಿ ಅನಾರೋಗ್ಯದಿಂದ ಬಳಲುತ್ತಿರುವ ಮಾನಸಿಕ ಅಸ್ವಸ್ಥ ನಿರಾಶ್ರಿತರಿಗೆ ಉತ್ತಮ ಮಾನಸಿಕ ಆರೋಗ್ಯ ಸೇವೆಗಳನ್ನು ಸರ್ಕಾರೇತರ ಸಂಸ್ಥೆಗಳು ಅಗತ್ಯ ಮೂಲಭೂತ ಸೌಲಭ್ಯಗಳೊಂದಿಗೆ ಪುನರ್ವಸತಿಯನ್ನು ಕಾರವಾರ ವೈದ್ಯಕೀಯ ಮಹಾವಿದ್ಯಾಲಯ ಜಿಲ್ಲಾ ಆಸ್ಪತ್ರೆಯಲ್ಲಿ ಒದಗಿಸುವ ಬಗ್ಗೆ ಆಸಕ್ತ ಸರ್ಕಾರೇತರ ಸಂಸ್ಥೆಗಳಿಂದ Expression of Intrest (EOI) ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಇ–ಪ್ರೊಕ್ಯೂರಮೆಂಟ್ www.kppp.karnataka.gov.in ವೆಬ್‌ಸೈಟ್ ಅನ್ನು ನೋಡಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಷ್ಟ್ರೀಯ ಹೆದ್ದಾರಿ ಸಂಚಾರಕ್ಕೆ ಮುಕ್ತ

**ಕಾರವಾರ:** ರಾಮನಗರ ಗೋವಾ ರಾಷ್ಟ್ರೀಯ ಹೆದ್ದಾರಿ ಎನ್‌ಹೆಚ್–4ಎ ನೇದರಲ್ಲಿ ದಿನನಿತ್ಯ ಅಗತ್ಯ ಸೇವೆಗಳಡಿ ಬರುವ ತರಕಾರಿ ಲಘು ವಾಹನ, ಹಾಲಿನ ವಾಹನ ಹಾಗೂ ಇನ್ನಿತರ ಲಘು ವಾಹನಗಳ ಸಾರ್ವಜನಿಕ ಬಸ್ ಸಂಚಾರದ ಜೊತೆಗೆ 6 ಚಕ್ರದ ಸಾರಿಗೆ ವಾಹನ, ಅಧಿಕ ಭಾರದ ವಾಹನ/ಟ್ರಕ್‌ಗಳ ಸಂಚಾರಕ್ಕೆ ಅನುವು ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಕೆ. ಲಕ್ಷ್ಮೀಪ್ರಿಯಾ ಆದೇಶ ಹೊರಡಿಸಿದ್ದಾರೆ.




## ದಾಂಡಿಯಾ ನೃತ್ಯಕ್ಕೆ ಚಾಲನೆ

**ಗೋಕಾಕ:** ಬಣಜಿಗ ಸಮಾಜ ಮಹಿಳಾ ಘಟಕದವರು ನವರಾತ್ರಿ ಹಬ್ಬದ ನಿಮಿತ್ಯ ನಗರದ ಕೆಎಲ್‌ಇ ಶಾಲಾ ಆವರಣದಲ್ಲಿ ಮಂಗಳವಾರ ಹಮ್ಮಿಕೊಂಡ ದಾಂಡಿಯಾ ನೃತ್ಯಕ್ಕೆ ಉಪನ್ಯಾಸಕಿ ಜಯಶ್ರೀ ಕಡಕೋಳ ಚಾಲನೆ ನೀಡಿದರು. ಅಧ್ಯಕ್ಷೆ ಮಹಾದೇವಿ ಉಪ್ಪಿನ, ಕಾರ್ಯದರ್ಶಿ ಹರ್ಷಿತಾ ಸವಣೂರ, ರೂಪಾ ಮುನವಳ್ಳಿ, ದೀಪಾ ಬೆಲ್ಲದ, ಅಂಜಲಿ ಹತಪಾಕಿ ಸೇರಿದಂತೆ ಅನೇಕರು ಇದ್ದರು.

## ಸಹಾಯಧನ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

**ಬೆಳಗಾವಿ:** 2025–26 ನೇ ಸಾಲಿನ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮವು ರಾಜ್ಯದ ಮತೀಯ ಅಲ್ಪಸಂಖ್ಯಾತರಾದ ಮುಸ್ಲಿಂ, ಜೈನ, ಬೌದ್ಧ, ಸಿಖ್ಖರು, ಪಾರ್ಸಿ ಜನಾಂಗದವರ ಸಾಮಾಜಿಕ ಶೈಕ್ಷಣಿಕ ಮತ್ತು ಆರ್ಥಿಕ ಅಭಿವೃದ್ಧಿಗಾಗಿ ಅನುಷ್ಠಾನಗೊಳಿಸುತ್ತಿರುವ ರಾಜ್ಯ ಸರ್ಕಾರ ಪ್ರಾಯೋಜಿತ ವಿವಿಧ ಯೋಜನೆಗಳಡಿಯಲ್ಲಿ ಸಾಲ ಹಾಗೂ ಸಹಾಯಧನ ಸೌಲಭ್ಯ ಪಡೆಯಲು ಆನ್‌ಲೈನ ಮೂಲಕ ಅರ್ಜಿ ಆಹ್ವಾನಿಸಿದೆ. ಆಸಕ್ತ ಅಭ್ಯರ್ಥಿಗಳು ಅಕ್ಟೋಬರ, 16, 2025 ರ ಒಳಗಾಗಿ https://kmdconline.karnataka.gov.inಸೈಟ್‌ನ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಶ್ರಮಶಕ್ತಿ ಯೋಜನೆ, ವೃತ್ತಿ ಪ್ರೋತ್ಸಾಹ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ (ಪ್ಯಾಸೆಂಜರ ಅಟೋ ರಿಕ್ಷಾ/ಟ್ಯಾಕ್ಸಿ ಗೂಡ್ಸ), ನೇರಸಾಲ ವ್ಯಾಪಾರ ಉದ್ದಿಮೆ, ವಿದೇಶ ವ್ಯಾಸಂಗಕ್ಕೆ ಸಾಲ ಯೋಜನೆ, ಅಲ್ಪಸಂಖ್ಯಾತರ ಸಮುದಾಯದ ಮಹಿಳಾ ಸ್ವ ಸಹಾಯ ಸಂಘ ಯೋಜನೆ, ಸಾಂತ್ವನ ಯೋಜನೆಗಳಡಿಯಲ್ಲಿ ಸಾಲ ಹಾಗೂ ಸಹಾಯಧನ ಸೌಲಭ್ಯ ಪಡೆಯಲು ಆನ್‌ಲೈನ ಮೂಲಕ ಅರ್ಜಿ ಆಹ್ವಾನಿಸಿದೆ. ಹೆಚ್ಚಿನ ಮಾಹಿತಿಗಾಗಿ ಕಛೇರಿ ದೂರವಾಣಿ ಸಂಖ್ಯೆ : 0831–2950794 ಅಥವಾ ಜಿಲ್ಲಾ ವ್ಯವಸ್ಥಾಪಕರ ಕಚೇರಿಯನ್ನು ಹಾಗೂ ಮೌಲಾನಾ ಆಝಾದ ಅಲ್ಪಸಂಖ್ಯಾತರ ಭವನ, ಕೆ.ಎಸ್.ಸಿ.ಎ. ಕ್ರೀಡಾಂಗ ಎದುರುಗಡೆ, ರಾಮತೀರ್ಥ ನಗರ, ಬೆಳಗಾವಿ – (590016.) ಇಲ್ಲಿಗೆ ಸಂಪರ್ಕಿಸಬಹುದಾಗಿದೆ ಎಂದು ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ (ನಿ) ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಕ್ಕಳನ್ನು ಆರೋಗ್ಯವಂತರನ್ನಾಗಿಸಿ ಸ್ವಸ್ಥ ಸಮಾಜ ನಿರ್ಮಿಸಿ

**ಯರಗಟ್ಟಿ:** ಮಹಿಳೆಯರು ತಮ್ಮ ಜತೆಗೆ ಮಕ್ಕಳನ್ನು ಆರೋಗ್ಯವಂತರನ್ನಾಗಿಸುವ ಮೂಲಕ ಸ್ವಸ್ಥ ಸಮಾಜ ನಿರ್ಮಾಣಕ್ಕೆ ಮುಂದಾಗಬೇಕು ಎಂದು ಎಸಿಡಿಓ ವಾಸಂತಿ ಹಿರೇಮಠ ಹೇಳಿದರು.

ಪಟ್ಟಣದ ಲಕ್ಷ್ಮೀದೇವಿ ದೇವಸ್ಥಾನದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಮಂಗಳವಾರ ಆಯೋಜಿಸಿದ್ದ ಪೋಷಣಾ ಮಾಸಾಚರಣೆ, ಗರ್ಭಿಣಿ, ಬಾಣಂತಿಯರಿಗೆ ಸೀಮಂತ ಕಾರ್ಯಕ್ರಮ ಹಾಗೂ ಮಕ್ಕಳಿಗೆ ಅನ್ನ ಪ್ರಾಶನ ಕಾರ್ಯಕ್ರಮ ಉದ್ದೇಶಿಸಿ ಅವರು ಮಾತನಾಡಿದರು.

‘ಕೇಂದ್ರ ಸರ್ಕಾರ ಆಯೋಜಿಸಿರುವ ರಾಷ್ಟ್ರೀಯ ಪೋಷಣಾ ಅಭಿಯಾನ ಒಂದು ಮಹತ್ತರ ಕಾರ್ಯಕ್ರಮವಾಗಿದ್ದು ಬಾಲಕಿಯರು, ಗರ್ಭಿಣಿಯರು ಸೇರಿದಂತೆ ಮಹಿಳೆಯರು ಮತ್ತು ಮಕ್ಕಳನ್ನು ಅಪೌಷ್ಟಿಕತೆಯಿಂದ




ಮುಕ್ತಗೊಳಿಸುವ ಕಾರ್ಯಕ್ರಮವಾಗಿದ್ದು, ಮಹಿಳೆಯರು ಪೋಷಣಾ ಅಭಿಯಾನದಡಿ ದೊರೆಯುವ ಸವಲತ್ತುಗಳನ್ನು ಸಮರ್ಪಕವಾಗಿ ಬಳಸಿಕೊಂಡು ಆರೋಗ್ಯ ಕಾಪಾಡಿಕೊಳ್ಳಬೇಕು’ ಎಂದರು. ಮಾಜಿ ಗ್ರಾಮ ಪಂಚಾಯತಿ ಅಧ್ಯಕ್ಷೆ ಕಸ್ತೂರಿ ಕಡೆಮನಿ, ಪ. ಪಂ. ಮುಖ್ಯಾಧಿಕಾರಿ ಮಹೇಶ ಭಜಂತ್ರಿ, ಪ. ಪಂ. ಇಂಜಿನಿಯರ ವೆಂಕಟೇಶ ಕಾಮಣ್ಣವರ, ಪ. ಪಂ. ಸದಸ್ಯರಾದ ನಿಖಿಲ ಪಾಟೀಲ, ಹನಮಂತ ಹಾರೂಗೊಪ್ಪ, ಅಂಗನವಾಡಿ ಮೇಲ್ವಿಚಾರಕಿ ರಾಜಶ್ರೀ ತರಲಿ, ಪ. ಪಂ. ಅಧಿಕಾರಿಗಳು ಆನಂದ ಬೆಳವಿ, ಕೆ. ಬಿ. ಬೆಣ್ಣಿ, ಮಹಾದಪ್ಪ ಬಡಿಗೇರಿ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಎಂ. ಎಂ. ಅಂಗಡಿ, ಆರೋಗ್ಯ ಇಲಾಖೆ ಅಧಿಕಾರಿಯಾದ ಮಂಜುಳಾ ಈರಗಾರ, ಎಸ್. ಬಿ. ಬೆಂಡಿಗೇರಿ, ಸಿಎಚ್‌ಓ ರೂಪಾ ಹುಗ್ಗಿ ಅಂಗನವಾಡಿ ಕಾರ್ಯಕರ್ತೆಯರಾದ ನಂದಾ ಮುರಗೋಡ, ಲಲಿತಾ ಕರ್ಜಗಿಮಠ, ಜ್ಯೋತಿ ಮದ್ದಾನಿ, ಮೀನಾಕ್ಷಿ ಚನ್ನಮೇತ್ರಿ, ಮಮತಾಜ ನದಾಫ, ಹುಸೇನಬಿ ಹುಕ್ಕೇರಿ, ಶೈಲಾ ಕಿಲಾರಿ, ಗುರವ್ವ ಹೊಸಕೋಟಿ, ಮಹಾದೇವಿ ಹೊರಟ್ಟಿ ಮತ್ತು ಅಂಗನವಾಡಿ ಸಹಾಯಕಿಯರು ಇದ್ದರು.

# ಕೃಷಿ ಪತ್ತಿನ ಸಹಕಾರ ಸಂಘಕ್ಕೆ 24ಲಕ್ಷ ಲಾಭ




**ಗೋಕಾಕ:** ಪ್ರಸಕ್ತ ಸಾಲಿನಲ್ಲಿ ಗೋಕಾಕ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿಯಮಿತ ಗೋಕಾಕ 23.61 ಕೋಟಿ ವಹಿವಾಟು ನಡೆಸಿ 24ಲಕ್ಷ ಲಾಭಗಳಿಸಿ ಪ್ರಗತಿ ಪತದತ್ತ ಸಾಗುತ್ತಿದೆ ಎಂದು ಸಂಘದ ಅಧ್ಯಕ್ಷ ಬಸವರಾಜ ಭಂಡಾರಿ ಹೇಳಿದರು.

ಸೋಮವಾರದಂದು ನಗರದ ಗೋಕಾಕ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಕಾರ್ಯಾಲಯದಲ್ಲಿ 97ನೇ ವಾರ್ಷಿಕ ಸರ್ವ ಸಾಧಾರಣ ಸಭೆಯನ್ನು ಉದ್ಘಾಟಿಸಿ ಮಾತನಾಡಿ, ಸಂಘದ ಪ್ರಗತಿಗೆ ಸದಸ್ಯರು ಸಹರಿಸುವಂತೆ ಕೋರಿದರು. ಈ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ಪಿಯೂಸಿಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ನೀಡಿ ಸತ್ಕರಿಸಲಾಯಿತು. ಉಪಾಧ್ಯಕ್ಷೆ ಸರೋಜಿನಿ ಹೆಗ್ಗನ್ನವರ, ನಿರ್ದೇಶಕರುಗಳಾದ ಮಾರುತಿ ಜಡೇನ್ನವರ, ಗಜಾನನ ತಟ್ಟಿಮನಿ, ಚುನಪ್ಪ ಹಟ್ಟಿ, ಮದನ ಮಾವರಕರ, ಮಲ್ಲಿಕಾರ್ಜುನ ಪೂಜಾರಿ, ಸತ್ತೇಪ್ಪ ಸುಭಂಜಿ, ವಿಠ್ಠಲ ಉಳ್ಳಾಗಡ್ಡಿ, ಲಕ್ಷ್ಮಣ ಗೊರಗುದ್ದಿ, ಅನಸೂಯಾ ಧುಳಾಯಿ, ಲಲಿತಾ ಜೋಗೋಜಿ ಹಾಗೂ ಮುಖ್ಯಕಾರ್ಯನಿರ್ವಾಹಕಿ ಭಾರತಿ ಕೊಳವಿ ಇದ್ದರು.

### ಶ್ರೀ ಬನಶಂಕರಿ ಪತ್ತಿನ ಸಹಕಾರಿ ಸಂಘದ ಬೆಳ್ಳಿಹಬ್ಬ ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಎ.ಎಸ್.ಪಾಟೀಲ ನಡಹಳ್ಳಿ ಕರೆ

# ಸಹಕಾರಿ ರಂಗದಿಂದ ಬಡವರನ್ನು ಮೇಲೆತ್ತುವ ಕಾರ್ಯ ಆಗಲಿ

**ಮುದ್ದೇಬಿಹಾಳ:** 17ನೇ ಶತಮಾನದಲ್ಲಿ ವಿಶ್ವದ ಅತ್ಯಂತ ಹೆಚ್ಚು ಜಿಡಿಪಿ ಹೊಂದಿದ್ದ ರಾಷ್ಟ್ರ ಭಾರತ.ಆದರೆ ಕಾಲಾನುಕ್ರಮದಲ್ಲಿ ಹೆಚ್ಚಾದ ಜಾತಿ ವ್ಯವಸ್ಥೆಯಿಂದ ದೇಶದ ಆರ್ಥಿಕ ಅವನತಿ ಆಗಿತ್ತು ಎಂಬುದನ್ನು ನಾವೆಲ್ಲ ಮರೆಯಬಾರದು ಎಂದು ಮಾಜಿ ಶಾಸಕ ಎ.ಎಸ್.ಪಾಟೀಲ ನಡಹಳ್ಳಿ ಹೇಳಿದರು.

ಪಟ್ಟಣದ ರಾಘವೇಂದ್ರ ಮಂಗಲಭವನ ದಲ್ಲಿ ಶ್ರೀ ಬನಶಂಕರಿ ಪತ್ತಿನ ಸಹಕಾರಿ ಸಂಘದ ರಜತಮಹೋತ್ಸವ, ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಸಹಕಾರಿ ರಂಗದಲ್ಲಿ ಬಡವರನ್ನು ಮೇಲೆತ್ತಲು ಎಷ್ಟು ಸಾಧ್ಯವಿದೆಯೋ ಅವರನ್ನು ನಾವೆಲ್ಲ ಅಭಿವೃದ್ಧಿ ಮಾಡಿದರೆ ದೇಶವು ಅಭಿವೃದ್ಧಿ ದಿಕ್ಕಿನಲ್ಲಿ ಸಾಗುತ್ತದೆ.ಸಾಲ ಕೊಡಬೇಕಾದರೆ ರಾಷ್ಟ್ರೀಕೃತ ಬ್ಯಾಂಕುಗಳು ನೂರಾರು ಕಂಡಿಷನ್ಸ್ ಹಾಕುತ್ತವೆ.ಆದರೆ ಸಹಕಾರ ಸಂಘಗಳು,ಬ್ಯಾಂಕುಗಳು ವ್ಯಕ್ತಿಯ ಪ್ರಾಮಾಣಿಕತೆಯ ಮೇಲೆ ಸಾಲ ಸೌಲಭ್ಯ ಒದಗಿಸುತ್ತವೆ. ಜವಾಬ್ದಾರಿ ಇಲ್ಲದವರಿಗೆ ಸಾಲ




ಕೊಟ್ಟರೆ ಬ್ಯಾಂಕುಗಳು ದಿವಾಳಿಯಾಗುತ್ತವೆ ಎಂದು ಹೇಳಿದರು.

ದೇಶದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರಂತಹ ನಾಯಕ ಬಂದ ನಂತರ ಸಾಕಷ್ಟು ಬದಲಾವಣೆಯಾಗಿದ್ದು ಜನರಿಗೆ ಹೊರೆಯಾಗದಿರಲಿ ಎಂದು ಹಲವು ಜನೋಪಯೋಗಿ ಕಾರ್ಯಗಳನ್ನು ಹಮ್ಮಿಕೊಂಡಿದ್ದಾರೆ ಎಂದರು.

ಕರ್ನಾಟಕ ರಾಜ್ಯ ದೇವಾಂಗ ಸಂಘದ ರಾಜ್ಯಾಧ್ಯಕ್ಷ ರವೀಂದ್ರ ಕಲ್ಬುರ್ಗಿ ಮಾತನಾಡಿ, ಸಹಕಾರ ಸಂಘಗಳಲ್ಲಿ ಪ್ರಾಮಾಣಿಕತೆ ಇರಬೇಕು.ಆಡಳಿತ ಮಂಡಳಿಯವರು ಸಾಲದ ವಸೂಲಾತಿಗೆ ತೆರಳಿದರೆ ಸಂಘದ ಆರ್ಥಿಕ ಶಕ್ತಿ ಚೇತರಿಕೆ ಕಾಣುತ್ತದೆ. ಬನಶಂಕರಿ ಸಂಘದಿಂದ ಹೆಚ್ಚಿನ ವ್ಯವಹಾರ ವಿಸ್ತರಿಸುವ ಕಾರ್ಯ ಆಗಬೇಕು ಎಂದರು. ಡಿಸಿಸಿ ಬ್ಯಾಂಕ್ ನಿರ್ದೇಶಕ ಬಿ.ಎಸ್.ಪಾಟೀಲ ಯಾಳಗಿ ಮಾತನಾಡಿ, ಸಹಕಾರ ಸಂಘಗಳು ಅಭಿವೃದ್ಧಿ ಸಾಧಿಸಲು ಸರಿಯಾದ ಸಮಯಕ್ಕೆ ಸಾಲ ಮರುಪಾವತಿ ಜವಾಬ್ದಾರಿ ಬಹುಮುಖ್ಯ ಎಂದರು.

ದಿವ್ಯ ಸಾನಿಧ್ಯ ವಹಿಸಿದ್ದ ಹೊಸಮಠದ ಅಮರೇಶ್ವರ ದೇವರು, ಸಹಕಾರ ಸಂಘಗಳ ಜಿಲ್ಲಾ ಉಪನಿಬಂಧಕರಾದ ಭಾಗ್ಯಶ್ರೀ ಎಸ್. ಕೆ.,ನೇಕಾರ ಒಕ್ಕೂಟದ ಪ್ರಧಾನ ಕಾರ್ಯದರ್ಶಿ ಆನಂದ ಹುಲಮನಿ,ಬಾಗಲಕೋಟ ನೇಕಾರ ಸಮಾಜದ ಮುಖಂಡ ಈರಣ್ಣ ಚಲ್ಮಿ, ಉದ್ಯಮಿ ಸತೀಶ ಓಸ್ವಾಲ್, ಸಂಘದ ಮುಖ್ಯಕಾರ್ಯನಿರ್ವಹಣಾಧಿಕಾರಿ ವಿಜಯ ಲಕ್ಷ್ಮೀ ಪ್ಯಾಟಿಗೌಡರ ಮಾತನಾಡಿದರು.

ಪುರಸಭೆ ಅಧ್ಯಕ್ಷ ಮಹೆಬೂಬ ಗೊಳಸಂಗಿ, ಶ್ರೀ ಬನಶಂಕರಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಶಂಕರ ಈ.ಹೆಬ್ಬಾಳ, ಉಪಾಧ್ಯಕ್ಷ ರಮೇಶ ಹೆಬ್ಬಾಳ, ಸಹಕಾರ ಅಭಿವೃದ್ಧಿ ಅಧಿಕಾರಿ ವಿ.ಎಸ್.ಉತ್ನಾಳ, ದೇವಾಂಗ ಸಮಾಜದ ಜಿಲ್ಲಾಧ್ಯಕ್ಷ ಬಸವರಾಜ ಚಿತ್ತರಗಿ, ನಿರ್ದೇಶಕರಾದ ಸುಭಾಷ ರುದ್ರಗಂಟಿ, ಬಸವರಾಜ ಅಗಸಬಾಳ, ಬಸಪ್ಪ ಹುಣಶ್ಯಾಳ, ಸಂಗಪ್ಪ ಕಲ್ಲುಂಡಿ, ದ್ಯಾವಪ್ಪ ಹುಣಶ್ಯಾಳ, ಉಮೇಶ ಪ್ಯಾಟಿಗೌಡರ, ಜಯಶ್ರೀ ಹೆಬ್ಬಾಳ, ಚಂದ್ರಕಾಂತ ಹೆಬ್ಬಾಳ, ಶಂಕ್ರಮ ಪ್ಯಾಟಿಗೌಡರ, ಸಲಹಾ ಸಮಿತಿ ಅಧ್ಯಕ್ಷ ಬಸವರಾಜ ಪಣಿಗೋಳ, ಹಾಗೂ ಸಂಘದ ನಾಲತವಾಡ ಕಚೇರಿಯ ಸಲಹಾ ಸಮಿತಿ ಸದಸ್ಯರು ಇದ್ದರು.ಸಂಗಮೇಶ ಶಿವಣಗಿ ತಂಡದವರು ಪ್ರಾರ್ಥಿಸಿದರು.ರಮೇಶ ಹೆಬ್ಬಾಳ ಸ್ವಾಗತಿಸಿದರು.ಗಣೇಶ ಮಂಗಳೂರ ಹಾಗೂ ಸರಸ್ವತಿ ಹುಣಶ್ಯಾಳ ನಿರೂಪಿಸಿದರು.

# ಜಗತ್ತಿನ ಜನಪ್ರಿಯ ಕ್ರೀಡೆಗಳಲ್ಲಿ ವಾಲಿಬಾಲ್ ಒಂದು

**ಗೋಕಾಕ:** ಜಗತ್ತಿನ ಜನಪ್ರಿಯ ಕ್ರೀಡೆಗಳಲ್ಲಿ ವಾಲಿಬಾಲ್ ಒಂದಾಗಿದ್ದು, ಈ ಕ್ರೀಡೆಯನ್ನು ಗ್ರಾಮೀಣ ಪ್ರದೇಶಗಳಲ್ಲಿ ಬೆಳೆಸುವ ಉದ್ದೇಶವು ನಮ್ಮ ವಾಲಿಬಾಲ್ ಅಸೋಸಿಯೇಷನ್ ಗೆ ಇದೆ. ಇಂತಹ ಕ್ರೀಡೆಗಳನ್ನು ರಾಜ್ಯದಲ್ಲೆಡೆ ವಿಸ್ತರಿಸುವ ಮೂಲಕ ಮೂಲಕ ಹೊಸ ಅಧ್ಯಾಯದ ಶಕೆ ಆರಂಭವಾಗಿದೆ ಎಂದು ಕರ್ನಾಟಕ ವಾಲಿಬಾಲ್ ಅಸೋಸಿಯೇಷನ್ (ಕೆವ್ಹಿಎ) ಉಪಾಧ್ಯಕ್ಷ ಮತ್ತು ಯುವ ಧುರೀಣ ಸರ್ವೋತ್ತಮ ಜಾರಕಿಹೊಳಿಯವರು ಹೇಳಿದರು.

ಬೆಂಗಳೂರಿನ ಕಂಠೀರವ ಹೊರಾಂಗಣ ಕ್ರೀಡಾಂಗಣದಲ್ಲಿ ಕರ್ನಾಟಕ ವ್ಹಾಲಿಬಾಲ್ ಅಸೋಸಿಯೇಷನ್ ಹಮ್ಮಿಕೊಂಡ ಎ.ಲೋಕೇಶಗೌಡ ಟ್ರೋಫಿ–2025 ಯನ್ನು ವಿಜೇತ ತಂಡಕ್ಕೆ ವಿತರಿಸಿ ಮಾತನಾಡಿದ ಅವರು, ವ್ಹಾಲಿಬಾಲ್ ಕ್ರೀಡೆಗೆ ಸುಮಾರು ನೂರು ವರ್ಷಗಳ ಇತಿಹಾಸವಿದೆ ಎಂದು ಅವರು ತಿಳಿಸಿದರು.



ವ್ಹಾಲಿಬಾಲ್ ಕ್ರೀಡೆಯನ್ನು ಹೆಮ್ಮರವಾಗಿ ಬೆಳೆಸಬೇಕೆಂಬ ಸಂಕಲ್ಪ ನಮ್ಮ ಅಸೋಸಿಯೇಷನ್ ಕಾರ್ಯಸೂಚಿಗಳನ್ನು ಒಳಗೊಂಡಿದೆ. ನಗರ ಪ್ರದೇಶಗಳಲ್ಲಿ ಬೀಡು ಬಿಟ್ಟಿರುವ ಈ ಕ್ರೀಡೆಯನ್ನು ಇಂದು ಗ್ರಾಮೀಣ ಪ್ರದೇಶಗಳಲ್ಲಿ ಬೆಳೆಸಬೇಕಿದೆ. ಈ ದಿಸೆಯಲ್ಲಿ ನಮ್ಮ ಅಸೋಸಿಯೇಷನ್ ಅನೇಕ ಯೋಜನೆಗಳನ್ನು ಹಾಕಿಕೊಂಡಿದೆ. ಉದಯೋನ್ಮುಖ ಪ್ರತಿಭೆಗಳಿಗೆ ಅವಕಾಶವನ್ನು ಕೊಡಬೇಕು. ಹೊಸ ಪ್ರತಿಭೆಗಳನ್ನು ಅನ್ವೇಷಣೆ ಮಾಡಿ ಅಂತಹವರನ್ನು ಗುರುತಿಸುವ ಕೆಲಸವನ್ನು ನಮ್ಮ ಸಂಸ್ಥೆಯು ಮಾಡುತ್ತಿದೆ ಎಂದು ಅವರು ಹೇಳಿದರು.

**ಪುರುಷ ವಿಭಾಗದಲ್ಲಿ ಆಳ್ವಾಸ್ ಚಾಂಪಿಯನ್:** ಸೆ.14 ರಿಂದ ಸೆ.20 ರ ವರೆಗೆ ನಡೆದಿರುವ ಕರ್ನಾಟಕ ಹಿರಿಯರ ವಾಲಿಬಾಲ್ ಚಾಂಪಿಯನ್ ಶಿಪ್‌ನಲ್ಲಿ ಒಟ್ಟು 44 ಪಂದ್ಯಗಳು ನಡೆದಿದ್ದು, ಇದರಲ್ಲಿ 10 ಮಹಿಳಾ ತಂಡಗಳು ಮತ್ತು 12 ಪುರುಷ ತಂಡಗಳು ಭಾಗವಹಿಸಿದ್ದವು. ಪುರುಷರ ವಿಭಾಗದಲ್ಲಿ ಮಂಗಳೂರು ಆಳ್ವಾಸ್ ತಂಡವು ಕರ್ನಾಟಕ ಪೊಲೀಸ್ ತಂಡವನ್ನು 3–1 ಸೆಟ್ಗಳಿಂದ ಸೋಲಿಸುವ ಮೂಲಕ ಚಾಂಪಿಯನ್ ಪಟ್ಟ ಅಲಂಕರಿಸಿತು.

ಅದರಂತೆ ಮಹಿಳೆಯರ ವಿಭಾಗದಲ್ಲಿ ಬೆಂಗಳೂರು ಇನ್ ಕಂ ಟ್ಯಾಕ್ಸ್ ತಂಡವು ಕರ್ನಾಟಕ ಪೊಸ್ಟಲ್ ತಂಡವನ್ನು 3–1 ಸೆಟ್ ಗಳಿಂದ ಮಣಿಸುವ ಮೂಲಕ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡಿತು.

ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರು ಸಮಾರೋಪದಲ್ಲಿ ಭಾಗವಹಿಸಿ ಚಾಂಪಿಯನ್ ತಂಡಗಳಿಗೆ ಪ್ರಶಸ್ತಿಯನ್ನು ವಿತರಿಸಿದರು. ಅಧ್ಯಕ್ಷತೆಯನ್ನು ಕೆವ್ಹಿಎ ಅಧ್ಯಕ್ಷ ಕಾರ್ತಿಕರೆಡ್ಡಿ ಅವರು ವಹಿಸಿದ್ದರು.

ವೇದಿಕೆಯಲ್ಲಿ ಕಾರ್ಯಾಧ್ಯಕ್ಷ ಬಸವರಾಜ ಓ ಸಿ ರಾಜುಗೌಡ, ಬಿ.ಎಂ. ಕೊಕ್ರೆ, ಡಾ. ಸುಬ್ರಮಣಿ, ಇಬ್ರಾಹಿಂ, ವಾಲಿಬಾಲ್ ತರಬೇತುದಾರ ನಂಜೇಗೌಡ, ಪ್ರಧಾನ ಕಾರ್ಯದರ್ಶಿ ಕೆ.ಆರ್.ಲಕ್ಷ್ಮೀ ನಾರಾಯಣ ಮುಂತಾದವರು ಉಪಸ್ಥಿತರಿದ್ದರು.

# ಸರ್ವರ್ ಸಮಸ್ಯೆಗೆ ಸುಸ್ತಾದ ಶಿಕ್ಷಕಿಯರು






**ರಬಕವಿ–ಬನಹಟ್ಟಿ:** ತೀವ್ರ ವಿವಾದ ಗೊಂದಲಗಳ ನಡುವೆಯೇ ರಾಜ್ಯ ಸರ್ಕಾರದ ಬಹು ನಿರೀಕ್ಷಿತ 'ಜಾತಿ ಗಣತಿ' ಎಂದು ಕರೆಯುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಮಂಗಳವಾರ ತಾಲೂಕಾದ್ಯಂತ ಪ್ರಾರಂಭವಾಗಿದ್ದು, ಗಣತಿದಾರರು ಮನೆ ಮನೆಗೆ ತೆರಳಿ ದತ್ತಾಂಶ ಸಂಗ್ರಹ ವೇಳೆ ಸರ್ವರ್ ಸಮಸ್ಯೆಗೆ ಶಿಕ್ಷಕಿಯರು ಸುಸ್ತಾದ ಪ್ರಸಂಗ ನಡೆದು ಒಂದೇ ಒಂದು ಗಣತಿಯಾಗದಿರುವದು ವಿಪರ್ಯಾಸ.

ಅಗತ್ಯ ದಾಖಲೆಗಳ ಸಂಗ್ರಹದೊಂದಿಗೆ ಮನೆಯವರನ್ನು ಸಂಪರ್ಕಿಸುತ್ತಿದ್ದಂತೆ ಮೊಬೈಲ್ ಆಪ್‌ನ ಸಂಪರ್ಕ ದೋಷ ಅಥವಾ ಸರ್ವರ್ ಸಮಸ್ಯೆಯಿಂದಾಗಿ ಕುಂತಲ್ಲೇ ಕುಂತು ಸುಸ್ತಾಗುವಲ್ಲಿ ಕಾರಣವಾಯಿತು. ಜಾತಿ ಗಣತಿಗೆ ಬಳಸಲಾಗುವ ಮೊಬೈಲ್ ಅಪ್ಲಿಕೇಶನ್ ಡೇಟಾ ಅಪ್‌ಲೋಡ್‌ಗೆ ಪರದಾಡುವಲ್ಲಿ ಕಾರಣವಾಗಿ ತಾಂತ್ರಿಕ ದೋಷದಿಂದ ಗೊಂದಲಕ್ಕೀಡಾಯಿತು.

**ಮನೆ ಹಂಚಿಕೆ ಸಮಸ್ಯೆ:** ಕೆಲವು ಪ್ರದೇಶಗಳಲ್ಲಿ ಗಣತಿದಾರರಿಗೆ ಯಾವ ಪ್ರದೇಶದಲ್ಲಿ ಸಮೀಕ್ಷೆ ನಡೆಸಬೇಕೆಂಬುದರ ಬಗ್ಗೆ ಸ್ಪಷ್ಟ ಮಾಹಿತಿಯಿಲ್ಲದ ಕಾರಣ ಊರ ತುಂಬೆಲ್ಲಾ ಅಲೆದಾಡುವ ಸ್ಥಿತಿ ಸಾಮಾನ್ಯವಾಗಿತ್ತು. ಇವುಗಳ ಮಧ್ಯೆ 15 ದಿನಗಳೊಳಗಾಗಿ ಪೂರ್ಣಗೊಳಿಸಬೇಕೆಂಬ ಕಷ್ಟಕರ ಕಾಲಾವಕಾಶವಿದ್ದು, ಸಮೀಕ್ಷೆಗೆ ಹೆಚ್ಚಿನ ಅವಧಿಗೆ ಒತ್ತಾಯವೂ ಕಂಡು ಬಂದಿತು. ಪ್ರತಿ ಗಣತಿದಾರರಿಗೆ ನೂರರೊಳಗೆ ಮನೆಗಳ ಸಮೀಕ್ಷೆವ ವಹಿಸಲಾಇದ್ದರೂ ಕುಟುಂಬ ಸದಸ್ಯರು ಮನೆಯಲ್ಲಿ ಇಲ್ಲದಿದ್ದರೆ ಮತ್ತೆ ಬೇಟಿ ನಿಡಬೇಕು. ಇದರಿಂದ ಕೆಲಸ ವಿಳಂಬವೆಂಬುದು ಗಣತಿದಾರರದ್ದು. ಇವುಗಳ ಮಧ್ಯೆ ಮನೆಯಲ್ಲಿರುವ ಆಭರಣಗಳ ಬಗ್ಗೆ ಪ್ರಶ್ನಿಸಿದಾ ಜನರು ಗೊಂದಲಕ್ಕೊಳಗಾಗಿ ದಿಗ್ಭ್ರಮಿತರಾಗಿದ್ದಾರೆಂದು ತಿಳಿದು ಬಂದಿವೆ.

## ತರಬೇತಿ ಕಿಟ್ ಕೊರತೆ

ಗಣತಿದಾರರಿಗೆ ಸಮರ್ಪಕ ತರಬೇತಿ ಸಿಕ್ಕಿಲ್ಲ ಮತ್ತು ಅವರಿಗೆ ಅಗತ್ಯವಿರುವ ಕಿಟ್‌ಗಳು ಸಮಯಕ್ಕೆ ಸರಿಯಾಗಿ ಸಿಕ್ಕಿಲ್ಲವೆಂಬ ದೂರುಗಳು ಕೇಳಿ ಬಂದಿವೆ.



## 10ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆ

**ಬೆಳಗಾವಿ:** ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ಆಯುಷ್ ಇಲಾಖೆ ಮತ್ತು ಆಯ್‌ಸಿಎಮ್‌ಆರ್ ಎನ್‌ಆಯ್‌ಟಿಎಮ್ ಹಾಗೂ ವಿವಿಧ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯಗಳ ಸಹಯೋಗದಲ್ಲಿ ಮಂಗಳವಾರ (ಸೆ.23) ನಗರದ ಶಿವಬಸವ ನಗರದಲ್ಲಿರುವ ಕೆಪಿಟಿಸಿಎಲ್ ಹಾಲ್‌ನಲ್ಲಿ 10ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆ ಜರುಗಿತು.

ಹಿರಿಯ ವೈಜ್ಞಾನಾಧಿಕಾರಿ ಡಾ. ಜ್ಯೋತಿ ಭಟ್ ಅವರು ಕಾರ್ಯಕ್ರಮವನ್ನು ಉದ್ಘಾಟಿಸಿದರು. ಜಿಲ್ಲಾ ಆಯುಷ್ ಅಧಿಕಾರಿ ಶ್ರೀಕಾಂತ್ ಸುಣದೊಳ್ಳಿ, , ಹರ್ಷ ಹೆಗಡೆ, ಡಾ. ಕುಬೇರ ನಾಯಕ್, ಡಾ. ಗಿರೀಶ್ ಹೊಳೆಯನ್ನವರ, ಡಾ. ಗಿರೀಶ್ ಪಶುಪತಿಮಠ, ಶ್ರೀಮಂತ್ ಸಿಂಗೆ, ಪೌರಕಾರ್ಮಿಕರು ಸೇರಿದಂತೆ ವಿವಿಧ ಆಯುರ್ವೇದ ಕಾಲೇಜು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಪರೀಕ್ಷಾ ಪೂರ್ವ ತರಬೇತಿಗೆ ಅರ್ಜಿ ಆಹ್ವಾನ

**ಧಾರವಾಡ:** ಧಾರವಾಡ ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳಿಗೆ ವೃತ್ತಿಪರ ಕೌಶಲ್ಯಾಭಿವೃದ್ಧಿ ತರಬೇತಿ ಹಾಗೂ 60 ದಿನಗಳ ವಸತಿ ಸಹಿತ ಪೋಲಿಸ್ ಕಾನ್ಸಟೇಬಲ್ ಪರೀಕ್ಷಾ ಪೂರ್ವ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ವಿದ್ಯಾರ್ಥಿಗಳು ಅಲ್ಪಸಂಖ್ಯಾತರ ನಿರ್ದೇಶನಾಲಯದ ವೈಬ್‌ಸೈಟ್ https://dom.Karnataka.gov.in ನಲ್ಲಿ ಅರ್ಜಿ ನಮೂನೆಯನ್ನು ಪಡೆದು, ನಿಗದಿಪಡಿಸಿದ ಮಾರ್ಗಸೂಚಿಗಳನ್ವಯ ಅಕ್ಟೋಬರ 3, 2025 ರೊಳಗಾಗಿ ಅರ್ಜಿ ಸಲ್ಲಿಸಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪತ್ರಕರ್ತರ ತರಬೇತಿಗೆ ಅರ್ಜಿ ಆಹ್ವಾನ

**ಧಾರವಾಡ:** ಕರ್ನಾಟಕ ಮಾಧ್ಯಮ ಅಕಾಡೆಮಿಯು Infosys Springboard ಸಿ.ಎಸ್.ಆರ್. ಕಾರ್ಯಕ್ರಮದಡಿ ಪತ್ರಕರ್ತರ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ಮಾಧ್ಯಮ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕನಿಷ್ಠ 5 ವರ್ಷ ಸೇವಾನುಭವ ಹೊಂದಿರುವ ಪತ್ರಕರ್ತರು ಅರ್ಜಿ ಸಲ್ಲಿಸಬಹುದು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಪರಿಗಣಿಸಿರುವ ರಾಜ್ಯಮಟ್ಟದ ಪತ್ರಿಕೆಗಳು ಹಾಗೂ ಇಲಾಖೆಯಡಿ ನೋಂದಾಯಿತ ಉಪಗ್ರಹ ಸುದ್ದಿ ವಾಹಿನಿಗಳ ಸಂಪಾದಕರು ಶಿಫಾರಸು ಮಾಡುವ ಪತ್ರಕರ್ತರನ್ನು ತರಬೇತಿಗೆ ಪರಿಗಣಿಸಲಾಗುವುದು. ಈ ಕುರಿತು ಸಂಪಾದಕರನ್ನು ನೇರವಾಗಿ ಸಂಪರ್ಕಿಸಲಾಗುವುದು.

ಆಸಕ್ತ ಪತ್ರಕರ್ತರು ಗೂಗಲ್ ಫಾರ್ಮ್ https://forms.gle/q9NUnsQ7M5xrsruj9 ನಲ್ಲಿ ಮಾಹಿತಿ ಹಾಗೂ ದಾಖಲೆಗಳನ್ನು ಒದಗಿಸುವ ಮೂಲಕ ತರಬೇತಿಗೆ ನೋಂದಾಯಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 26,2025 ಕೊನೆಯ ದಿನವಾಗಿದೆ.

ಅರ್ಜಿ ನಮೂನೆಯಲ್ಲಿ ಸೂಚಿಸಿರುವಂತೆ ಪತ್ರಕರ್ತರು ಭಾವಚಿತ್ರ, ವಯಸ್ಸಿನ ದಾಖಲೆ, ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಮಾಧ್ಯಮ ಸಂಸ್ಥೆಯ ಮುಖ್ಯಸ್ಥರ ದೃಢೀಕರಣ, ಸದರಿ ಮಾಧ್ಯಮ ಸಂಸ್ಥೆಯು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿ ಸೇರ್ಪಡೆಯಾಗಿರುವ ಕುರಿತ ದಾಖಲೆ ಹಾಗೂ ಕನಿಷ್ಠ 5 ವರ್ಷ ಸೇವೆ ಸಲ್ಲಿಸಿರುವ ಕುರಿತು ಸೇವಾನುಭವ ದಾಖಲೆಗಳನ್ನು ಸಲ್ಲಿಸಬೇಕು. ಇದು ಮೂರು ದಿನಗಳ ವಸತಿಯುತ ತರಬೇತಿಯಾಗಿದ್ದು, ಪತ್ರಕರ್ತರಿಗೆ ಪ್ರಯಾಣ ಭತ್ಯೆ ನೀಡಲಾಗುವುದು. ಇನ್‌ಫೋಸಿಸ್ ಸಂಸ್ಥೆಯ ನಿಗದಿತ ಕ್ಯಾಂಪಸ್‌ಗಳಲ್ಲಿ ತರಬೇತಿ ನಡೆಯಲಿದೆ.

ಈ ತರಬೇತಿ ಕಾರ್ಯಕ್ರಮದಲ್ಲಿ ಡಿಜಿಟಲ್ ಮಾಧ್ಯಮ, ಎಐ ಬಳಕೆ ಹಾಗೂ ಸಾಫ್ಟ್‌ಸ್ಕಿಲ್ ಅಭಿವೃದ್ಧಿ ತರಬೇತಿ ನೀಡಲಾಗುವುದು. ಪ್ರಸಕ್ತ ಸಾಲಿನಲ್ಲಿ ಒಟ್ಟು ಮೂರು ತಂಡಗಳಲ್ಲಿ ತರಬೇತಿ ನಡೆಯಲಿದ್ದು, ಒಂದು ತಂಡದಲ್ಲಿ ಮಹಿಳಾ ಆಯವ್ಯಯದಡಿ ಪತ್ರಕರ್ತೆಯರಿಗಾಗಿ ತರಬೇತಿ ನಡೆಯಲಿದೆ. ಎಲ್ಲ ಮೂರು ತಂಡಗಳಿಗೂ ಈ ಒಂದು ಬಾರಿ ಮಾತ್ರ ಅರ್ಜಿ ಆಹ್ವಾನಿಸಲಾಗುತ್ತಿದೆ. ತರಬೇತಿಯ ಸ್ಥಳ ಮತ್ತು ದಿನಾಂಕವನ್ನು ನಂತರ ತಿಳಿಸಲಾಗುವುದು. ತರಬೇತಿಗೆ ಪತ್ರಕರ್ತರ ಆಯ್ಕೆ ಕುರಿತ ಅಂತಿಮ ನಿರ್ಧಾರ ಅಕಾಡೆಮಿಯದ್ದೇ ಆಗಿರುತ್ತದೆ ಎಂದು ಪ್ರಕಟಣೆ ತಿಳಿಸಿದೆ.



## ಪೌರ ಕಾರ್ಮಿಕರ ದಿನಾಚರಣೆ

**ಗೋಕಾಕ:** ನಗರಸಭೆ ಹಾಗೂ ಕರ್ನಾಟಕ ರಾಜ್ಯ ಪೌರ ಸೇವಾ ನೌಕರರ ಸೇವಾ ಸಂಘ ಗೋಕಾಕ ಶಾಖೆಯ ಸಂಯುಕ್ತ ಆಶ್ರಯದಲ್ಲಿ ಮಂಗಳವಾರದಂದು ಹಮ್ಮಿಕೊಂಡ ಪೌರ ಕಾರ್ಮಿಕರ ದಿನಾಚರಣೆಯಲ್ಲಿ ಪೌರ ಕಾರ್ಮಿಕರನ್ನು ಸತ್ಕರಿಸಲಾಯಿತು.

ಈ ಸಂದರ್ಭದಲ್ಲಿ ನಗರಸಭೆ ಅಧ್ಯಕ್ಷ ಪ್ರಕಾಶ ಮುರಾರಿ, ಸ್ಥಾಯಿ ಸಮಿತಿ ಚೇರಮನ ಶ್ರೀಶೈಲ ಯಕ್ಕುಂಡಿ, ಪರಿಸರ ಅಭಿಯಂತ ಎಮ್ ಎಚ್ ಗಜಾಕೋಶ, ಸಹಾಯಕ ಕಾರ್ಯಪಾಲಕ ಅಭಿಯಂತ ವಿ ವೈ ಪಾಟೀಲ, ಸಂಘದ ಅಧ್ಯಕ್ಷ ಜೆ ಸಿ ತಾಂಬೂಳೆ, ಉಪಾಧ್ಯಕ್ಷ ವಿಠ್ಠಲ ಹಿರಗಣ್ಣವರ, ಸಿದ್ದಪ್ಪ ಬಾಣಕಾರಿ ಇದ್ದರು.

# ಮಕ್ಕಳ ಸಹಾಯವಾಣಿ ಸಂಖ್ಯೆ 1098 ಅಳವಡಿಕೆ ಕಡ್ಡಾಯ

**ಧಾರವಾಡ:** ರಾಜ್ಯದ ಎಲ್ಲಾ ಸರ್ಕಾರಿ, ಅರೆ ಸರ್ಕಾರಿ, ಸೇವಾ ಸಂಸ್ಥೆಗಳ ಕಟ್ಟಡಗಳ ಮೇಲೆ ಮಕ್ಕಳ ಸಹಾಯವಾಣಿ ಸಂಖ್ಯೆ 1098 ನ್ನು ಕಡ್ಡಾಯವಾಗಿ ಬರೆಸಲು ಮುಖ್ಯ ಕಾರ್ಯದರ್ಶಿಗಳು ಸೂಚನೆ ನೀಡಿದ್ದಾರೆ.

ಮಕ್ಕಳ ಹಕ್ಕುಗಳ ರಕ್ಷಣೆ ಇಂದಿನ ತುರ್ತು ಅಗತ್ಯವಾಗಿದೆ. ಈ ಹಿನ್ನೆಲೆಯಲ್ಲಿ ಅನುಷ್ಠಾನಗೊಂಡಿರುವ ಮಿಷನ್ ವಾತ್ಸಲ್ಯ ಯೋಜನೆಯು ಮಕ್ಕಳ ಅಭಿವೃದ್ಧಿ ಮತ್ತು ರಕ್ಷಣೆಯ ಆದ್ಯತೆಯನ್ನು ಸಾಧಿಸುವ ಒಂದು ಮಾರ್ಗವಾಗಿದೆ. ಸಂಕಷ್ಟದಲ್ಲಿನ ಹಾಗೂ ಸವಾಲಿನಲ್ಲಿರುವ ಮಕ್ಕಳ ಹಿತರಕ್ಷಣೆಗೆ ಹೆಚ್ಚು ಒತ್ತು ನೀಡುತ್ತಿದೆ. ಇಂತಹ ಮಕ್ಕಳ ಗುರುತಿಸುವಿಕೆ, ಸಂಕಷ್ಟ ಸ್ಥಿತಿಯಲ್ಲಿ ಮಾಹಿತಿ ಹಂಚಿಕೊಳ್ಳಲು ಹಾಗೂ ಪುನರ್ವಸತಿ ಸೇವೆ ಕಲ್ಪಿಸುವಲ್ಲಿ ಮಕ್ಕಳ ಸಹಾಯವಾಣಿ 1098 ಮಹತ್ವದ ಪಾತ್ರವಹಿಸಿದೆ.

ಈ ಸಂಖ್ಯೆಯನ್ನು ವ್ಯಾಪಕವಾಗಿ ಪ್ರಚಾರ ಮಾಡಿದ್ದಲ್ಲಿ ಬಾಲ್ಯವಿವಾಹ, ಬಾಲಕಾರ್ಮಿಕತೆ ಸಂಕಷ್ಟದಲ್ಲಿನ ಮಕ್ಕಳ ರಕ್ಷಣೆ ಸೇರಿದಂತೆ ವಿವಿಧ ರೀತಿಯ ಮಕ್ಕಳ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಲು ಸಾಧ್ಯವಾಗಿದೆ. ಈ ಹಿನ್ನೆಲೆಯಲ್ಲಿ ಕರ್ನಾಟಕ ಸರ್ಕಾರದ ಎಲ್ಲಾ ಸರ್ಕಾರಿ, ಅರೆ ಸರ್ಕಾರಿ, ಶೈಕ್ಷಣಿಕ ಸಂಸ್ಥೆಗಳು, ಖಾಸಗಿ ಸೇವಾ ಸಂಸ್ಥೆಗಳು ಸೇರಿದಂತೆ ಎಲ್ಲಾ ಕಟ್ಟಡಗಳ ಮೇಲೆ ಮಕ್ಕಳ ಸಹಾಯವಾಣಿ ಸಂಖ್ಯೆ 1098 ನ್ನು ಕಡ್ಡಾಯವಾಗಿ ಶಾಶ್ವತ ಫಲಕದಲ್ಲಿ ಪ್ರದರ್ಶಿಸಲು ಮುಖ್ಯ ಕಾರ್ಯದರ್ಶಿಗಳು ಸೂಚನೆ ನೀಡಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

# ಸಿಸಿ ರಸ್ತೆ ನಿರ್ಮಾಣ ಕಾಮಗಾರಿಗೆ ಚಾಲನೆ



**ಯರಗಟ್ಟಿ:** ಈ ಭಾಗದ ಜನರ ಸುಗಮವಾಗಿ ಸಂಚರಿಸಲು ಹಾಗೂ ರೈತರ ಕೃಷಿ ಚಟುವಟಿಕೆಗಳಿಗೆ ಅನುಕೂಲವಾಗಲಿದೆ ಎಂದು ಶಾಸಕ ವಿಶ್ವಾಸ ವೈದ್ಯ ಹೇಳಿದರು.

ಸಮೀಪದ ತಾವಲಗೇರಿ ಗ್ರಾಮದಲ್ಲಿ ಸುಮಾರು 20 ಲಕ್ಷ ರೂ. ಮೊತ್ತದ ಸಿಸಿ ರಸ್ತೆ ನಿರ್ಮಾಣ ಕಾಮಗಾರಿ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಮುಂಬರುವ ದಿನಗಳಲ್ಲಿ ಯರಗಟ್ಟಿ ಭಾಗದ ಜನರಿಗೆ ಸಂಪೂರ್ಣ ತಾಲೂಕಾ ಮಟ್ಟದ ಕಚೇರಿಗಳ ಸೌಲಭ್ಯ ಕಲ್ಪಿಸಲು ಪ್ರಯತ್ನಿಸಲಾಗುವುದು ಎಂದು ಹೇಳಿದರು.

ಕಾಂಗ್ರೆಸ್ ಪ್ರಕಾಶ ವಾಲಿ ಮಾತನಾಡಿ, ಸರ್ಕಾರ ಗ್ಯಾರಂಟಿ ಯೋಜನೆಗಳ ಜತೆಗೆ ಅಭಿವೃದ್ಧಿ ಕಾರ್ಯ ಮಾಡಲಾಗುತ್ತಿದ್ದು ಗುಣಮಟ್ಟದ ಜತೆಗೆ ನಿಗದಿತ ಅವಧಿಯೊಳಗೆ ಕಾಮಗಾರಿ ಪೂರ್ಣಗೊಳಿಸಿ ಎಂದು ಗುತ್ತಿಗೆದಾರರಿಗೆ ಸೂಚಿಸಿದರು.

ಶಾಸಕ ವಿಶ್ವಾಸ ವೈದ್ಯ ಅವರನ್ನು ಗ್ರಾಮಸ್ಥರು, ಕಾರ್ಯಕರ್ತರು ಸನ್ಮಾನಿಸಿದರು. ಗ್ರಾ. ಪಂ. ಅಧ್ಯಕ್ಷ ಲಕ್ಕಪ್ಪ ಸನ್ನಿಂಗನ್ನವರ, ಮುಖಂಡ ಎಪಿಎಂಸಿ ಅಧ್ಯಕ್ಷ ನೀಲಕಂಠ ಸಿದ್ದಬಸನ್ನವರ, ಬಂಗಾರೆಪ್ಪ ಹರಳಿ, ದ್ಯಾಮಣ್ಣಾ ಬಂಡಿವಡ್ಡರ, ಸಿದ್ದಪ್ಪ ಬುರ್ಲಿ, ಚಿಂತಾಮಣಿ ಬಡ್ಡಿವಡ್ಡರ, ಭರಮಣ್ಣಾ ಹಕ್ಕಿ, ಭರಮಪ್ಪ ಕುರಿ, ಈಶ್ವರ ತಳನಟ್ಟಿ, ಪ್ರಕಾಶ ಬಂಡಿವಡ್ಡರ ಸೇರಿದಂತೆ ಕಾರ್ಯಕರ್ತರು ಇದ್ದರು.

# ಶಿಕ್ಷಕ ದೇಮಶೆಟ್ಟಿಗೆ ರಾಧಾಕೃಷ್ಣನ್ ಸೇವಾ ರತ್ನ ಪ್ರಶಸ್ತಿ



**ಗೋಕಾಕ:** ಕರ್ನಾಟಕ ಪ್ರೆಸ್ ಕ್ಲಬ್ ಕೌನ್ಸಿಲ್(ರಿ) ಹಾಗೂ ಇದು ನಿಮ್ಮ ವಾಹಿನಿ ಕಲಾ ವೇದಿಕೆ (ರಿ) ವತಿಯಿಂದ ಆಯೋಜನೆಗೊಂಡ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಜನ್ಮ ದಿನಾಚರಣೆ ಪ್ರಯುಕ್ತ ಜರುಗಿದ 18ನೇ ಸಾಂಸ್ಕೃತಿಕ ಸಿಂಚನ ಕಾರ್ಯಕ್ರಮದಲ್ಲಿ ಇತ್ತೀಚೆಗೆ ನಿವೃತ್ತಗೊಂಡ ಮಮದಾಪೂರ ಚಿಂತಾಮಣಿ ಪಾವಟೆ ಪ್ರೌಢ ಶಾಲೆಯ ಮುಖ್ಯೋಪಾಧ್ಯಾಯ ರ ವೀ ದೇಮಶೆಟ್ಟಿಯವರು ತಮ್ಮ ಪ್ರಾಮಾಣಿಕ ಶಿಕ್ಷಕ ವೃತ್ತಿಯೊಂದಿಗೆ ಶಾಲಾ ಮಕ್ಕಳಲ್ಲದೇ, ಸಾಮಾಜಿಕ ಕಳಕಳಿಯ ನಿಸ್ವಾರ್ಥ ಸೇವೆಗಾಗಿ ಈ ಮೇಲ್ಕಂಡ ಸಂಘಟನೆಗಳು ನೀಡುವ 2025ರ ಡಾ. ಸರ್ವೇಪಲ್ಲಿ ರಾಧಾಕೃಷ್ಣನ್ ಸೇವಾ ರತ್ನ ಪ್ರಶಸ್ತಿಗೆ ಭಾಜನರಾಗಿದ್ದಾರೆ.

ಇವರುಗಳಿಗೆ ಕರ್ನಾಟಕ ರಾಜ್ಯ ಉಪಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್ ಫಣೇಂದ್ರ, ಬೆಂಗಳೂರು ಉಪ ಪೋಲೀಸ್ ಆಯುಕ್ತ ಮಂಜುನಾಥ ಬಾಬು, ಸುವರ್ಣ ಕರ್ನಾಟಕ ಡಿಜಿಟಲ್ ಮೀಡಿಯಾ ಅಸೋಸಿಯೇಷನ್ ಅಧ್ಯಕ್ಷ ಗಂಡಸಿ ಸದಾನಂದ ಸ್ವಾಮಿ ಹಾಗೂ ಕರ್ನಾಟಕ ಪ್ರೆಸ್ ಕ್ಲಬ್ ಕೌನ್ಸಿಲ್ ಅಧ್ಯಕ್ಷ ಟಿ. ಶಿವಕುಮಾರ್ ನಗರ್ ನವಿಲೆ ಯವರು ಶಾಲು ಹೊದಿಸಿ ಪ್ರಶಸ್ತಿ ಪತ್ರ, ಸ್ಮರಣಿಕೆ, ಮೆಡಲ್ ಕೊಟ್ಟು ಗೌರವಿಸಿ ಸತ್ಕರಿಸಿದರು.

# ಜಿಲ್ಲಾ ಬ್ಯಾಂಕರ್ಸ್ ಪ್ರಗತಿ ಪರಿಶೀಲನಾ ಸಭೆ

**ಧಾರವಾಡ:** ಧಾರವಾಡ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ನಿನ್ನೆ (ಸೆ.22) ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಮಿತಿ (ಡಿಎಲ್‌ಆರ್‌ಸಿ) ಸಭೆಯು, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಜರುಗಿತು.

ರಾಜ್ಯ ಮತ್ತು ಕೇಂದ್ರ ಸಹಾಯಧನ, ಸಾಲಗಳ ಶೀಘ್ರ ವಿತರಣೆ, ಸಾಮಾಜಿಕ ಭದ್ರತೆ ಅಭಿಯಾನದಡಿ ಪಿಎಮ್‌ಜೆಜೆಬಿವಾಯ್ ಮತ್ತು ಪಿಎಮ್‌ಎಸ್‌ಬಿವಾಯ್ ಯೋಜನೆಗಳಲ್ಲಿ ಜಿಲ್ಲೆಯ ಎಲ್ಲಾ ಅರ್ಹ ಜನರ ಸಂಪೂರ್ಣ ಸೇರ್ಪಡೆಯಾಗಬೇಕು ಮತ್ತು ಕಡಿಮೆ ಸಿಡಿ ಅನುಪಾತ ಹೊಂದಿರುವ ಬ್ಯಾಂಕುಗಳಿಗೆ ಆದ್ಯತೆ ಕ್ಷೇತ್ರವಾದ ಸಾಲ ವಿತರಣೆಯಲ್ಲಿ ಒತ್ತು ನೀಡುವಂತೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಅವರು ಸೂಚಿಸಿದರು.

ಸಭೆಯಲ್ಲಿ ಲೀಡ್ ಬ್ಯಾಂಕ್ ಜಿಲ್ಲಾ ಮುಖ್ಯ ವ್ಯವಸ್ಥಾಪಕ ಬಸವರಾಜ ಗಡಾದವರ, ಬ್ಯಾಂಕ್ ಆಫ್ ಬರೋಡಾ ಉಪ–ಪ್ರಾದೇಶಿಕ ವ್ಯವಸ್ಥಾಪಕ ಎಜಿಎಮ್ ಅಮರೇಶ್ ಗೌಡ, ಆರ್.ಬಿ.ಐ ಎಜಿಎಮ್ ಬುಬುಲ್ ಬೋರ್ಲೋಯಿ, ನಾಬಾರ್ಡ್ ಎಜಿಎಮ್ ಮಯೂರ್ ಕಾಂಬಳೆ, ಕರ್ನಾಟಕ ಗ್ರಾಮೀಣ ಬ್ಯಾಂಕ್ ಎಜಿಎಮ್ ಮತ್ತು ಪ್ರಾದೇಶಿಕ ವ್ಯವಸ್ಥಾಪಕ ಚಂದ್ರಶೇಖರ ಪಾಟೀಲ, ಧಾರವಾಡ ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ, ಜಿಲ್ಲಾ ಮಟ್ಟದ ವಿವಿಧ ಬ್ಯಾಂಕುಗಳ ವ್ಯವಸ್ಥಾಪಕರು ಮತ್ತು ಸರ್ಕಾರಿ ಅಧಿಕಾರಿಗಳು ಭಾಗವಹಿಸಿದ್ದರು.




# ಪೌರ ಕಾರ್ಮಿಕರ ದಿನಾಚರಣೆ



**ಯರಗಟ್ಟಿ:** 'ಪಟ್ಟಣ ಸ್ವಚ್ಛವಾಗಿರಲು ಪೌರ ಕಾರ್ಮಿಕರ ಶ್ರಮ ಕಾರಣ' ಎಂದು ಪ ಪಂ ಸದಸ್ಯ ನಿಖಿಲ ಪಾಟೀಲ ಹೇಳಿದರು.

ಪಟ್ಟಣ ಪಂಚಾಯಿತಿ ಹಮ್ಮಿಕೊಂಡಿದ್ದ ಪೌರ ಕಾರ್ಮಿಕರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಪಟ್ಟಣದ ಸ್ವಚ್ಛತೆ ಹಾಗೂ ಜನರ ಸಮಸ್ಯೆಗಳಿಗೆ ಸ್ಪಂದಿಸುತ್ತಿರುವ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಮಹೇಶ ಭಜಂತ್ರಿ ಅವರ ಕಾರ್ಯ ಶ್ಲಾಘನೀಯ ಎಂದರು.

ಪಟ್ಟಣ ಪಂಚಾಯಿತಿ ಸದಸ್ಯ ಹನಮಂತ ಹಾರೂಗೊಪ್ಪ ಮಾತನಾಡಿ,'ಪೌರ ಕಾರ್ಮಿಕರು ಸಾರ್ವಜನಿಕರ ಆರೋಗ್ಯ ರಕ್ಷಣೆ ಮಾಡುವ ವೈದ್ಯರಿದ್ದಂತೆ. ನಿತ್ಯ ಪಟ್ಟಣದ ಸ್ವಚ್ಛತೆಗಾಗಿ ಶ್ರಮಿಸುತ್ತಿದ್ದಾರೆ. ಅವರನ್ನು ಗೌರವಿಸುವುದು ಪ್ರತಿಯೊಬ್ಬರ ಕರ್ತವ್ಯ' ಎಂದರು.


ನಂತರ ಪೌರ ಕಾರ್ಮಿಕರನ್ನು ಸನ್ಮಾನಿಸಲಾಯಿತು. ಪ.ಪಂ. ಕಿರಿಯ ತಾಂತ್ರಿಕ ಅಭಿಯಂತರ ವೆಂಕಟೇಶ ಕಾಮಣ್ಣವರ, ಕಿರಿಯ ಆರೋಗ್ಯ ನೀರಿಕ್ಷಕ ನಾಗರಾಜ ಚವಡಪ್ಪನ್ನವರ, ಸಿಬ್ಬಂದಿ ವರ್ಗದವರಾದ ಕೆ. ಬಿ. ಬೆಣ್ಣಿ ಆನಂದ ಬೆಳವಿ, ಮಹಾದೇವಪ್ಪ ಬಡಿಗೇರಿ, ರಾಜು ಹಿರೇಮಠ, ಪಾರ್ವತಿ ಪಟಣ್ಣಶೆಟ್ಟಿ, ದ್ಯಾಮವ್ವ ಬೂದಗಟ್ಟಿ, ನೇತ್ರಾ ಜಾದವ, ಕೇದಾರ ಬಾಕಳೆ, ಮಲ್ಲಪ್ಪ ಬಾರ್ಕಿ, ಮಾಬುಸುಬಾನಿ ಜಮಾದಾರ ಭಾಗವಹಿಸಿದ್ದರು.

# ಮಂಜುನಾಥ ಸೊಸಾಯಿಟಿಗೆ ರೂ.63.95 ಲಕ್ಷ ನಿವ್ವಳ ಲಾಭ

**ಮೂಡಲಗಿ:** ಮೂಡಲಗಿಯ ಮಂಜುನಾಥ ಅರ್ಬನ್ ಕೋ.ಅಪ್‌ಕ್ರೆಡಿಟ್ ಸೊಸಾಯಿಟಿಯು 2024–25 ಆರ್ಥಿಕ ವರ್ಷದ ಕೊನೆಯಲ್ಲಿ ರೂ.63.95 ಲಕ್ಷ ನಿವ್ವಳ ಲಾಭವನ್ನು ಗಳಿಸಿ ಪ್ರಗತಿಯಲ್ಲಿ ಸಾಗಿದೆ' ಎಂದು ಸೊಸಾಯಿಟಿ ಅಧ್ಯಕ್ಷ ಸಂಗಪ್ಪ ನಿಡಗುಂದಿ ಹೇಳಿದರು

ಮಂಗಳವಾರ ಮಂಜುನಾಥ ಅರ್ಬನ ಕೋ ಆಪ್ ಕ್ರೆಡಿಟ್ ಸೊಸಾಯಿಟಿಯ 17ನೇ ವಾರ್ಷಿಕೋತ್ಸವದ ಪೂಜಾ ಸಮಾರಂಭದಲ್ಲಿ ಮಾತನಾಡಿದರು,

ಸಂಘವು ಐದು ಶಾಖೆಗಳನ್ನು ಹೊಂದಿದ್ದು ಎಲ್ಲ ಶಾಖೆಗಳು ಪ್ರಗತಿಯಲ್ಲಿವೇ ಮತ್ತು ಪ್ರಧಾನ ಕಛೇರಿಯು ವವ್ಯಹಾರವು ಶೇರುದಾರರ ಮತ್ತು ಠೇವುದಾರರ ಸಹಕಾರದಿಂದ ವರ್ಷದಿಂದ ವರ್ಷಕ್ಕೆ ಪ್ರಗತಿ ಕಾಣುತ್ತಿದೆ ಎಂದರು,



ಸಂಘವು ಮಾರ್ಚ ಅಂತ್ಯಕ್ಕೆ 3336 ಶೇರು ಸದಸ್ಯರನ್ನು ಹೋಂದಿ ಶೇರು ಬಂಡವಾಳ 82.83 ಲಕ್ಷ ಹೊಂದಿದೆ, ಠೇವುಗಳು 41.9 ಕೋಟಿ, ಸಾಲ ವಿತರಣೆ 36.12 ಕೋಟಿ, ನಿಧಿಗಳು 2.22 ಕೋಟಿ ಹೊಂದಿ,ದುಡಿಯುವ ಬಂಡವಾಳ 53 ಕೋಟಿ ಹೊಂದಿ ಮಾರ್ಚ ಅಂತ್ಯಕ್ಕೆ ಸಂಘವು 63.95 ಲಕ್ಷ ಲಾಭ ಗಳಿಸಿದೆ ಎಂದರು. ಸಂಘದ ಉಪಾಧ್ಯಕ್ಷ ಶಿವಬಸು ಕುಡಚಿ, ಮಾತನಾಡಿ, ಸಂಘವು 16 ವರ್ಷಗಳನ್ನು ಪೂರೈಸಿ 17ನೇ ವರ್ಷಕ್ಕೆ ಪಾದಾರ್ಪನೆ ಮಾಡುತ್ತಿರುವದ ಸಂತಸದ ವಿಷಯ ಸಂಘದ ಬೆಳವಣಿಗೆ ಸಾಲಗಾರರೆ ಮೂಲ ಬಂಡವಾಳ ಪಡೆದ ಸಾಲವನ್ನು ಸಕಾಲಕ್ಕೆ ತುಂಬುವದರಿಂದ ಬೇರೆಯವರಿಗೆ ಸಾಲವು ಸೀಗುತ್ತದೆ ಸಂಘವು ಏಳ್ಗೆ ಕಾಣುತ್ತದೆ. ಎಂದರು

ಈ ಸಮಯದಲ್ಲಿ ನಿರ್ಧೇಶಕರಾದ ರುದ್ರಪ್ಪ ಬಳಿಗಾರ, ಶಿವಬಸು ಸುಣದೋಳಿ, ಶಿವಬೋಧ ಉದಗಟ್ಟಿ, ಪಾಂಡುರಂಗ ಮಹೇಂದ್ರಕರ, ಪ್ರಶಾಂತ ನಿಡಗುಂದಿ, ಶಿವಪ್ಪ ಭುಜನ್ನವರ, ಮಹಾದೇವ ಗೋಕಾಕ, ಶೈಲಾಜಿ ನಾರಯಣಕರ, ಲಕ್ಷ್ಮಿ ಶಿವಾಪೂರ, ರಶ್ಮಿ ಸಸಾಲಟ್ಟಿ, ಘಟಪ್ರಭಾ, ಮಹಾಲಿಂಗಪೂರ, ಹಾರೋಗೇರಿ, ಗೋಕಾಕ ಮತ್ತು ತೇರದಾಳ ಶಾಖಾ ಸಲಹಾ ಸಮಿತಿಯ ಸದಸ್ಯರು, ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು,

ಪ್ರಧಾನ ಕಾರ್ಯದರ್ಶಿ ಬಸವರಾಜ ಕುದರಿ ಸ್ವಾಗತಿಸಿದರು, ಸಹ ಕಾರ್ಯದರ್ಶಿ ಮಲ್ಲಿಕಾರ್ಜುನ ಹಂದಿಗುಂದ ನಿರೂಪಿಸಿದರು, ಸಿಬ್ಬಂದಿ ಬಸವರಾಜ ಶೆಕ್ಕಿ ವಂದಿಸಿದರು.

# 15ಲಕ್ಷ ವೆಚ್ಚದ ಕಾಂಕ್ರೇಟ್ ರಸ್ತೆ ಕಾಮಗಾರಿಗೆ ಭೂಮಿಪೂಜೆ



**ಮೂಡಲಗಿ:** ರಾಕ್ಷಸ ಸಂತತಿಯನ್ನು ನಾಶಗೊಳಿಸಿದ ಆದಿಶಕ್ತಿ ದುರ್ಗಾಮಾತೆಯ ಆರಾಧನೆ ಮತ್ತು ನಾಮಸ್ಥರಣೆಗೆ ಮೀಸಲಾದ ನವರಾತ್ರಿ ದಸರಾ ಹಬ್ಬದ ಆಚರಣೆಯು ಕೇವಲ ಸಾಂಕೇತಿಕವಾಗದೆ, ಮನುಷ್ಯ ತನ್ನ ಅಂತರಂಗ ಮತ್ತು ಬಹಿರಂಗ ಶುದ್ದಿಗೆ ಅತೀ ಅಗತ್ಯವಾದ ಮೌಲ್ಯಗಳ ಚಿಂತನೆ ಮತ್ತು ಅನುಪಾಲನೆಗೆ ತೆರೆದುಕೊಳ್ಳಬೇಕೆಂಬುದೇ ನವರಾತ್ರಿ ಹಬ್ಬದ ಬಹುಮುಖ್ಯ ಆಶಯವಾಗಿದೆ ಎಂದು ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ಹೇಳಿದರು.

ಮಂಗಳವಾರ ಮಸಗುಪ್ಪಿ ಗ್ರಾಮದ ಶ್ರೀ ಮಹಾಲಕ್ಷ್ಮೀ ದೇವಸ್ಥಾನದಿಂದ ಯಾದವಾಡ ಮುಖ್ಯ-ರಸ್ತೆಯವರೆಗೆ ರಾಜ್ಯಸಭಾ ಸಂಸದರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ರೂ. 15 ಲಕ್ಷಗಳ ವೆಚ್ಚದಲ್ಲಿ ಕಾಂಕ್ರೇಟ್ ರಸ್ತೆ ಹಾಗೂ ರೂ. 5 ಲಕ್ಷಗಳ ವೆಚ್ಚದಲ್ಲಿ ಸಮುದಾಯ ನಿರ್ಮಾಣ ಕಾಮಗಾರಿಗಳಿಗೆ ಭೂಮಿ ಪೂಜೆ ನೇರವೇರಿಸಿ ಅವರು ಮಾತನಾಡಿದರು.

ಮಸಗುಪ್ಪಿ ಗ್ರಾಮದಲ್ಲಿ ಮಹಾಲಕ್ಷ್ಮೀದೇವಿಯು ಬಂದು ನೆಲಸಿದ್ದು ಇಡಿ ನಮ್ಮ ತಾಲೂಕಿಗೆ ಒಂದು ದೈವಭಕ್ತಿಯ ಪ್ರತೀಕವಾಗಿದೆ. ನವರಾತ್ರಿ ಹಬ್ಬ ನಮ್ಮಲ್ಲಿರುವ ಅಸೂಯೆ ಗುಣಗಳನ್ನು ಶಮನಗೊಳಿಸಿ ದೈವಿ ಗುಣಧರ್ಮ ಬರುವ ಹಾಗೆ ಮಾಡುವ ಅಪರೂಪದ ಹಬ್ಬವಾಗಿದೆ ಎಂದರು.

ಈ ಮುಂಚೆ ಗ್ರಾಮದಲ್ಲಿರುವ ಮಹಾಲಕ್ಷ್ಮೀ ಪ್ರೌಢ ಶಾಲೆ ಕೊಠಡಿ ನಿರ್ಮಾಣಕ್ಕೆ 10 ಲಕ್ಷ, ನೀಡಲಾಗಿದೆ. ಮುಂಬರುವ ದಿನದಲ್ಲಿ ಗ್ರಾಮದ ಯುವಕರಿಗೆ ವ್ಯಾಯಾಮ ಮಾಡಲು ಓಪನ್ ಜಿಮ್‌ನ್ನು ನೀಡುತ್ತಿದ್ದೇನೆ ಮತ್ತು ಗ್ರಾಮದ ಅಭಿವೃದ್ಧಿ ಕಾರ್ಯಗಳಿಗೆ ನನ್ನ ಸಹಕಾರ ಇದ್ದೇ ಇರುತ್ತದೆ ಗ್ರಾಮಸ್ಥರು ಇದರ ಸದುಪಯೋಗ ಪಡಿಸಿಕೊಳ್ಳಬೇಕೆಂದು ವಿನಂತಿಸಿದರು.

ಈ ಸಂದರ್ಭದಲ್ಲಿ ಗ್ರಾ.ಪಂ. ಅಧ್ಯಕ್ಷ ಬಸವರಾಜ ಭುಜನ್ನವರ, ಭರಮಪ್ಪ ಗಂಗಣ್ಣವರ, ಭರಮಪ್ಪ ಆಶಿರೊಟ್ಟಿ, ಬಸವರಾಜ ಕಡಾಡಿ, ಸಂಜು ಹೋಸಕೊಟೆ, ರಾಮಣ್ಣ ಗಂಗಣ್ಣವರ, ಸಾತಪ್ಪ ಕೊಳದುರ್ಗಿ, ಲಕ್ಷ್ಮಣ ನರಗುಂದ, ಕೆಂಚಪ್ಪ ಸಿಂತ್ರಿ, ನಿಂಗಪ್ಪ ಯಕ್ಕುಂಡಿ, ಪ್ರಕಾಶ ಗೊಂದಿ, ಬಸವರಾಜ ಗಾಡವಿ, ನಿಂಗಪ್ಪಾ ತೋಳಿ, ಲಕ್ಕಪ್ಪ ಮಕರದ, ವಿರೂಪಾಕ್ಷ ಕೊಳವಿ, ಹಣಮಂತ ಕುಲಕರ್ಣಿ, ಕೃಷ್ಣಾ ಆಶಿರೊಟ್ಟಿ, ಈರಪ್ಪ ಡವಳೇಶ್ವರ ಸೇರಿದಂತೆ ಸ್ಥಳೀಯ ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಸಹಕಾರಿ ಸಂಘದ 79ನೇ ವಾರ್ಷಿಕ ಮಹಾಸಭೆ



**ಮುದ್ದೇಬಿಹಾಳ:** ಒಂದು ಸಂಘ ಬೆಳೆಯಲು ಅದರ ಸರ್ವಾಂಗೀಣ ಅಭಿವೃದ್ಧಿಯಾಗಲು ಸಂಘದ ಸರ್ವ ಸದಸ್ಯರ ಬೆಂಬಲ ಸಹಕಾರ ಮುಖ್ಯವಾವುತ್ತದೆ ಎಂದು ಬಿದರಕುಂದಿ ವಿವಿದ್ದೋದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರಿ ಸಂಘದ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಬಿ.ಸಿ ಪಾಟೀಲ್ ಹೇಳಿದರು.

ಅವರು ಸೋಮವಾರ ಸಂಘದ 79 ನೇ ವಾರ್ಷಿಕ ಮಹಾಸಭೆಯ ವಾರ್ಷಿಕ ವರದಿ ವಾಚಿಸಿ ಮಾತನಾಡಿದರು ನಮ್ಮ ಕೃಷಿ ಸಹಕಾರಿ ಸಂಘದಲ್ಲಿ ರೈತರು ತಮ್ಮ ನೀರಾವರಿ ತೋಟದಲ್ಲಿ ಮನೆ ಕಟ್ಟಲು ಹಾಗೂ ಕೋಳಿ ಕುರಿ ಮೇಕೆ ಸಾಗಾಣಿಕೆ ಹೈನುಗಾರಿಕೆಗೆ ಸಾಲ ಸೌಲಭ್ಯ ಸಿಗುತ್ತದೆ ಅದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದ ಅವರು ಪ್ರಸ್ತಕ 2024/25 ರಲ್ಲಿ ಸಂಘ 3 ಲಕ್ಷ ರೂ ನಿವ್ವಳ ಲಾಭಗಳಿಸಿದೆ ಎಂದರು.

ಸಭೆಯಲ್ಲಿ ಸದಸ್ಯರು ಸಂಘದ ಸ್ವಂತ ಕಚೇರಿ ಹಾಗೂ ಗೋದಾಮು ಕಟ್ಟಡ ಯಾವಾಗ ಮಾಡುತ್ತಿರಿ ಎಂಬ ಪ್ರಶ್ನೆ ಸೇರಿದಂತೆ ಸಭೆಯಲ್ಲಿ ಚರ್ಚಿಸಿದ ಇತರೆ ಪ್ರಶ್ನೆಗಳಿಗೆ ಉತ್ತರಿಸಿದ ನಿರ್ದೇಶಕರಾದ ಚಂದ್ರಶೇಖರ ಅಂಗಡಿ, ಸೋಮಶೇಖರ ಸಜ್ಜನ, ಬಸಮ್ಮ ಬಿರಾದಾರ ಬರುವ ವರ್ಷದಲ್ಲಿ ಸಂಘದಿಂದ ಗೋದಾಮು ಕಟ್ಟಡ ನಿರ್ಮಾಣ ಮಾಡಲಾಗುತ್ತದೆ ಈ ಕುರಿತು ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದ ಅವರು ರೈತರು ಹೈನುಗಾರಿಕೆಯ ತರಬೇತಿ ಪಡೆಯಲು ಅವಕಾಶ ಕಲ್ಪಿಸಲಾಗುತ್ತದೆ ನಮ್ಮ ಸಂಘದಲ್ಲಿ ನೀರಾವರಿ ಹೊಂದಿದ ರೈತರಿಗೆ ಟ್ರ್ಯಾಕ್ಟರ್ ಸಾಲ ನೀಡಲಾಗುತ್ತದೆ ಎಂದರು.

ಸಭೆಯಲ್ಲಿ ಸಂಘದ ಅಧ್ಯಕ್ಷ ಶಂಕ್ರಪ್ಪ ಸಜ್ಜನ, ಉಪಾಧ್ಯಕ್ಷ ಮಲ್ಲಪ್ಪ ಕುಂಬಾರ, ಶರಣಗೌಡ ಪಾಟೀಲ್, ಗಿರಿಮಲ್ಲಪ್ಪ ಬಿಜ್ಜೂರ,ಶಿವಯ್ಯ ಹಿರೇಮಠ, ಕೃಷ್ಣಪ್ಪ ಲಮಾಣಿ, ಸಿದ್ದಪ್ಪ ಬಿರಾದಾರ, ನೂರಜಾನಬಿ ಮುಲ್ಲಾ, ಸಂಗಮ್ಮ ತಳವಾರ ಸೇರಿದಂತೆ ಗ್ರಾಮದ ಗಣ್ಯರು ಹಿರಿಯರು ಹಾಗೂ ಸಂಘದ ಸದಸ್ಯರು ಸಿಬ್ಬಂದಿ ಭಾಗವಹಿಸಿದ್ದರು.

# ಸೈಕ್ಲಿಂಗ್ ಸ್ಪರ್ಧೆ: ರಾಷ್ಟ್ರಮಟ್ಟಕ್ಕೆ ಆಯ್ಕೆ



**ಮೂಡಲಗಿ:** ಇದೇ ಸಪ್ಟಂಬರ 14 ಮತ್ತು 15 ರಂದು ಬಾಗಲಕೋಟ ಜಿಲ್ಲೆಯ ಬೀಳಗಿಯಲ್ಲಿ ಬಾಗಲಕೋಟ ಜಿಲ್ಲಾ ಸೈಕ್ಲಿಂಗ್ ಅಸೋಶಿಯೇಷನ್ ಹಾಗೂ ಕ್ರೀಡಾ ಸಂಘ ಬೀಳಗಿಯವರ ಸಂಯುಕ್ತಾಶ್ರಯದಲ್ಲಿ ಜರುಗಿದ 2025-26 ನೇ ಸಾಲಿನ 20 ನೇ ರಾಜ್ಯ ಮಟ್ಟದಎಮ್.ಟಿ.ಬಿ. ಸೈಕ್ಲಿಂಗ್ ಸ್ಪರ್ಧೆಯಲ್ಲಿ ಮೂಡಲಗಿ ಶಿಕ್ಷಣ ಸಂಸ್ಥೆಯ ಕಲಾ, ವಾಣಿಜ್ಯ ಹಾಗೂ ಬಿ.ಸಿ.ಎ. ಮಹಾವಿದ್ಯಾಲಯದ ಬಿ.ಎ. ಪ್ರಥಮ ಸೆಮಿಸ್ಟರ್‌ನ ಪೂಜಾ ಮಠಪತಿ ಮಹಾವಿದ್ಯಾಲಯದ ವತಿಯಿಂದ ಸ್ಪರ್ಧಿಸಿ ತೃತೀಯ ಸ್ಥಾನವನ್ನು ಗಳಿಸಿ ಕಂಚಿನ ಪದಕದೊಂದಿಗೆ, ಬರುವ 2026 ರ ಫೆಬ್ರುವರಿಯಲ್ಲಿ ಅರುಣಾಚಲ ಪ್ರದೇಶದಲ್ಲಿ ಜರುಗಲಿರುವ ರಾಷ್ಟ್ರಮಟ್ಟದ ಸೈಕ್ಲಿಂಗ್ ಸ್ಪರ್ಧೆಗೆ ಆಯ್ಕೆಯಾಗಿದ್ದಾಳೆ. ಕ್ರೀಡಾಪಟುವಿನ ಈ ಸಾಧನೆಗೆ ಸಂಸ್ಥೆಯ ಅಧ್ಯಕ್ಷರಾದ ವೆಂಕಟೇಶ ಸೋನವಾಲ್ಕರ, ಉಪಾಧ್ಯಕ್ಷ ರವಿ ಸೋನವಾಲ್ಕರ, ಆಡಳಿತ ಮಂಡಳಿಯ ನಿರ್ದೇಶಕರು, ಪ್ರಾಚಾರ್ಯ ಡಾ.ಎಸ್. ಎಲ್. ಚಿತ್ರಗಾರ, ಮಹಾವಿದ್ಯಾಲಯದ ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿ ವೃಂದದವರು ಹಾರ್ಧಿಕ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

# ಇಂದು ನೂತನ ಶಾಖೆ ಉದ್ಘಾಟನೆ

**ಮೂಡಲಗಿ:** ನಗರದ ಬಸವೇಶ್ವರ ಅರ್ಬನ್ ಕೋ ಆಪ್ ಕ್ರೆಡಿಟ್ ಸೊಸೈಟಿಯ 17ನೇ ಶಾಖೆಯ ಉದ್ಘಾಟನೆ ಸಮಾರಂಭವು ತೇರದಾಳ ಪಟ್ಟಣದಲ್ಲಿ ನಾಳೆ ಗುರುವಾರ ಸೆ 25ಮುಂಜಾನೆ 11 ಗಂಟೆಗೆ ಜರುಗಲಿದೆ ಎಂದು ಅಧ್ಯಕ್ಷ ಮಲ್ಲಿಕಾರ್ಜುನ ಢವಳೇಶ್ವರ ತಿಳಿಸಿದ್ದಾರೆ,

ಅರಭಾವಿಮಠದ ದುರದುಂಡೇಶ್ವರ ಸಿದ್ದ ಸಂಸ್ಥಾನ ಪುಣ್ಯಾರಣ್ಯ ಶ್ರೀ ಗುರು ಬಸವಲಿಂಗ ಸ್ವಾಮೀಜಿಗಳು ಸುಣದೋಳಿಯ ಜಡಿಸಿದ್ದೇಶ್ವರ ಮಠದ ಶ್ರೀ ಶಿವಾನಂದ ಸ್ವಾಮಿಜಿಗಳು, ತೇರದಾಳ ಮತ್ತು ನಾವಲಗಿಯ ಶ್ರೀ ಗಂಗಾಧರ ಮರಿದೇವರು ಹಿರೇಮಠ ಸ್ವಾಮಿಜಿಗಳು, ಮೂಡಲಗಿಯ ಶಿವಬೋಧರಂಗ ಮಠದ ಶ್ರೀ ದತ್ತಾತ್ರಯಬೋಧ ಸ್ವಾಮಿಗಳು. ಶ್ರೀ ವೇಧಮೂರ್ತಿ ಸೋಮಯ್ಯ ಅಜ್ಜನವರು. ತಮದಡ್ಡಿಯ ಚಂದ್ರಗಿರಿದೇವಿ ಮಠದ ಶ್ರೀ ಗಂಗಾಧರ ಇವರುಗಳ ದಿವ್ಯ ಸಾನಿಧ್ಯದಲ್ಲಿ ತೇರದಾಳ ಕ್ಷೇತ್ರದ ಶಾಸಕ ಸಿದ್ಧು ಸವದಿ ನೂತನ ಶಾಖೆಯನ್ನು ಉದ್ಘಾಟಿಸಲಿದ್ದಾರೆ, ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷ ಮಲ್ಲಿಕಾರ್ಜುನ ಢವಳೇಶ್ವರ ವಹಿಸುವರು ಎಂದು ವ್ಯವಸ್ಥಾಪಕ ಬಸವರಾಜ ಬಡಿಗೇರ ತಿಳಿಸಿದ್ದಾರೆ.

# ಪೋಷಣ್ ಮಾಸಾಚರಣೆ ಉದ್ಘಾಟನೆ

**ರಾಯಬಾಗ:** ತಾಲ್ಲೂಕು ಮಟ್ಟದ ಪೋಷಣ್ ಮಾಸಾಚರಣೆ ಕಾರ್ಯಕ್ರಮವನ್ನು ಇಂದು ಭವ್ಯವಾಗಿ ಉದ್ಘಾಟಿಸಲಾಯಿತು.

ಪಟ್ಟಣದ ಬಾಬು ಜಗಜೀವನ್ ರಾಮ್ ಸಭಾಭವನದಲ್ಲಿ ಮಂಗಳವಾರ ನಡೆದ ಈ ಕಾರ್ಯಕ್ರಮಕ್ಕೆ ಶಾಸಕ ಡಿ.ಎಂ.ಐಹೊಳೆ ಹಾಗೂ ಕುಡಚಿ ಶಾಸಕ ಮಹೇಂದ್ರ ತಮ್ಮನ್ನವರ ಚಾಲನೆ ಚಾಲನೆ ನೀಡಿದರು.

ಶಾಸಕ ಡಿ ಎಂ ಐಹೊಳೆ ಮಾತನಾಡಿ,"ಪೋಷಣ್ ಮಾಸಾಚರಣೆ ಆರೋಗ್ಯಕರ ಸಮಾಜ ನಿರ್ಮಾಣದ ಹೆಜ್ಜೆ. ಮಕ್ಕಳಿಗೆ, ಗರ್ಭಿಣಿಯರಿಗೆ ಮತ್ತು ತಾಯಿ ಹಾಲು ನೀಡುವ ತಾಯಂದಿರಿಗೆ ಸಮತೋಲನ ಆಹಾರ ಒದಗಿಸುವುದು ಸರ್ಕಾರದ ಪ್ರಮುಖ ಗುರಿ. ಪ್ರತಿಯೊಬ್ಬರೂ ಪೋಷಕಾಂಶಯುಕ್ತ ಆಹಾರ ಸೇವನೆಗೆ ಒತ್ತುಕೊಡಬೇಕು" ಎಂದರು.

ಕುಡಚಿ ಶಾಸಕ ಮಹೇಂದ್ರ ತಮ್ಮನ್ನವರ ಮಾತನಾಡಿ,"ಸರ್ಕಾರದ ವಿವಿಧ ಯೋಜನೆಗಳ ಮೂಲಕ ತಾಯಿ ಮತ್ತು ಮಗುವಿನ ಆರೋಗ್ಯ ಕಾಪಾಡಲು ಹಲವಾರು ಕ್ರಮಗಳನ್ನು ಕೈಗೊಳ್ಳಲಾಗಿದೆ. ಆದರೆ ಜನರ ಜಾಗೃತಿ ಇಲ್ಲದೆ ಅದು ಫಲಕಾರಿಯಾಗುವುದಿಲ್ಲ. ಪ್ರತಿಯೊಬ್ಬರೂ ಪೌಷ್ಠಿಕ ಆಹಾರ ಸೇವನೆಗೆ ಒತ್ತುಕೊಟ್ಟು, ಸಮತೋಲನ ಆಹಾರವನ್ನು ಮಕ್ಕಳಿಗೆ ಒದಗಿಸಬೇಕು" ಎಂದು ತಿಳಿಸಿದರು. ತಹಶೀಲ್ದಾರ್ ಸುರೇಶ ಮುಂಜೆ,ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಎಂ ಎನ್ ಚೇತನಕುಮಾರ, ಪಟ್ಟಣ ಪಂಚಾಯಿತಿ ಅಧ್ಯಕ್ಷ ಅಶೋಕ ಅಂಗಡಿ,ಪ ಪಂ ಮುಖ್ಯಾಧಿಕಾರಿ ಸಂಜೀವ ಮಾಂಗ,ಸಮಾಜಕಲ್ಯಾಣ ಅಧಿಕಾರಿ ವಿಠ್ಠಲ ಚಂದರಗಿ, ಬಿಇಓ ಬಸವರಾಜಪ್ಪ ಆರ್,ಆರ್ ಬಿ ಮನುವಡ್ಡರ, ಶಿಶು ಅಭಿವೃದ್ಧಿ ಅಧಿಕಾರಿ ಭಾರತಿ ಕಾಂಬಳೆ,ಪ ಪಂ ಸದಸ್ಯ ಗಣೇಶ ಕಾಂಬಳೆ, ಕುಡಚಿ ಬ್ಲಾಕ್ ಕಾಂಗ್ರೆಸ್‌ಅಧ್ಯಕ್ಷ ಪ್ರದೀಪ ಹಾಲ್ಲುಣಿ ಸೇರಿದಂತೆ ಅಂಗನವಾಡಿ ಕಾರ್ಯಕರ್ತರು ಸಿಬ್ಬಂದಿ ಹಾಗೂ ಇತರರು ಇದ್ದರು.



ಕ್ರಾಂತಿ ಮಹಿಳಾ ಮಂಡಳ, ಉಮಾ ಸಂಗೀತ ಪ್ರತಿಷ್ಠಾನದಿಂದ ಶಿಕ್ಷಕರ ದಿನಾಚರಣೆ

# ಮಹಿಳಾ ಸಂಘಟನೆ ಕಾರ್ಯ ಶ್ಲಾಘನೀಯ



**ಬೆಳಗಾವಿ:** ಸಮಾಜದ ಸರ್ವತೋಮುಖ ಬೆಳವಣಿಗೆಗೆ ಪೂರಕವಾದ ಕಾರ್ಯಕ್ರಮಗಳನ್ನು ಹಮ್ಮಿಕೊಂಡು, ಈ ಮಹಿಳಾ ಸಂಘಟನೆ ಕಾರ್ಯ ಶ್ಲಾಘನೀಯ ಎಂದು ನಿವೃತ್ತಿ ಯೋಧರು, ಶಿಕ್ಷಕ ಅರ್ಜುನ್ ಬೈಲೂರು ಅವರು ಹೇಳಿದರು.

ನಗರದ ಹಿಂದವಾಡಿಯ ಉಮೇಶ್ ದೇಶ್ಪೂರ್ ಅವರ ನಿವಾಸದಲ್ಲಿ ಕ್ರಾಂತಿ ಮಹಿಳಾ ಮಂಡಳ ಮತ್ತು ಉಮಾ ಸಂಗೀತ ಪ್ರತಿಷ್ಠಾನದ ವತಿಯಿಂದ ಶಿಕ್ಷಕರ ದಿನಾಚರಣೆಯ ಆಚರಿಸಲಾಯಿತು, ಸರ್ವಪಲ್ಲಿ ರಾಧಾಕೃಷ್ಣನ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಅವರು ಮಾತನಾಡಿದರು.

ಸಂಘಟನೆ ನಿರ್ಮಿಸುವುದು ಮುಖ್ಯವಲ್ಲ, ಅದನ್ನು ಯೋಗ್ಯವಾದ ರೀತಿಯಲ್ಲಿ ನಡೆಸಿಕೊಂಡು ಸಮಾಜದ ಹಿತಕ್ಕಾಗಿ ಕೆಲಸ ಮಾಡುವುದು ಮುಖ್ಯ. ಕ್ರಾಂತಿ ಮಹಿಳಾ ಮಂಡಳ ಮತ್ತು ಉಮಾ ಸಂಗೀತ ಪ್ರತಿಷ್ಠಾನವು ಸಮಾಜಮುಖಿ ಕಾರ್ಯಗಳನ್ನು ತಿಳಿದು ಇದರಿಂದ ನಮಗೂ ಸ್ಫೂರ್ತಿ ದೊರೆತಿದೆ ಎಂದು ಹೇಳಿದರು.

ಡಾ, ರಾಧಾಕೃಷ್ಣನ್ ಅವರು ಶಿಕ್ಷಕರು, ವಿದ್ವಾಂಸರು ಮತ್ತು ತತ್ವಜ್ಞಾನಿಗಳಾಗಿ ಅವರ ಅದ್ಭುತ ಕೌಶಲ್ಯಯುತ ವ್ಯಕ್ತಿಯಾಗಿ ಹೆಸರು ಪಡೆದವರು. ತಮ್ಮ ಜೀವನದುದ್ದಕ್ಕೂ, ಅವರು ಇತರರಿಗೆ ಓದಿನ ಕುರಿತು ಆಸಕ್ತಿ ಬೆಳೆಸಿ, ವಿದ್ಯಾಭ್ಯಾಸ ಆರಂಭಮಾಡುವಂತೆ ಪ್ರೇರೇಪಿಸಿದರು. ಅಷ್ಟೇ ಅಲ್ಲದೇ, ರಾಷ್ಟ್ರದ ಅಭಿವೃದ್ಧಿಗೆ ಶಿಕ್ಷಣದ ಶಕ್ತಿಯ ಎಷ್ಟು ಎಂಬುದನ್ನು ಒತ್ತಿ ಹೇಳಿದರು. ತಮ್ಮ ಜೀವನಾದ್ಯಾಂತ ಜನರಿಗೆ ಸಾಕ್ಷರತೆ ಅರಿವನ್ನು ಹರಡಲು ಪ್ರಯತ್ನಿಸಿದ ಅವರ ಜನ್ಮ ದಿನವನ್ನು ಶಿಕ್ಷಣ ದಿನವಾಗಿ ದೇಶದಲ್ಲಿ ಆಚರಿಸಲಾಗುತ್ತಿದೆ ಎಂದು ತಿಳಿಸಿದರು. ಜಿಲ್ಲಾ ಅತ್ಯುತ್ತಮ ಶಿಕ್ಷಕಿ ಪ್ರಶಸ್ತಿ ಪಡೆದ ವನಿತಾ ಹಾಲಪ್ಪನವರ್ ಅವರು ಮಾತನಾಡಿ, ಕ್ರಾಂತಿ ಮಹಿಳಾ ಮಂಡಳ ಮತ್ತು ಉಮಾ ಸಂಗೀತ ಪ್ರತಿಷ್ಠಾನವು ಸಾಮಾಜಿಕ ಕಾರ್ಯಗಳನ್ನುಸತೀವ ಸಂತೋಷವಾಗಿದೆ. ಎಲ್ಲ ಮಹಿಳೆಯರು ಒಗ್ಗೂಡಿಕೊಂಡು ಸಮಾಜ ಸೇವೆಗಾಗಿ ಶ್ರಮಿಸುತ್ತಿರುವುದು ಸಮಾಜಕ್ಕೆ ಮಾದರಿಯಾಗಿದೆ. ನಿಮ್ಮಂತ ಸಂಸ್ಥೆಯಿಂದ ನನಗೆ ಸನ್ಮಾನ ಮಾಡಿಕೊಳ್ಳುವ ಅವಕಾಶ ಸಿಕ್ಕಿರುವುದು ನನ್ನ ಸೌಭಾಗ್ಯ ಎಂದು ಹೇಳಿದರು. ಈ ಸಂದರ್ಭದಲ್ಲಿ ಅಧ್ಯಕ್ಷರಾದ ಮಂಗಲ್ ಮಠದವರು ಸ್ವಾಗತಿಸಿದರು, ಕಾರ್ಯದರ್ಶಿ ಭರತಿ ರತ್ನಪ್ಗೊಳ್ ಪ್ರಾಸ್ತಾವಿಕವಾಗಿ ಮಾತನಾಡಿದರು, ಗೀತಾ ಅಕ್ಷತಾ ಅನಿತಾ ಸುಂದರವಾಗಿ ಪ್ರಾರ್ಥಿಸಿದರು. ಮಮತಾ ಆಂಟಿನ, ರೇಣುಕಾ ಕಾಂಬ್ಳೆ ಅತಿಥಿಗಳ ಪರಿಚಯ ಮಾಡಿದರು, ಆಶಾ ನಿಲಜಗಿ, ತ್ರಿಶಲಾ ಪಾಯಪನವರ್ ,ಮಂಡಲದ ಎಲ್ಲ ಸದಸ್ಯರು ಹರ್ಷಾಶ್ರಮದ ಮುದ್ದು ಮಕ್ಕಳು ರಾಜೇಂದ್ರ ಮಠದ ಮತ್ತು ಗುಡಗ್ನಟ್ಟಿ ಇತರರು ಇದ್ದರು. ರತ್ನಶ್ರೀ ಗುಡೆರ್ ನಿರೂಪಿಸಿದರು. ಶೋಭಾ ಕಾಡನ್ನವರ್ ವಂದಿಸಿದರು.

# ಅದ್ದೂರಿಯಾಗಿ ದುರ್ಗಾದೇವಿ ಮೂರ್ತಿ ಪ್ರತಿಷ್ಠಾಪನೆ



**ಮೂಡಲಗಿ:** ಪ್ರತಿ ವರ್ಷದಂತೆ ನವರಾತ್ರಿ ಅಂಗವಾಗಿ ಪಟ್ಟಣದ ಬಸವ ರಂಗಮಂಟಪದಲ್ಲಿ ಶ್ರೀ ದುರ್ಗಾದೇವಿ ನವರಾತ್ರಿ ಉತ್ಸವ ಸಮಿತಿವತಿಯಿಂದ ಸೋಮವಾರ ಶ್ರೀ ದುರ್ಗಾದೇವಿ ಮೂರ್ತಿ ಪ್ರತಿಷ್ಠಾಪಿಸಲಾಯಿತು.

ಭಾನುವಾರ ಸಂಜೆ ಸಂಭ್ರಮದಿಂದ ಶ್ರೀ ದುರ್ಗಾ ಮೆರವಣಿಗೆ ಜರುಗಿತು. ತುಳಜಾಪುರ ಅಂಬಾಭವಾನಿ ದೇವಸ್ಥಾನದಿಂದ ತಂದ ಜ್ಯೋತಿಯ ಜತೆಗೆ ಮೆರವಣಿಗೆ ಸಮಿತಿಯವರು ಮತ್ತು ಗಣ್ಯರು ಮೆರವಣಿಗೆಗೆ ಚಾಲನೆ ನೀಡಿದರು. ಸಕಲ್ ವಾದ್ಯ ಮೇಳಗಳೊಂದಿಗೆ ಮೇರವಣಿಗೆಯು ಮೂಡಲಗಿಯ ಪಟ್ಟಣದಲ್ಲಿ ವಿಶೇಷ ರಂಗು ತುಂಬಿತು,

ಬಸವೇಶ್ವರ ದೇವಸ್ಥಾನದಿಂದ ಪ್ರಾರಂಭವಾದ ಮೆರವಣಿಗೆ ವಿವಿಧ ವೃತ್ತಗಳ ಮೂಲಕ ಹಾಯ್ದು ಕಲ್ಲೇಶ್ವರ ವೃತ್ತ ಮೂಲಕ ಬಸವ ರಂಗಮಂಟಪಕ್ಕೆ ತಲುಪಿತು. ವಿವಿಧ ವಾರ್ಡಗಳಲ್ಲಿ ಮಹಿಳೆಯರು ತಮ್ಮ ತಮ್ಮ ಮನೆಯ ಮುಂದೆ ರಂಗೋಲಿಯಿಂದ ರಸ್ತೆಯನ್ನು ಅಲಂಕರಿಸಿ ಶೃಂಗಾರಗೋಳಿಸಿದ್ದರು ಮೇರವಣಿಗೆಯುದ್ದಕ್ಕೂ ಜೈಕಾರದ ಘೋಷನೆಗಳು ಮೋಳಗಿದವು ಸೋಮವಾರ ಮಧ್ಯಾಹ್ನ ವಿವಿಧ ಮಂತ್ರ ಘೋಷಣೆಗಳಿಂದ ಅರ್ಚಕರು ದುರ್ಗೆಯ ಪ್ರತಿಷ್ಠಾಪನೆ ನೆರವೇರಿಸಿದರು,

# ಮೋದಿ ದಕ್ಷ ಆಡಳಿತ ವಿಶ್ವ ಗುರುವಾಗುವತ್ತ ಭಾರತ



**ವಿಜಯಪುರ:** ಪ್ರಧಾನಿ ನರೇಂದ್ರ ಮೋದಿ ಅವರ ದಕ್ಷ ಆಡಳಿತದಿಂದ ದೇಶ ಅಭಿವೃದ್ದಿಯತ್ತ ಶರವೇಗದಲ್ಲಿ ಸಾಗುತ್ತಿದ್ದು ಕೆಲವೇ ವರ್ಷಗಳಲ್ಲಿ ಭಾರತ ವಿಶ್ವಗುರುವಾಗುವುದು ಖಚಿತ ಎಂದು ಖ್ಯಾತ ನ್ಯಾಯವಾದಿ ಬಾಬು ಹಿಪ್ಪರಗಿ ವಿಶ್ವಾಸ ವ್ಯಕ್ತಪಡಿಸಿದರು.

ಇತ್ತೀಚೆಗೆ ಯೋಗಾಪುರದ ಶ್ರೀ ಸತ್ಯ ಸಾಯಿಬಾಬಾ ಕಲಾ ವಾಣಿಜ್ಯ ಹಾಗೂ ವಿಜ್ಞಾನ ಸ್ವತಂತ್ರ ಪದವಿ ಪೂರ್ವ ಕಾಲೇಜಿನಲ್ಲಿ ಭಾರತ ಸರ್ಕಾರ ಯುವ ಕಾರ್ಯ ಹಾಗೂ ಕ್ರೀಡಾ ಸಚಿವಾಲಯ ಮೇರಾ ಯುವ ಭಾರತ ಹಾಗೂ ಯುಥ್ ಯುನಿವರ್ಸಲ್ ವ್ಹಾಲೆಂಟರಿ ಅಸೋಸಿಯೇಶನ್ (ಯುವ) (ರಿ) ವಿಜಯಪುರ ಇವರ ಸಂಯುಕ್ತಾಶ್ರ ಯದಲ್ಲಿ ಭಾರತದ ಹೆಮ್ಮೆಯ ಪ್ರಧಾನಿ ಸನ್ಮಾನ್ಯ ಶ್ರೀ ನರೇಂದ್ರ ಮೋದಿ ಅವರ 75 ನೆಯ ಜನ್ಮ ದಿನಾಚರಣೆಯ ಅಂಗವಾಗಿ "ವಿಕಾಸ ದಿವಸ 2025 ಹಾಗೂ ವಿದ್ಯಾರ್ಥಿಗ ಳಿಗೆ ಪ್ರಬಂಧ ಸ್ಪರ್ಧೆ" ಕಾರ್ಯಕ್ರ ಮವನ್ನು ಜ್ಯೋತಿ ಪ್ರಜ್ವಲಿಸಿ ಉದ್ಘಾಟಿಸಿ ಮಾತನಾಡಿದರು.

ಶತ್ರುವಿಗೆ ಶತ್ರು, ಮಿತ್ರರಿಗೆ ಮಿತ್ರ ಎನ್ನುವ ಘಟ್ಟಿ ನಿಲುವುಗಳೊಂದಿಗೆ ಪ್ರಧಾನಿ ಮೋದಿ ಅವರು ವಿಶ್ವದ ವಿವಿಧ ರಾಷ್ಟಗಳೊಂದಿಗೆ ಸೌಹಾರ್ಧ ಸಂಬಂಧ ಬೆಸೆದಿದ್ದು, ಸಭಕಾ ಸಾಥ್ ಸಭಕಾ ವಿಕಾಸ, ವಿಕಸಿತ ಭಾರತ. ಡಿಜಿಟಲ್ ಇಂಡಿಯಾ ಕೌಶಲ್ಯ ಭಾರತ್ ಮಿಷನ್ ನಂತಹ ಯೋಜನೆ ಗಳಿಂದ ಕ್ರಾಂತಿಕಾರಕ ಬದಲಾವಣೆ ತರಲಾಗಿದ್ದು ಮಹಿಳೆಯರು, ಮಕ್ಕಳು, ಹಿರಿಯರು, ಯುವಕರು, ವಿದ್ಯಾರ್ಥಿ ಗಳು ರೈತರು ಕಾರ್ಮಿಕರು ಎಲ್ಲರ ಪ್ರಗತಿಗೆ ಮುನ್ನುಡಿ ಬರೆದಿದ್ದಾರೆ. ಅವರ ಜನ್ಮ ದಿನವಾದ ಇಂದು ವಿಕಾಸ ದಿವಸ ಎಂದು ಆಚರಿಸಲಾಗು ತ್ತಿದ್ದು. ಅವರು ನೂರಾರು ವರ್ಷ ಬಾಳಲಿ. ದೇಶವನ್ನು ಆಳಲಿ. ಪ್ರಗತಿಯತ್ತ ಮುನ್ನಡೆಸಲಿ ಎಂದು ಶುಭ ಹಾರೈಸಿದರು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಹಸಿರು ಕರ್ನಾಟಕ ರಾಜ್ಯ ಕಟ್ಟಡ ನಿರ್ಮಾಣ ಮತ್ತು ಇತರೆ ಕಾರ್ಮಿಕರ ಒಕ್ಕೂಟದ ರಾಜ್ಯಾಧ್ಯಕ್ಷ ಪ್ರಕಾಶ ರಜಪೂತ ಮಾತನಾಡಿ ಯುವ ಶಕ್ತಿಯೇ ವಿಶ್ವ ಶಕ್ತಿಯಾಗಿದ್ದು, ಪ್ರಪಂಚದ ಅರ್ಧಕ್ಕಿಂತ ಹೆಚ್ಚಿನ ಜನಸಂಖ್ಯೆ ಯುವಕರೇ ಆಗಿದ್ದು, ಬದಲಾವಣೆಗೆ ಮುನ್ನುಡಿ ಬರೆದವರು ಯುವಕರೇ ಆಗಿದ್ದಾರೆ ಕಾರಣ ವಿದ್ಯಾರ್ಥಿ ಜೀವನದಲ್ಲಿ ಯುವಕ ಯುವತಿ ಯರು ಅಡ್ಡದಾರಿ ತುಳಿಯದೆ ವಿದ್ಯೆ ವಿನಯ. ಮಾನವೀಯ ಗುಣಗಳನ್ನು ಅಳವಡಿಸಿಕೊಂಡು ದೇಶದ ಪ್ರಗತಿಗೆ ನಾಂದಿ ಹಾಡಿ. ಹೆತ್ತ ತಂದೆ ತಾಯಿ ಕಲಿಸಿದ ಗುರುಗಳು, ಬಂಧು ಮಿತ್ರರಿಗೆ ನಾಡಿಗೆ ಕೀರ್ತಿ ತರಬೇಕು. ಕಾರ್ಮಿಕರ ಜೀವನ ಸುಧಾರಿಸಲು ಸರಕಾರ ಹಲವಾರು ಯೋಜನೆಗಳನ್ನು ಜಾರಿಗೆ ತಂದಿದ್ದು ಕಾರ್ಮಿಕರ ಗುರುತಿನ ಪತ್ರ ಹೊಂದಿರುವ ತಂದೆ ತಾಯಿಯ ಮಕ್ಕಳಿಗೆ ಸ್ಕಾಲರ್ ಶಿಪ್ ಯೋಜನೆಯನ್ನು ಕಾರ್ಮಿಕರ ಮಕ್ಕಳು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಕರೆ ನೀಡಿದರು.

ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆ ಏರ್ಪಡಿಸಿ, ವಿಜೇತರಿಗೆ ಗ್ರಂಥ ಮತ್ತು ಪದಕ ಬಹುಮಾನ ನೀಡಿ ಗೌರವಿಸಲಾಯಿತು. ಶಿಕ್ಷಕರಾದ ಬಿ.ಜಿ. ಒಡೆಯರ, ಕಲ್ಲೇಶ ತಳವಾರ, ಹೇಮಂತ ಅವಟಿ ಮುಂತಾದವರು ಉಪಸ್ಥಿತರಿದ್ದರು.

ನವರಾತ್ರಿ ಉತ್ಸವ: ಘಟಸ್ಥಾಪನೆ-ಶ್ರೀದೇವಿ ಪುರಾಣ ಪ್ರಾರಂಭೋತ್ಸವ

# ಆರಾಧನೆಯಿಂದ ಜೀವನದಲ್ಲಿ ಸುಖ, ಸಂಪತ್ತು ಪಡೆದು ಸಶಕ್ತರಾಗಿ



**ಗದಗ:** ಪರಶಿವನ ಅರ್ಧಾಂಗಿಯಾದ ಪಾರ್ವತಿ ದೇವಿಯನ್ನು ಶಕ್ತಿ ರೂಪದಲ್ಲಿ ನಾವೆಲ್ಲರೂ ಆರಾಧಿಸುವುದರಿಂದ ನಮ್ಮ ಮನೋಕಾಮನೆಗಳು ನೆರವೇರುತ್ತವೆ. ಸುಖ, ಶಾಂತಿ, ಧೈರ್ಯ, ನೆಮ್ಮದಿ, ಸಂಪತ್ತು ನಮ್ಮದಾಗುವುದರಲ್ಲಿ ಸಂಶಯವೇ ಇಲ್ಲ ಎಂದು ಶುಭ್ ಜುವೆಲ್ಲರ್ಸ್ ಮಾಲೀಕರಾದ ಪೂಜಾ ಕಿರಣ ಭೂಮಾ ಹೇಳಿದರು.

ಅಖಂಡ ಭಾರತದಾದ್ಯಂತ ಶಕ್ತಿಯ ಆರಾಧನೆಯ ಪ್ರಾರಂಭದ ನಿಮಿತ್ತ ನಗರದ ಮುಳಗುಂದನಾಕಾ ಬಳಿಯ ಶ್ರೀಅಡವೀಂದ್ರಸ್ವಾಮಿ ಮಠದಲ್ಲಿ 45ನೇ ವರ್ಷದ ದಸರಾ ಮಹೋತ್ಸವ, ಘಟಸ್ಥಾಪನೆ ಮತ್ತು ಶ್ರೀದೇವಿ ಪುರಾಣ ಪ್ರಾರಂಭೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನವರಾತ್ರಿ ಹಬ್ಬವು ಹಿಂದೂ ಸಂಸ್ಕೃತಿಯಲ್ಲಿ ತನ್ನದೇಯಾದ ವೈಶಿಷ್ಟ್ಯತೆಯನ್ನು ಹೊಂದಿದೆ. ನವದುರ್ಗೆಯರನ್ನು ಪೂಜಿಸುವ ಹಬ್ಬವಾಗಿದೆ. ದುಷ್ಟರನ್ನು ಶಿಕ್ಷಿಸಲು, ಶಿಷ್ಟರನ್ನು ರಕ್ಷಿಸಲು ಶಕ್ತಿ ಸ್ವರೂಪಿಣಿಯಾದ ದುರ್ಗಾದೇವಿಯು ಒಂಬತ್ತು ಅವತಾರಗಳನ್ನು ತಾಳುತ್ತಾಳೆ. ಅಸುರರನ್ನು ಸಂಹರಿಸಿದ ಶಕ್ತಿ ಸ್ವರೂಪಿಣಿಯೇ ದುರ್ಗಾದೇವಿ. ನವರಾತ್ರಿಯ ಒಂಬತ್ತು ದಿನಗಳಲ್ಲಿ ನವದುರ್ಗೆಯರನ್ನು ಒಂದೊಂದು ಅವತಾರದಲ್ಲಿ ಪೂಜಿಸುವ ಮೂಲಕ ನವರಾತ್ರಿ ಹಾಗೂ ದಸರಾ ಹಬ್ಬಗಳನ್ನು ಶಾಂತಿ ಮತ್ತು ಸಂಭ್ರಮದಿಂದ ಆಚರಿಸಿ, ಶ್ರೀದೇವಿ ಹಾಗೂ ಭಗವಂತನ ಅನುಗ್ರಹ ಪಡೆದು ಪಾವನರಾಗೋಣ ಎಂದು ಪೂಜಾ ಭೂಮಾ ಹೇಳಿದರು.

ಸಾನ್ನಿಧ್ಯ ವಹಿಸಿದ್ದ ಮಣಕವಾಡ ಅನ್ನದಾನೀಶ್ವರ ದೇವಮಂದಿರ ಮಹಾಮಠದ ಶೀಗುರು ಅಭಿನವ ಮೃತ್ಯುಂಜಯ ಸ್ವಾಮೀಜಿ ಮಾತನಾಡಿ, ಅರ್ಧನಾರೀಶ್ವರ ಪರಶಿವನೂ ಸಹ ಶಕ್ತಿದೇವತೆ ಮಹಿಮೆಯನ್ನು ಭೂಲೋಕದಲ್ಲಿ ಅವತರಿಸಲು ಪ್ರೇರಣೆ ನೀಡಿದನು. ಕಾಳಿಯ ಆರಾಧಕರಾದ ರಾಮಕೃಷ್ಣ ಪರಮಹಂಸರು ಶಕ್ತಿಯನ್ನು ಪೂಜಿಸುತ್ತಾ, ತಾವೇ ಶಕ್ತಿಯ ಸ್ವರೂಪವೇ ಆಗುತ್ತಿದ್ದರು. ನಾವೆಲ್ಲರೂ ಶ್ರದ್ಧಾಭಕ್ತಿಯಿಂದ ಶಕ್ತಿಯನ್ನು ಆರಾಧಿಸುವವರೇ ಆಗಿರುವುದರಿಂದ ನಮಗೆ ಯಾವುದೇ ತೊಂದರೆಗಳು ಜೀವನದಲ್ಲಿ ಬರುವುದಿಲ್ಲ ಎಂದು ಹೇಳಿದರು.

ಸಮ್ಮುಖ ವಹಿಸಿದ್ದ ಶ್ರೀಮಠದ ಧರ್ಮದರ್ಶಿಗಳಾದ ಮಹೇಶ್ವರ ಸ್ವಾಮೀಜಿ ಮಾತನಾಡಿ, ಶ್ರೀಮಠದಲ್ಲಿ ಜರುಗುವ ದೇವಿ ಪುರಾಣ ಪ್ರವಚನ ಆಲಿಸಿ ಹರ-ಗುರು-ಚರಮೂರ್ತಿಗಳ ಆಶೀರ್ವಚನ ಕೇಳಿ ಜೀವನ ಪಾವನ ಮಾಡಿಕೊಳಳಬೇಕು ಎಂದು ಕರೆ ನೀಡಿದರು.

ಶ್ರೀಅನ್ನಪೂರ್ಣೇಶ್ವರ ಸನ್ನಿಧಿಯಲ್ಲಿ ಡಾ.ರಾಜಗುರು ಗುರುಸ್ವಾಮಿ ಕಲಕೇರಿ ಅವರಿಂದ ಪುರಾಣ ಪ್ರವಚನ ನಡೆಯಿತು. ಚನ್ನಬಸಯ್ಯ ಶಾಸ್ತ್ರಿಗಳು ಹೇಮಗಿರಿಮಠ ಪುರಾಣ ಪಠಿಸಿದರು. ಪಕ್ರುಸಾಬ ಮುಲ್ಲಾ, ಜಗನ್ನಾಥ ಕಲಬುರಗಿ, ಶರಣಕುಮಾರ ಗುತ್ತರಗಿ, ಎಸ್.ಬಿ. ಭಜಂತ್ರಿ ಸಂಗೀತ ಸೇವೆ ನೀಡಿದರು.

ಕಾರ್ಯಕ್ರಮದಲ್ಲ ಕಿರಣ ಪ್ರಕಾಶ ಭೂಮಾ, ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜು ಕುರಡಗಿ, ಭಾಗ್ಯಶ್ರೀ ಕುರಡಗಿ, ಗಂಗಾಧರ ಗಡ್ಡಿ, ಭಾಗ್ಯಶ್ರೀ ಗಡ್ಡಿ, ರಾಜ್ಯ ಸರಕಾರದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಬಿ.ಬಿ. ಅಸೂಟಿ, ಲಲಿತಾ ಅಸೂಟಿ, ಶ್ರೀಅನ್ನಪೂರ್ಣೇಶ್ವರಿದೇವಿ ಜಾತ್ರಾ ಮಹೋತ್ಸವ ಸಮಿತಿಯ ಗೌರವಾಧ್ಯಕ್ಷರಾದ ಎಸ್.ಪಿ. ಸಂಶಿಮಠ, ಅಧ್ಯಕ್ಷರಾದ ಸದಾಶಿವಯ್ಯ ಮದರಿಮಠ, ಮಹಿಳಾ ಸಮಿತಿ ಅಧ್ಯಕ್ಷರಾದ ಸುವರ್ಣಾ ಮದರಿಮಠ, ಪೂಜಾ ಸಮಿತಿ ಅಧ್ಯಕ್ಷರಾದ ಶರಣಯ್ಯಸ್ವಾಮಿ ಶಿವಪ್ಪಯ್ಯನಮಠ, ವೀರೇಶ್ವರ ಸ್ವಾಮಿಗಳು ಹೊಸಳ್ಳಿಮಠ, ಸಹಕಾರ್ಯದರ್ಶಿ ಸುಷ್ಮಾ ಖಂಡಪ್ಪಗೌಡ್ರ, ಕೋಶಾಧ್ಯಕ್ಷರಾದ ಅಶ್ವಿನಿ ನೀಲಗುಂದ, ವಿ.ಎಚ್. ದೇಸಾಯಿಗೌಡ್ರ ಗಣ್ಯರು ಉಪಸ್ಥಿತರಿದ್ದರು.

# ಮನೆಗಳ ಬ್ಲಾಕ್ ತೆರವುಗೊಳಿಸಲು ಪತ್ರ

**ಹಾವೇರಿ:** ಹಾವೇರಿ ಜಿಲ್ಲೆಯ ನೆರೆಸಂತ್ರಸ್ಥರ ಪುನರ್ ವಸತಿ ಯೋಜನೆಯಡಿ 2019-20 ನೇ ಸಾಲಿನಿಂದ 2022-23 ನೇ ಸಾಲಿನ ವರೆಗೆ ಮಂಜೂರಾದ ಮನೆಗಳ ಪೈಕಿ ವಿವಿಧ ಕಾರಣಗಳಿಂದ ರಾಜೀವಗಾಂಧಿ ವಸತಿ ನಿಗಮದ ತಂತ್ರಾಂಶದಲ್ಲಿ ಬ್ಲಾಕ ಆದ ಮನೆಗಳ ತೆರವುಗೊಳಿಸುವ (ಅನ್ ಬ್ಲಾಕ್) ಮಾಡಿ ದೇವರಾಜ ಅರಸು ವಸತಿ ಯೋಜನೆಯಡಿ ಮುಂದುವರೆಸುವಂತೆ ರಾಜೀವ್ ಗಾಂಧಿ ವಸತಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಿಗೆ ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಎಸ್. ಆರ್. ಪಾಟೀಲ ಅವರು ಪತ್ರ ಬರೆದಿದ್ದಾರೆ.

ಈ ಬಗ್ಗೆ ಜಿಲ್ಲೆಯ ತಹಶೀಲದಾರವರುಗಳಿಂದ ಪರಿಶೀಲಿಸಿ, ದೃಢೀಕರಿಸಿ, ವರದಿ ಪಡೆದುಕೊಂಡು, ಸ್ಪಷ್ಟ ಅಭಿಪ್ರಾಯದೊಂದಿಗೆ ಪ್ರಸ್ಥಾವನೆಯನ್ನು ರಾಜೀವ್ ಗಾಂಧಿ ವಸತಿ ನಿಗಮಕ್ಕೆ ಸಲ್ಲಿಸಲಾಗಿದೆ. ಹಾವೇರಿ ಜಿಲ್ಲೆಯ ಒಟ್ಟು 2381 ಪ್ರಕರಣಗಳಲ್ಲಿ ಒಟ್ಟು 819 ಫಲಾನುಭವಿಗಳ 2ನೇ ಹಂತದ ಅನುದಾನವನ್ನು ಪಡೆಯಲು ಅರ್ಹರಿರುವುದರ ಬಗ್ಗೆ ಪರಿಶೀಲನೆ ತಂಡವು ತನಿಖೆ ಮಾಡಿ, ದಾಖಲೆಗಳೊಂದಿಗೆ ವರದಿ ಸಲ್ಲಿಸಿರುವುದನ್ನು ತಾವುಗಳು ಪರಿಶೀಲಿಸಿ ಒಟ್ಟು 819 ಫಲಾನುಭವಿಗಳ ಮನೆಗಳ ಬ್ಲಾಕ್ ತೆರವುಗೊಳಿಸಿ ಮುಂದಿನ ಪ್ರಕ್ರಿಯೆಯನ್ನು ಕೈಗೊಳ್ಳಲು ಕ್ರಮವಹಿಸಲು ಕೋರಿದೆ.

ಈ ಕುರಿತು ಜಿಲ್ಲೆಯಲ್ಲಿರುವ ಅರ್ಹ 819 ಅರ್ಹ ಫಲಾನುಭವಿಗಳು ನನಗೆ ಮನವಿ ಸಲ್ಲಿಸಿ. ತೆರವುಗೊಳಿಸಿ, ಅನುದಾನ ಬಿಡುಗಡೆ ಮಾಡುವ ಕುರಿತು ತೀವ್ರವಾಗಿ ಒತ್ತಾಯಿಸುತ್ತಿದ್ದು, ಈ ಕುರಿತು ತಾವುಗಳು ಹೆಚ್ಚಿನ ಆಸಕ್ತಿವಹಿಸಿ ಅರ್ಹ ಫಲಾನುಭವಿಗಳಿಗೆ ನ್ಯಾಯ ಒದಗಿಸಲು ಕ್ರಮವಹಿಸಬೇಕೆಂದು ಮನವಿ ಪತ್ರದಲ್ಲಿ ತಿಳಿಸಿದ್ದಾರೆ.

### ಧನ್ವಂತರಿ ಜಯಂತಿ, 10ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆ

# ಆಯುರ್ವೇದ ಪ್ರಚಾರ ಹೆಚ್ಚಿಸಬೇಕಿದೆ: ಪೂಜಾರ



**ಬಾಗಲಕೋಟೆ:** ಆಯುರ್ವೇದದ ಮೂಲ ಭಾರತವಾಗಿದ್ದರೂ ಇತ್ತೀಚಿನ ದಿನಗಳಲ್ಲಿ ಭಾರತೀಯರು ವಿದೇಶಿ ಚಿಕಿತ್ಸಾ ವಿಧಾನಗಳತ್ತ ಹೆಚ್ಚು ಆಕರ್ಷಿತರಾಗುತ್ತಿದ್ದಾರೆ. ಬೇಗನೆ ಗುಣಮುಖರಾಗಲು ವಿದೇಶಿ ಔಷಧಿ ಸೇವನೆಗೆ ಮುಂದಾಗುತ್ತಿರುವ ಸಂದರ್ಭದಲ್ಲೂ, ಆಯುರ್ವೇದವು ಯಾವುದೇ ದುಷ್ಪರಿಣಾಮಗಳಿಲ್ಲದೆ ನಿಧಾನವಾಗಿ ಜೀವನದ ತುಂಬಾ ಲಾಭ ನೀಡುವ ಚಿಕಿತ್ಸಾ ವಿಧಾನವಾಗಿದೆ. ಆದ್ದರಿಂದ ಇಂದಿನ ದಿನಮಾನಗಳಲ್ಲಿ ಆಯುರ್ವೇದದ ಪ್ರಚಾರವನ್ನು ಹೆಚ್ಚಿಸಬೇಕಿದೆ ಎಂದು ವಿಧಾನಪರಿಷತ್ ಸದಸ್ಯ ಪಿ.ಹೆಚ್. ಪೂಜಾರ ಹೇಳಿದರು.

ನಗರದ ಪ್ರಜಾಪಿತ ಈಶ್ವರೀಯ ವಿಶ್ವವಿದ್ಯಾಲಯದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಆಯುಷ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಧನ್ವಂತರಿ ಜಯಂತಿ ಹಾಗೂ 10ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಧನ್ವಂತರಿ ದೇವರನ್ನು ಆಯುರ್ವೇದ ಚಿಕಿತ್ಸೆಯ ಪಿತಾಮಹರಾಗಿ ಪರಿಗಣಿಸಲಾಗಿದ್ದು, ಈ ವಿಧಾನವು ಪರಂಪರೆಯಿಂದಲೇ ಬೆಳೆದು ಬಂದಿದೆ. ಗಿಡಮೂಲಿಕೆಗಳು ಹಾಗೂ ಆಹಾರ ಪದ್ಧತಿಯಲ್ಲಿ ಬದಲಾವಣೆಗಳನ್ನು ಅಳವಡಿಸಿಕೊಂಡು ಸುಲಭವಾಗಿ ಆರೋಗ್ಯವನ್ನು ಕಾಪಾಡಿಕೊಳ್ಳಬಹುದಾಗಿದೆ ಎಂದು ತಿಳಿಸಿದರು.

ಇತ್ತೀಚಿನ ಯುವಕರು ಆರೋಗ್ಯದ ವಿಚಾರದಲ್ಲಿ ನಿರ್ಲಕ್ಷ್ಯ ತೋರುತ್ತಿದ್ದು, ವೈಜ್ಞಾನಿಕವಾಗಿರದ ಆಹಾರ ಪದ್ಧತಿಯನ್ನು ಅನುಸರಿಸುತ್ತಿರುವುದು ಕಳವಳಕಾರಿಯಾಗಿದೆ. ಹಣ–ಆಸ್ತಿ ಕಳೆದುಕೊಂಡರೆ ಮತ್ತೆ ಗಳಿಸಬಹುದು, ಆರೋಗ್ಯ ಕಳೆದುಕೊಂಡರೆ ಎಲ್ಲವನ್ನೂ ಕಳೆದುಕೊಂಡಂತೆಯೇ ಆಗುತ್ತದೆ. ಆದ್ದರಿಂದ ಯೋಗ ಹಾಗೂ ಆಯುರ್ವೇದದ ಪ್ರಚಾರ–ಪ್ರಸಾರವನ್ನು ವೈದ್ಯರು ಹಾಗೂ ಆಯುಷ ಇಲಾಖೆಯ ಸಿಬ್ಬಂದಿ ಜವಾಬ್ದಾರಿಯುತವಾಗಿ ಮಾಡಬೇಕಿದೆ. ಮೊದಲು ಅವರೇ ತಮ್ಮ ಜೀವನದಲ್ಲಿ ಆಯುರ್ವೇದವನ್ನು ಅಳವಡಿಸಿಕೊಂಡು ಗ್ರಾಮೀಣ ಮಟ್ಟದಲ್ಲಿಯೂ ಇದರ ಉಪಯೋಗ ಮನವರಿಕೆ ಮಾಡಬೇಕಿದೆ ಎಂದು ಕಿವಿಮಾತು ನೀಡಿದರು.

ಅಧ್ಯಕ್ಷತೆ ವಹಿಸಿದ ನಗರಸಭೆ ಅಧ್ಯಕ್ಷೆ ಸವಿತಾ ಲೆಂಕಣ್ಣವರ ಅವರು, "ವಿದೇಶಿ ಚಿಕಿತ್ಸಾ ವಿಧಾನವು ತಾತ್ಕಾಲಿಕವಾಗಿ ಗುಣಮಾಡಿದರೂ ಆಯುರ್ವೇದವು ದೀರ್ಘಕಾಲದ ಆರೋಗ್ಯ ರಕ್ಷಣೆಗೆ ನೆರವಾಗುತ್ತದೆ. ಯಾವುದೇ ದುಷ್ಪರಿಣಾಮವಿಲ್ಲದೆ ಜನರನ್ನು ಗುಣಪಡಿಸುವ ಸಾಮರ್ಥ್ಯ ಆಯುರ್ವೇದಕ್ಕೆ ಇದೆ. ನಮ್ಮ ಪೂರ್ವಜರು ಅನೇಕ ಆರೋಗ್ಯ ಸಮಸ್ಯೆಗಳನ್ನು ಗಿಡಮೂಲಿಕೆಗಳಿಂದ ಪರಿಹರಿಸಿಕೊಂಡಿದ್ದಾರೆ. ಯೋಗ–ಧ್ಯಾನದ ಅಭ್ಯಾಸದಿಂದ ಆರೋಗ್ಯವನ್ನು ಉತ್ತಮವಾಗಿ ಕಾಪಾಡಿಕೊಳ್ಳಬಹುದು. ಆದ್ದರಿಂದ ಆಯುರ್ವೇದದ ಕುರಿತು ಹೆಚ್ಚಿನ ಅರಿವು ಮೂಡಿಸಲು ಸಾಮೂಹಿಕ ಮಟ್ಟದಲ್ಲಿ ತಿಳುವಳಿಕೆ ಕಾರ್ಯಕ್ರಮಗಳು ಅಗತ್ಯ" ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.ಕಾರ್ಯಕ್ರಮದಲ್ಲಿ ಜಿಲ್ಲಾ ಆಯುಷ ಅಧಿಕಾರಿ ಡಾ. ಶೇಖರಯ್ಯ ಮಠ, ನಿವೃತ್ತ ನ್ಯಾಯಾಧೀಶರು ಹಾಗೂ ಜಿಲ್ಲಾಧಿಕಾರಿಗಳ ಕಾನೂನು ಸಲಹೆಗಾರ ಡಿ.ವೈ. ಬಸಾಪುರ, ಜಿಲ್ಲಾ ಆಸ್ಪತ್ರೆಯ ಶಸ್ತ್ರ ಚಿಕಿತ್ಸಕರು ಮಹೇಶ್ ಕೋಣೆ, ಜಿಲ್ಲಾ ಮಲೇರಿಯಾ ಅಧಿಕಾರಿ ಕುಸುಮ ಮಾಗಿ ಸೇರಿದಂತೆ ಅನೇಕರು ಹಾಜರಿದ್ದರು.

# ಸ್ವಂತ ಅಭಿರುಚಿಯಿಂದ ಜನ ಬರುವಂತಾಗಬೇಕು




**ಬೆಳಗಾವಿ:** ನಾಡಹಬ್ಬದ ಮೂಲ ಉದ್ದೇಶವನ್ನು ನಾವು ಇಂದಿನ ಪೀಳಿಗೆಯವರಿಗೆ ತಿಳಿಸಬೇಕು. ಉತ್ಸವದ ಮಹತ್ವ ತಿಳಿದುಕೊಂಡು ಜನ ತಾವಾಗಿಯೇ ಬಂದಾಗ ಮಾತ್ರ ಅದೊಂದು ಯಶಸ್ವಿ ಕಾರ್ಯಕ್ರಮವಾಗುತ್ತದೆ. ಕೇವಲ ಜನ ಸೇರಿಸುವ ಕಾರ್ಯಕ್ರಮಗಳು ಆಗಬಾರದು. ಸ್ವತಃ ಅಭಿರುಚಿಯಿಂದ ಬರುವಂತಹ ವಾತಾವರಣ ನಿರ್ಮಾಣವನ್ನುಂಟು ಮಾಡಬೇಕು ಎಂದು ಸಂಸದ ಜಗಧೀಶ ಶೆಟ್ಟರ ಅವರು ಇಂದಿಲ್ಲಿ ಹೇಳಿದರು.

ನಗರದ ಚೆನ್ನಮ್ಮ ವೃತ್ತದ ಬಳಿಯಿರುವ ಕನ್ನಡ ಸಾಹಿತ್ಯ ಭವನದ ಹೊರವೇದಿಕೆಯಲ್ಲಿ ಇದೇ ದಿ.22 ಸೋಮವಾರದಂದು ಸಾಯಂಕಾಲ 6 ಗಂಟೆಗೆ ಹಮ್ಮಿಕೊಂಡಿದ್ದ 98 ನೇ ನಾಡಹಬ್ಬದ ಉತ್ಸವದ ಉದ್ಘಾಟನಾ ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿದ್ದ ಶೆಟ್ಟರ್ ಅವರು ಮೇಲಿನಂತೆ ಅಭಿಪ್ರಾಯಪಟ್ಟರು. ಮುಂದೆ ಮಾತನಾಡುತ್ತ ಅವರು ಹೊರದೇಶಗಳಲ್ಲಿಯೂ ನಮ್ಮ ಸಂಸ್ಕೃತಿಯನ್ನು ಎತ್ತಿ ಹಿಡಿಯುವಂತಹ ಉತ್ಸವಗಳು ನಡೆಯುತ್ತಿರುವುದು ನಮಗೆ ಹೆಮ್ಮೆ ತರುತ್ತದೆ ಎಂದು ಹೇಳಿದರು.

ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯ ಕುಲಪತಿ ಡಾ. ಸಿ. ಎಂ. ತ್ಯಾಗರಾಜ ಅವರು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತ ನದಿ, ಗಾಳಿ, ಬೆಳಕು, ನಿಸರ್ಗದೊಂದಿಗೆ ಬದುಕುವವನೇ ನಿಜವಾದ ಪುಣ್ಯವಂತ. ಕಲೆ ಸಾಹಿತ್ಯದ ಅಭಿರುಚಿಯನ್ನು ಇಂದಿನ ಮಕ್ಕಳಲ್ಲಿ ಮೂಡಿಸುವ ಕೆಲಸವಾಗಬೇಕು. ತಮ್ಮತನವನ್ನು ಉಳಿಸಿಕೊಳ್ಳುವ ಬೆಳೆಸಿಕೊಳ್ಳುವ ಜವಾಬ್ದಾರಿ ನಮ್ಮ ಮೇಲಿದೆ ಎಂದು ಹೇಳಿದರು.

ಕರ್ನಾಟಕಕ್ಕೆ ನಾಲ್ವಡಿ ಕೃಷ್ಣರಾಜ ಒಡೆಯರ್ ರ ಕೊಡುಗೆ ವಿಷಯ ಕುರಿತು ಗೋಕಾಕದ ಶ್ರೀಮತಿ ವಿದ್ಯಾ ರೆಡ್ಡಿ ಮಾತನಾಡಿದರು. ಪೂಜ್ಯ ಅಲ್ಲಮಪ್ರಭು ಮಹಾಸ್ವಾಮಿಗಳು, ನಾಗನೂರು ರುದ್ರಾಕ್ಷಿಮಠ ಅವರು ಆಶೀರ್ವದಿಸಿದರು. ಆರ್. ಪಿ. ಪಾಟೀಲ, ಸುಜಾತಾ ಉಳ್ಳಾಲ, ವಿಜಯಾ ಹಿರೇಮಠ ಉಪಸ್ಥಿತರಿದ್ದರು.

ಸುನಿತಾ ಪಾಟೀಲರ ವಿದ್ಯಾರ್ಥಿನಿಯರು ಹಾಡಿದ ನಾಡಗೀತೆಯೊಂದಿಗೆ ಕಾರ್ಯಕ್ರಮ ಪ್ರಾರಂಭವಾಯಿತು. ಡಾ. ಎಚ್. ಬಿ. ರಾಜಶೇಖರ ಸ್ವಾಗತಿಸಿದರು. ಡಾ. ಸಿ.ಕೆ. ಜೋರಾಪುರ ವರದಿ ವಾಚನ ಮಾಡಿದರು. ಪ್ರೊ. ಬಸವರಾಜ ಕುಪ್ಪಸಗೌಡರ ನಿರೂಪಿಸಿದರು. ಸೋಮಲಿಂಗ ಮಾವಿನಕಟ್ಟಿ ವಂದಿಸಿದರು. ವಿನಾಯಕ ಮುತಾಲಿಕ ದೇಸಾಯಿ ಇವರಿಂದ ದಾಸವಾಣಿ, ಕು. ಸಮೃದ್ಧಿ ಪಾಟೀಲರಿಂದ ಮಹಿಷಾಸು ಮರ್ದಿನಿ ನೃತ್ಯ ಕಾರ್ಯಕ್ರಮಗಳು ಜರುಗಿದವು.

# ನವರಾತ್ರಿ ಉತ್ಸವ: ದುರ್ಗಾಮಾತಾ ದೌಡಗೆ ಚಾಲನೆ



**ರಾಮದುರ್ಗ:** ಪಟ್ಟಣದ ಶಿವ ಪ್ರತಿಷ್ಠಾನ ಹಿಂದುಸ್ಥಾನ ಸಂಘಟನೆಯ ನೇತೃತ್ವದಲ್ಲಿ ನವರಾತ್ರಿ ಉತ್ಸವದ ಅಂಗವಾಗಿ ಸೋಮವಾರದಿಂದ ಸುಮಾರು 9 ದಿನಗಳ ವರೆಗೆ ನಡೆಯುತ್ತಿರುವ ದುರ್ಗಾಮಾತಾ ದೌಡಕ್ಕೆ ತಾಲೂಕಿನ ಸುನ್ನಾಳ ಶ್ರೀ ಧೀರಮಾರುತೇಶ್ವರ ದೇವಸ್ಥಾನದಲ್ಲಿ ಧನಲಕ್ಷ್ಮೀ ಸಹಕಾರಿ ಸಕ್ಕರೆ ಕಾರ್ಖಾನೆಯ ಅಧ್ಯಕ್ಷ ಮಲ್ಲಣ್ಣ ಯಾದವಾಡ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮಲ್ಲಣ್ಣ ಯಾದವಾಡ, ಹಿಂದು ಧರ್ಮದ ಸಂಘಟನೆ, ಜಾಗೃತಿ ಮೂಡಿಸಲು ಪ್ರತಿವರ್ಷ ನವರಾತ್ರಿ ಹಬ್ಬವನ್ನು ದೇಶದಲ್ಲಿ ವಿಜೃಂಭಣೆಯಿಂದ ಆಚರಣೆ ಮಾಡಲಾಗುತ್ತಿದೆ. ದುಷ್ಟಶಕ್ತಿಗಳ ವಿರುದ್ಧ ಹೋರಾಡಿ ವಿಜಯ ಸಾಧಿಸಿದ ಪ್ರಯುಕ್ತ ವಿಜಯ ದಶಮಿ ಹಬ್ಬ ಆಚರಿಸಲಾಗುತ್ತಿದೆ. ಹಿಂದು ಸಮಾಜ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕ್ರಮದಲ್ಲಿ ಪಾಲಗೊಳ್ಳಬೇಕು ಎಂದು ಕರೆ ನೀಡಿದರು.

ಬಿಜೆಪಿ ಮಂಡಲ ಅಧ್ಯಕ್ಷ ಡಾ.ಕೆ.ವ್ಹಿ. ಪಾಟೀಲ ಮಾತನಾಡಿ, ಜಿಜಾಬಾಯಿ ಪ್ರಾರಂಭಿಸಿದ ದುರ್ಗಾಮಾತಾ ದೌಡ ಅಂದಿನಿಂದ ಪ್ರಸಕ್ತದ ವರೆಗೆ ದೇಶದಲ್ಲಿ ಹಬ್ಬದ ವಾತಾವರಣದಲ್ಲಿ ಒಂಬತ್ತು ದಿನಗಳ ವರೆಗೆ ಆಚರಿಸಲಾಗುತ್ತಿದೆ. ಯುವಕರದಲ್ಲಿ ಹಿಂದು ಧರ್ಮ ಸಂಘಟನೆ ಜಾಗೃತಿ ಮೂಡಿಸಲು ಇಂತಹ ಕಾರ್ಯಕ್ರಮಗಳು ಸಹಕಾರಿಯಾಗಲಿವೆ ಎಂದರು.

ಸುನ್ನಾಳದ ಶ್ರೀ ಧೀರಮಾರುತೇಶ್ವರ ದೇವಸ್ಥಾನದಿಂದ ಪ್ರಾರಂಭವಾದ ದುರ್ಗಾಮಾತಾ ದೌಡ, ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ, ಕಿಲ್ಲಾ ಓಣಿಯಲ್ಲಿರುವ ಅಂಭಾಭವಾನಿ ದೇವಸ್ಥಾನಕ್ಕೆ ಆಗಮಿಸಿ, ಸಮಾವೇಶಗೊಂಡಿತು.

ಈ ಸಂದರ್ಭದಲ್ಲಿ ಸುನ್ನಾಳ ಗ್ರಾಮದ ಮುಖಂಡರಾದ ಅಶೋಕ ಕುಲಗೋಡ, ಡಾ.ಪಿ.ಎಂ. ಆಪ್ಟೆ, ರಾಜೇಶ ಬೀಳಗಿ, ಮಾರುತಿ ಮೆಟ್ಟಿನ, ಬಸವರಾಜ ಕೊನನ್ನವರ, ಸುಧೀರ ಚೋಳಚಗುಡ್ಡ, ಶ್ರೀ ಶಿವ ಪ್ರತಿಷ್ಠಾನ ಹಿಂದುಸ್ಥಾನ ಸಂಘಟನೆಯ ಗಂಗಾಧರ ಬೋಸಲೆ, ಲಕ್ಷ್ಮಣ ಜೋಗಿ, ಈಶ್ವರ ಕಾಳೆ, ವಿಜಯ ಜಾಮದಾರ, ಪಿಂಟು ಜಾಮದಾರ, ಪ್ರಸಾದ ಕರಜಗಾರ, ಸಂದೇಶ ಪಟ್ಟಣ, ಸಾಗರ ಲಮಾಣಿ, ಸಾಗರ ಪೇಠೆ, ಸಾಗರ ಬಾರ್ಕಿ ಸೇರಿದಂತೆ ನೂರಾರು ಸಂಖ್ಯೆಯ ಯುವಕ ಯುವತಿಯರು ದೌಡ ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

## ಅರ್ಜಿ ಆಹ್ವಾನ

**ಬಾಗಲಕೋಟೆ:** ಮೀನುಗಾರಿಕೆ ಇಲಾಖೆ, ಬಾಗಲಕೋಟೆ ಜಿಲ್ಲೆಗೆ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಮತ್ತು ಸಂಪದ ಯೋಜನೆಯಡಿ ಫಲಾನುಭವಿ ಆಧಾರಿತ 0.5 ಹೆ. ಹೊಸ ಮೀನು ಸಾಕಾಣಿಕಾ ತೊಟ್ಟಿಗಳ ನಿರ್ಮಾಣ (Construction of new Rearing Ponds ) ನಿರ್ಮಿಸಲು ಸಹಾಯಧನ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸಲು ಅಕ್ಟೋಬರ್ 10 ಕೊನೆಯ ದಿನಾಂಕವಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೀನುಗಾರಿಕೆ ಉಪನಿರ್ದೇಶಕರು, ಬಾಗಲಕೋಟೆ (9008697699), ಮೀನುಗಾರಿಕೆ ಸಹಾಯಕ ನಿರ್ದೇಶಕರು, ಬಾದಾಮಿ (8095303104) ಮತ್ತು ಮೀನುಗಾರಿಕೆ ಸಹಾಯಕ ನಿರ್ದೇಶಕರು, ಜಮಖಂಡಿ (9886820761) ಅವರನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ಮೂಲಕ ತಿಳಿಸಿದ್ದಾರೆ.

## ಸಾರ್ವಜನಿಕರ ಗಮನಕ್ಕೆ

**ಗದಗ:** ಗದಗ ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿರುವ ಎಲ್ಲಾ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳು ಕರ್ನಾಟಕ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಕಾಯ್ದೆ 1961 ಹಾಗೂ ನಿಯಮಗಳು–1963ರ ಅಡಿಯಲ್ಲಿ ನೋಂದಣಿ ಮಾಡಿಸಿಕೊಳ್ಳುವುದು ಕಡ್ಡಾಯವಾಗಿದೆ. ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಮಾಲೀಕರು ಹಾಗೂ ಉದ್ದಿಮೆದಾರರು ಈಗಾಗಲೇ ತಮ್ಮ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳನ್ನು ಕಾರ್ಮಿಕ ನಿರೀಕ್ಷಕರ ಕಛೇರಿ ಗದಗ 2ನೇ ವೃತ್ತ, ಗದಗ ಇಲ್ಲಿ ನೋಂದಣಿ ಮಾಡಿಸಿಕೊಂಡ ಸಂಸ್ಥೆಗಳನ್ನು ಹೊರತುಪಡಿಸಿ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳಲ್ಲಿ ಕಾರ್ಮಿಕರು ಇರುವ ಹಾಗೂ ಕಾರ್ಮಿಕರು ಇಲ್ಲದೇ ಇರುವ ಸಂಸ್ಥೆಗಳು ಸಹ ಕರ್ನಾಟಕ ಸರ್ಕಾರದ ಇ–ಕಾರ್ಮಿಕ ತಂತ್ರಾಂಶದಲ್ಲಿ https://www.ikarmika.karnataka.gov.in/ekarmika/static/Home-aspx ನಿಗಧಿತ ಆನ್–ಲೈನ್ ಮೂಲಕ ಶುಲ್ಕವನ್ನು ಮತ್ತು ಅವಶ್ಯಕ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಿ ಸಂಸ್ಥೆಗಳ ನೋಂದಣಿ ಪತ್ರ ಪಡೆದುಕೊಳ್ಳಬೇಕೆಂದು ಗದಗ ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಮಾಲೀಕರು ಹಾಗೂ ಉದ್ದಿಮೆದಾರರಿಗೆ ತಿಳುವಳಿಕೆ ನೀಡಲಾಗಿದೆ, ಹಾಗೂ ತಪ್ಪಿದ್ದಲ್ಲಿ ಕಾನೂನು ಕ್ರಮ ಕೈಗೊಳ್ಳಲಾಗುವುದೆಂದು ಉಮೇಶ್ ಎಸ್ ಹುಲ್ಲಣ್ಣವರ ಕಾರ್ಮಿಕ ನಿರೀಕ್ಷಕರು 2ನೇ ವೃತ್ತ ಗದಗ ಇವರು ತಿಳಿಸಿರುತ್ತಾರೆ.



**ರಾಯಬಾಗ:** ಪಟ್ಟಣ ಪಂಚಾಯತ ಕಾರ್ಯಾಲಯ ರಾಯಬಾಗದಲ್ಲಿ ಮಂಗಳವಾರ ಪೌರ ಕಾರ್ಮಿಕರ ದಿನಾಚರಣೆಯ ನಿಮಿತ್ಯ ವಾಗಿ ಪಟ್ಟಣ ಪಂಚಾಯತ ಕಾರ್ಯಾಲಯ ಸಭಾಂಗಣ ದಲ್ಲಿ ಪೌರ ಕಾರ್ಮಿಕರಾಗಿ ಕೆಲಸ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಪೌರ ಕಾರ್ಮಿಕರಿಗೆ ರಾಯಬಾಗ ಪಟ್ಟಣ ಪಂಚಾಯತ ಅಧ್ಯಕ್ಷರಾದ ಅಶೋಕ ಅಂಗಡಿ ಅವರ ಅಧ್ಯಕ್ಷತೆಯಲ್ಲಿ ಪಟ್ಟಣ ಪಂಚಾಯತ ಮುಖ್ಯಾಧಿಕಾರಿ ಗಳಾದ ಮಾನ್ಯ ಎಸ್ ಆರ್ ಮಾಂಗ ಸರ್ ಅವರು ಸದಸ್ಯರು ಆದ ಗಣೇಶ ಅಣ್ಣಾ ಕಾಂಬಳೆ ಅವರು ಮತ್ತು ರಾಜು ಬಿರಡಿ ಅವರು ಹಾಗೂ ಕರ್ನಾಟಕ ರಾಜ್ಯ ಪೌರ ಸೇವಾ ನೌಕರರ ಸೇವಾ ಸಂಘ (ರಿ)ಬೆಂಗಳೂರು ಬೆಳಗಾವಿ ವಿಭಾಗದ ಉಪಾಧ್ಯಕ್ಷರು ಆದ ರಮೇಶ ಬಳ್ಳಾರಿ ಅವರ ಸಮ್ಮುಖದಲ್ಲಿ ಎಲ್ಲಾ ಪೌರ ಕಾರ್ಮಿಕರಿಗೆ ಸತ್ಕಾರ ಸನ್ಮಾನ ಮಾಡಿ ಗೌರವಿಸಿದರು

# ಸಾವಳಗಿ ಸಿದ್ಧಸಂಸ್ಥಾನದಲ್ಲಿ ದಸರಾ ಮಹೋತ್ಸವ



**ಬೆಳಗಾವಿ:** ಗೋಕಾಕ ತಾಲೂಕಿನ ಸಾವಳಗಿ ಗೋಕಾಕದ ಸಿದ್ಧ ಸಂಸ್ಥಾನ ಪೀಠದಲ್ಲಿ ನಡೆಯುತ್ತಿರುವ ದಸರಾ ಮಹೋತ್ಸವ ಹಾಗೂ ಸಾಹಿತ್ಯ ಸಾಂಸ್ಕೃತಿಕ ಸೌರಭ ಕಾರ್ಯಕ್ರಮಗಳಿಗೆ ನಿನ್ನೆ (ಸೆಪ್ಟೆಂಬರ್ 22) ಸಂಜೆ ಮಹಾಸ್ವಾಮೀಜಿಯವರ ದಿವ್ಯ ಸಾನಿಧ್ಯದಲ್ಲಿ ಭರ್ಜರಿ ಚಾಲನೆ ದೊರಕಿತು. ಶೂನ್ಯ ಸಿಂಹಾಸನಾಧೀಶ ಶ್ರೀಮನ್ ಮಹಾರಾಜ ನಿರಂಜನ ಜಗದ್ಗುರು ಶ್ರೀ ಶಿವಲಿಂಗೇಶ್ವರ ಕುಮಾರೇಂದ್ರ ಮಹಾಸನ್ನಿಧಿಯವರು ಕಾರ್ಯಕ್ರಮವನ್ನು ಉದ್ಘಾಟಿಸಿ, ಭಕ್ತರಿಗೆ ಆಶೀರ್ವಚನ ನೀಡಿದರು.

ಪೀಠದ ಸುತ್ತಮುತ್ತಲಿನ ಸೇವಕರು, ಗ್ರಾಮಸ್ಥರು, ಹಾಗೂ ಗೋಕಾಕ, ಬೈಲಹೊಂಗಲ, ಹುಕ್ಕೇರಿ, ಅಥಣಿ, ಚಿಕ್ಕೋಡಿ, ಬೆಳಗಾವಿ ಮತ್ತು ಪಕ್ಕದ ತಾಲೂಕುಗಳಿಂದ ಬಂದ ಸದ್ಭಕ್ತರು ಭಕ್ತಿಭಾವದಿಂದ ಹಾಜರಾಗಿ ಮಹಾಸನ್ನಿದಿಯವರ ದರ್ಶನ ಪಡೆದು ಪುನೀತರಾದರು. ಉದ್ಘಾಟನಾ ಸಮಾರಂಭದ ನಂತರ ರಾತ್ರಿ 8.30ಕ್ಕೆ ಶ್ರೀ ದೇವೀ ಮಹಾತ್ಮ ಪುರಾಣ ಪ್ರವಚನ ಆರಂಭವಾಗಿ, ವೀರೇಶ್ವರ ಪುಣ್ಯಾಶ್ರಮ (ಗದಗ)ದ ವೇ.॥ ಶ್ರೀ ಶಿವಾನಂದೀಶ್ವರ ಶಾಸ್ತ್ರಿಗಳು ಭಕ್ತರಿಗೆ ಆಧ್ಯಾತ್ಮಿಕ ಮಾರ್ಗದರ್ಶನ ನೀಡಿದರು. ನಂತರ ವಿದ್ವಾನ್ ಶ್ರೀ ಶಿವಕುಮಾರ ಗವಾಯಿ (ಚಿಕ್ಕಹೆಸರೂರು) ಮತ್ತು ಕರ್ನಾಟಕ ಕಲಾಶ್ರೀ, ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಗಾನಭೂಷಣ ಶ್ರೀ ವೀರೇಶ್ ಕಿತ್ತೂರ (ಗದಗ) ಅವರಿಂದ ಸುಂದರ ಸಂಗೀತ ನಮನಗಳು ನಡೆಯಿತು. ತಬಲಾ ವಾದನದಲ್ಲಿ ಶ್ರೀ ವಿಜಯ ದೊಡ್ಡಣ್ಣವರ (ಗೋಕಾಕ) ಸವಿನಯದೊಂದಿಗೆ ಸಂಗೀತಾಭಿಮಾನಿಗಳಿಗೆ ಮನೋಹರ ರಸದೌತಣ ನೀಡಲಾಯಿತು.

ಸಮಾರಂಭವನ್ನು ಬೆಳಗಾವಿಯ ಶ್ರೀಮತಿ ರೋಹಿಣಿ ಬಂಗಾರಿ ಮತ್ತು ಅಂಕಲಿಯ ಯಶೋಧಾ ಕೆಂಪಣ್ಣ ನಿರೂಪಿಸಿದರು. ಮುಂದಿನ ಎಂಟು ದಿನಗಳವರೆಗೆ ಪ್ರತಿದಿನ ರಾತ್ರಿ 8.30ರಿಂದ ಪ್ರವಚನ ಹಾಗೂ ಸಂಗೀತ ಕಾರ್ಯಕ್ರಮಗಳು ನಡೆಯಲಿದ್ದು, ಅಕ್ಟೋಬರ್ 2ರ ವಿಜಯದಶಮಿಯಂದು ಸೀಮೋಲ್ಲಂಘನ ಹಾಗೂ ಬೃಹತ್ ಮಹಾಸಭೆಯೊಂದಿಗೆ ದಸರಾ ಮಹೋತ್ಸವ ಅಂತ್ಯಗೊಳ್ಳಲಿದೆ. ಪೀಠವು ಎಲ್ಲಾ ಭಕ್ತರನ್ನು ಕುಟುಂಬ ಸಮೇತವಾಗಿ ಆಗಮಿಸಿ, ಜಗದ್ಗುರು ಶ್ರೀ ಶಿವಲಿಂಗೇಶ್ವರ ಹಾಗೂ ಪೂಜ್ಯ ಮರುಳಮ್ಮ ತಾಯಿಯವರ ದರ್ಶನಾಶೀರ್ವಾದ ಪಡೆದು ಪುನೀತರಾಗುವಂತೆ ಆಹ್ವಾನಿಸಿದೆ.

# ಜಿಎಸ್‌ಟಿ ದರ ಇಳಿಕೆ ರಾಯಬಾಗದಲ್ಲಿ ಸಂಭ್ರಮ

**ರಾಯಬಾಗ:** ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದ ಕೇಂದ್ರ ಸರ್ಕಾರವು "ನಾಗರೀಕ ದೇವೋಭವ" ಘೋಷಣೆಯಡಿ ಜಿಎಸ್‌ಟಿ ದರವನ್ನು ಕಡಿತಗೊಳಿಸಿರುವ ಹಿನ್ನೆಲೆಯಲ್ಲಿ ರಾಯಬಾಗದಲ್ಲಿ ಸಂಭ್ರಮಾಚರಣೆ ನಡೆಯಿತು.

ಶಾಸಕ ಡಿ ಎಂ ಐಹೊಳೆ ಮಾತನಾಡಿ ಜಿಎಸ್‌ಟಿ ದರ ಇಳಿಕೆ ಸಾಮಾನ್ಯ ಜನತೆಗೆ ದೊಡ್ಡ ಸಂತೋಷ ತಂದಿದೆ. ಸಣ್ಣ ವ್ಯಾಪಾರಿಗಳು ಹಾಗೂ ಮಧ್ಯಮ ವರ್ಗದ ಕುಟುಂಬಗಳಿಗೆ ಇದು ಉಳಿತಾಯದ ಉತ್ಸವವಾಗಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದ ಸರ್ಕಾರವು ಜನಪರ ತೀರ್ಮಾನಗಳನ್ನು ತೆಗೆದುಕೊಳ್ಳುತ್ತಿರುವುದು ನಮ್ಮ ಹೆಮ್ಮೆ" ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಬಿಜೆಪಿ ಮಂಡಲದ ಅಧ್ಯಕ್ಷ ಪ್ರಥ್ವಿರಾಜ ಜಾಧವ, ಸದಾಶಿವ ಘೋರ್ಪಡೆ,ಸದಾನಂದ ಹಳಿಂಗಳಿ,ಬಸವರಾಜ ದೋಣವಾಡೆ, ಸಂಗಣ್ಣ ದತ್ತವಾಡೆ, ವೀರೇಶ ಬ್ಯಾಕೂಡೆ, ಮಹೇಶ ಕರಮಡಿ ಸೇರಿದಂತೆ ಬಿಜೆಪಿ ಪಕ್ಷದ ಕಾರ್ಯಕರ್ತರು ಇದ್ದರು.



# ಘಟಪ್ರಭಾದಲ್ಲಿ ಪೌರ ಕಾರ್ಮಿಕರ ದಿನಾಚರಣೆ



**ಘಟಪ್ರಭಾ:** ಇಲ್ಲಿನ ಪುರಸಭೆ ಕಾರ್ಯಾಲಯದಲ್ಲಿ ಮಂಗಳವಾರದಂದು ಪೌರ ಕಾರ್ಮಿಕರ ದಿನಾಚರಣೆಯ ಪ್ರಯುಕ್ತವಾಗಿ ಸಫಾಯಿ ಮಿತ್ರರಿಗೆ ಸುರಕ್ಷಿತ ಶಹರ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಮ್ಯೂಸಿಕಲ್ ಚೇರ್ ಆಟ, ಕುರ್ಚಿ ಮೇಲೆ ಕುಳಿತು ಬಲೂನ್ ಒಡೆಯುವ ಸ್ಪರ್ಧೆ ಏರ್ಪಡಿಸಲಾಗಿತ್ತು. ಈ ಸ್ಪರ್ಧೆಯಲ್ಲಿ ಪ್ರಥಮ, ದ್ವಿತೀಯ ಸ್ಥಾನ ಪಡೆದವರಿಗೆ ಬಹುಮಾನ ಹಾಗೂ ಪ್ರಶಂಸನ ಪತ್ರ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಪುರಸಭೆ ಮುಖ್ಯಾಧಿಕಾರಿ ಎಮ್ ಎಸ್ ಪಾಟೀಲ, ಹಿರಿಯ ಮುಖಂಡ ಡಿ ಎಮ್ ದಳವಾಯಿ, ಕರವೇ ಸಂಸ್ಥಾಪಕ ಅಧ್ಯಕ್ಷ ಡಾ. ಕೆಂಪಣ್ಣ ಚೌಕಸಿ, ಪ್ರವೀಣ್ ಮಟಗಾರ, ಅಪ್ಪಾಸಾಬ್ ಮುಲ್ಲಾ, ಮಲ್ಲಿಕಾರ್ಜುನ ತುಕ್ಕಾನಟ್ಟಿ, ಈರಣ್ಣ ಕಲಕುಟಗಿ, ಮಾರುತಿ ಹುಕ್ಕೇರಿ, ಶಿವಾನಂದ ಚೌಕಸಿ, ಕುಮಾರ ಕರ್ಪೂರಮಠ ಸೇರಿದಂತೆ ಎಲ್ಲ ಅಧಿಕಾರಿಗಳು, ಸಿಬ್ಬಂದಿ, ಎಲ್ಲ ಪೌರ ಕಾರ್ಮಿಕರು ಉಪಸ್ಥಿತರಿದ್ದರು.

## ಸ್ವಯಂ ಸೇವಕರ ಹುದ್ದೆಗೆ ಅರ್ಜಿ ಆಹ್ವಾನ

**ಕೊಪ್ಪಳ:** ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಅವರ ನಿರ್ದೇಶನದ ಮೇರೆಗೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ತಾಲ್ಲೂಕು ಸೇವಾ ಸಮಿತಿಗಳಾದ ಗಂಗಾವತಿ, ಕುಷ್ಟಗಿ ಮತ್ತು ಯಲಬುರ್ಗಾ ವ್ಯಾಪ್ತಿಯಲ್ಲಿ ಅರೆಕಾಲಿಕ ಸ್ವಯಂ ಸೇವಕರ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ವೈದ್ಯಕೀಯ ಕ್ಷೇತ್ರದಲ್ಲಿ ಕೆಲಸ ಮಾಡುತ್ತಿರುವ ವ್ಯಕ್ತಿಗಳು, ಉನ್ನತ ಶಿಕ್ಷಣ ಪಡೆಯುತ್ತಿರುವ ವಿದ್ಯಾರ್ಥಿಗಳು, ಶಿಕ್ಷಣ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರು, ಪ್ರಾಧ್ಯಾಪಕರು, ಕಾನೂನು ವಿದ್ಯಾಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ವಿವಿಧ ಸರ್ಕಾರಿ ಕಚೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಾಮಾಜಿಕ ಸೇವಾ ಮನೋಭಾವ ಹೊಂದಿರುವ ಪುರುಷ ಮತ್ತು ಮಹಿಳೆಯರು, ಮಂಗಳಮುಖಿಯರು ಮತ್ತು ಸ್ವ ಸಹಾಯ ಸಂಘಗಳ ಸದಸ್ಯರು ಅರೆಕಾಲಿಕ ಸ್ವಯಂ ಸೇವಕರ ಹುದ್ದೆಗೆ ಅರ್ಜಿಗಳನ್ನು ಸಲ್ಲಿಸಬಹುದು. ಸೇವಾ ಮನೋಭಾವನೆ ಹೊಂದಿರುವ ಕೊಪ್ಪಳ ತಾಲ್ಲೂಕಿನಲ್ಲಿ ಸೇವೆ ಸಲ್ಲಿಸಲು ಬಯಸುವ ಅಭ್ಯರ್ಥಿಗಳು ಕೊಪ್ಪಳ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿರುವ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಛೇರಿಗೆ ಹಾಗೂ ಉಳಿದ ತಾಲೂಕುಗಳ ಅಭ್ಯರ್ಥಿಗಳು ಆಯಾ ತಾಲ್ಲೂಕು ನ್ಯಾಯಾಲಯದ ಆವರಣದಲ್ಲಿರುವ ತಾಲ್ಲೂಕು ಕಾನೂನು ಸೇವೆಗಳ ಸಮಿತಿಗಳ ಕಛೇರಿಗಳಲ್ಲಿ ನಿಗದಿತ ಅರ್ಜಿ ನಮೂನೆಯನ್ನು ಪಡೆದು, ಭರ್ತಿ ಮಾಡಿ ಅಕ್ಟೋಬರ್ 4 ರೊಳಗಾಗಿ ಅರ್ಜಿ ಸಲ್ಲಿಸಬಹುದು ಎಂದು ಕೊಪ್ಪಳ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಪ್ರಕಟಣೆ ತಿಳಿಸಿದೆ.

# ಮನಗೂಳಿ ಮಹಾರಾಜ ತಂಡಕ್ಕೆ ಟೀಚರ್ಸ್ ಚಾಂಪಿಯನ್ ಟ್ರೋಫಿ



**ಬಸವನಬಾಗೇವಾಡಿ:** ಪಟ್ಟಣದ ಬಸವೇಶ್ವರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಮೈದಾನದಲ್ಲಿ ಆದರ್ಶ ಶಿಕ್ಷಕರ ವೇದಿಕೆಯ ಜಿಲ್ಲಾ, ತಾಲೂಕು ಘಟಕವು ಶಿಕ್ಷಕರ ದಿನಾಚರಣೆ ಹಾಗೂ ದಸರಾ ಹಬ್ಬದಂಗವಾಗಿ ಎರಡು ದಿನಗಳ ಕಾಲ ಬಸವನಬಾಗೇವಾಡಿ, ನಿಡಗುಂದಿ, ಕೊಲ್ಹಾರ ತಾಲೂಕಿನ ಪ್ರಾಥಮಿಕ ಶಾಲೆಯ ಶಿಕ್ಷಕರಿಗೆ ಹಮ್ಮಿಕೊಂಡಿದ್ದ ಕ್ರಿಕೆಟ್ ಹಾಗೂ ಥ್ರೋಬಾಲ್ ಟೂರ್ನಾಮೆಂಟ್ ನಲ್ಲಿ ಭಾನುವಾರ ಸಂಜೆ ಜರುಗಿದ ರೋಚಕ, ಕುತೂಹಲ ಅಂತಿಮ ಕ್ರಿಕೆಟ್ ಪಂದ್ಯದಲ್ಲಿ ಬಸವನಬಾಗೇವಾಡಿ ಬ್ಲಾಸ್ಟರ್ ತಂಡದ ವಿರುದ್ಧ ಮನಗೂಳಿ ಮಹಾರಾಜ ತಂಡವು ಜಯಸಾಧಿಸುವ ಎರಡನೇ ಬಾರಿಗೆ ಟೀಚರ್ಸ್ ಚಾಂಪಿಯನ್ ಟ್ರೋಫಿ ತನ್ನದಾಗಿಸಿಕೊಂಡಿತ್ತು.

ಇದೇ ಪ್ರಥಮ ಬಾರಿಗೆ ವೇದಿಕೆಯು ಪ್ರಾಥಮಿಕ ಶಾಲಾ ಶಿಕ್ಷಕಿಯರಿಗೆ ಹಮ್ಮಿಕೊಂಡಿದ್ದ ಥ್ರೋಬಾಲ್ ಪಂದ್ಯದಲ್ಲಿ ಅಂತಿಮವಾಗಿ ನಡೆದ ಸ್ಪರ್ಧೆಯಲ್ಲಿ ಹೂವಿನಹಿಪ್ಪರಗಿ ತಂಡವನ್ನು ಕೊಲ್ಹಾರ ತಂಡ ಸೋಲಿಸುವ ಮೂಲಕ ಚಾಂಪಿಯನ್ ಟ್ರೋಫಿಯನ್ನು ತನ್ನದಾಗಿಸಿಕೊಂಡಿತ್ತು.

ಕ್ರಿಕೆಟ್ ಪಂದ್ಯಾವಳಿಯಲ್ಲಿ ಬೆಸ್ಟ್ ಮ್ಯಾನ್ ಮ್ಯಾಚ್, ಮ್ಯಾನ್ ಆಫ್ ಸಿರೀಜ್, ಫೈನಲ್ ಮ್ಯಾನ್ ಆಫ್ ಸಿರೀಜ್ ಗೆ ಮೋಹನ ಭಾಜನರಾದರೆ, ಬೆಸ್ಟ್ ಪೀಲ್ಡರ್,ಬೆಸ್ಟ್ ಬೌಲರ್ ಯಾಗಿ ಸಿ.ಬಿ.ಕೆಂಚಗೌಡರ, ಬೆಸ್ಟ್ ವಿಕೆಟ್ ಕೀಪರ್ ಯಾಗಿ ರಿಯಾಜ್ ಪಿಂಜಾರ ಹೊಮ್ಮಿದರು. ಇವರಿಗೆ ವೈಯಕ್ತಿಕ ಟ್ರೋಫಿಯನ್ನು ಶ್ರೀಗಳು ವಿತರಿಸಿದರು. ಸಾಂಗ್ಲಿಯಿಂದ ಆಗಮಿಸಿದ್ದ ಅಂಪೈಯರ್ ಸಿದ್ದು ಹೂಗಾರ ಅವರು ತಮ್ಮದೇ ವಿಶೇಷ ಶೈಲಿಯಲ್ಲಿ ನೃತ್ಯ ಮಾಡುತ್ತಾ ತೀರ್ಪು ನೀಡುವದು ವೀಕ್ಷಕರ ಗಮನ ಸೆಳೆಯಿತು. ಚಾಂಪಿಯನ್ ಟ್ರೋಫಿ ವಿತರಣಾ ಸಮಾರಂಭ ಸಾನಿಧ್ಯ ವಹಿಸಿದ್ದ ಜಮಖಂಡಿ ಓಲೇಮಠದ ಆನಂದದೇವರು ಮಾತನಾಡಿ, ಕ್ರೀಡೆಯಲ್ಲಿ ಮನುಷ್ಯನ ಆರೋಗ್ಯವನ್ನು ವೃದ್ಧಿಸುವ ಶಕ್ತಿ ಇದೆ. ನಮ್ಮ ಆರೋಗ್ಯವು ಗಟ್ಟಿಯಾಗಿ ಇರಬೇಕಾದರೆ ಪ್ರತಿಯೊಬ್ಬರೂ ಯಾವದಾದರೂ ಕ್ರೀಡೆಯಲ್ಲಿ ತೊಡಗುವಂತಾಗಬೇಕು. ಇಂದು ಮಕ್ಕಳು ಆನ್ ಲೈನ್ ಗೇಮ್, ಮೊಬೈಲ ಗೇಮುಗಳಲ್ಲಿ ಮುಳುಗುವ ಮೂಲಕ ಕ್ರೀಡೆಯಿಂದ ದೂರವಾಗುತ್ತಿರುವುದು ವಿಷಾದನೀಯ ಸಂಗತಿ. ಇದು ನಮ್ಮ ನಿಜವಾದ ಸಂಸ್ಕೃತಿಯಲ್ಲ. ಮಕ್ಕಳು ಮೈದಾನಕ್ಕೆ ಬಂದು ಕ್ರೀಡೆಯಾಡುವಂತೆ ಪಾಲಕರು ಗಮನ ಹರಿಸಬೇಕಾಗಿದೆ ಎಂದ ಅವರು ರಾಜ್ಯದಲ್ಲಿಯೇ ಆದರ್ಶ ಶಿಕ್ಷಕರ ವೇದಿಕೆಯುವ ಶಿಕ್ಷಕರಿಗಾಗಿ ಇಂತಹ ಟೂರ್ನಾಮೆಂಟ್ ಕಳೆದ ಎರಡು ವರ್ಷಗಳಿಂದ ಆಯೋಜನೆ ಮಾಡುತ್ತಿರುವುದು ಶ್ಲಾಘನೀಯ. ಎಂದರು.

ಕಾರ್ಯಕ್ರಮದಲ್ಲಿ ಮುಖಂಡರಾದ ಬಸವರಾಜ ಗೊಳಸಂಗಿ, ಅನಿಲ ಅಗರವಾಲ, ರವಿ ರಾಠೋಡ, ಬಸವರಾಜ ಕೋಟಿ, ಶೇಖರ ಗೊಳಸಂಗಿ, ಎಂ.ಜಿ.ಆದಿಗೊಂಡ, ಸುರೇಶಗೌಡ ಪಾಟೀಲ, ರವಿ ನಿಡೋಣಿ, ಹೊನ್ನಪ್ಪ ಗೊಳಸಂಗಿ, ಎಚ್.ಬಿ.ಬಾರಿಕಾಯಿ, ಎಂ.ಎನ್.ಯಾಳವಾರ, ಎಂ.ಎಸ್.ಅವಟಿ, ಸುರೇಶ ಬಿರಾದಾರ, ಅಶೋಕ ಗಿಡ್ಡಪ್ಪಗೋಳ, ಸೋಮು ಬಿರಾದಾರ, ಎಸ್.ಎಚ್. ಗಡೇದ, ಎಂ.ಎಂ.ಮುಲ್ಲಾ, ಸುನೀಲಗೌಡ ಬಿರಾದಾರ, ಸಿದ್ದು ಅವಜಿ, ಸಿದ್ದಲಿಂಗ ಬಾಗೇವಾಡಿ ಇತರರು ಇದ್ದರು.

# ಮಾದಕ ವಸ್ತುಗಳ ಮಾರಾಟ, ಬಳಕೆಗೆ ಕಡಿವಾಣ ಹಾಕಿ

**ಕಾರವಾರ:** ಜಿಲ್ಲೆಯಲ್ಲಿ ಮಾದಕ ವಸ್ತುಗಳ ಬಳಕೆ ಮತ್ತು ಮಾರಾಟವನ್ನು ಕಡಿವಾಣ ಹಾಕುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆಯ ಜೊತೆಗೆ ಸಂಬಂಧಪಟ್ಟ ಎಲ್ಲಾ ಇಲಾಖೆಗಳ ಪರಸ್ಪರ ಸಹಕಾರದಿಂದ ಕಾರ್ಯನಿರ್ವಹಿಸುವಂತೆ ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯಾ ಹೇಳಿದರು.

ಅವರು ಸೋಮವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ಎನ್‌ಕಾರ್ಡ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.



ಜಿಲ್ಲೆಯಲ್ಲಿ ಕೃಷಿ ಭೂಮಿಗಳ ಮಧ್ಯದಲ್ಲಿ ಇತರ ಬೆಳೆಗಳ ಜೊತೆ ಗಾಂಜಾ ಬೆಳೆಗಳನ್ನು ಬೆಳೆಯುವ ಸಾಧ್ಯತೆ ಇರುವುದರಿಂದ ಬೆಳೆ ಸಮೀಕ್ಷೆ ಮಾಡುವ ಸಂದರ್ಭದಲ್ಲಿ ಸಿಬ್ಬಂದಿಗಳು ಗಾಂಜಾ ಬೆಳೆದಿರುವುದು ಕಂಡು ಬಂದಲ್ಲಿ ಕೂಡಲೇ ಪೊಲೀಸ್ ಇಲಾಖೆಗೆ ಮಾಹಿತಿ ನೀಡುವಂತೆ ಸೂಚಿಸಿದ ಅವರು, ಪ್ರಸ್ತುತ ಕಬ್ಬು ಕಟಾವಣೆ ಪ್ರಾರಂಭವಾಗಿದ್ದು, ಈ ಪ್ರದೇಶಗಳಲ್ಲಿ ಕೂಡಾ ಪರಿಶೀಲಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ನಿರ್ದೇಶನ ನೀಡಿದರು.

ಅರಣ್ಯ ಪ್ರದೇಶದಲ್ಲಿ ಗಾಂಜಾ ಬೆಳೆ ಕಂಡು ಬಂದಲ್ಲಿ ಬೀಟ್ ವ್ಯವಸ್ಥೆಯಲ್ಲಿರುವ ಸಿಬ್ಬಂದಿಗಳು ಕೂಡಲೇ ಹತ್ತಿರದ ಪೊಲೀಸ್ ಠಾಣೆಗೆ ಮಾಹಿತಿ ನೀಡಬೇಕು. ಅರಣ್ಯ ವೀಕ್ಷಕರಿಗೆ ಮಾದಕ ವಸ್ತುಗಳ ತಡೆಗಟ್ಟುವ ಬಗ್ಗೆ ಮತ್ತು ಗಾಂಜಾ ಸಸಿಯ ಬಗ್ಗೆ ಅರಿವು ಮೂಡಿಸುವ ಕೆಲಸವಾಗಬೇಕು ಎಂದರು.

ಜಿಲ್ಲೆಯಲ್ಲಿರುವ ರೆಸಾರ್ಟ್ ಮತ್ತು ಹೊಂ ಸ್ಟೇಗಳ ಮಾಲೀಕರಿಗೆ ತಮ್ಮ ವ್ಯಾಪ್ತಿಯಲ್ಲಿ ಮಾದಕ ವಸ್ತುಗಳ ಬಳಕೆಗೆ ಅವಕಾಶ ನೀಡದ ಕುರಿತಂತೆ ಜಾಗೃತಿ ಮೂಡಿಸಬೇಕು ಹಾಗೂ ಪ್ರವಾಸಿ ತಾಣಗಳಲ್ಲಿ ಮಾದಕ ವಸ್ತಗಳ ನಿಷೇಧದ ಕುರಿತು ಪೋಸ್ಟರ್ ಅಳವಡಿಕೆ ಮಾಡುವಂತೆ ತಿಳಿಸಿದ ಅವರು ಹೊಟೇಲ್ ಮತ್ತು ಹೊಂಸ್ಟೇಗಳಲ್ಲಿ ಕಡ್ಡಾಯವಾಗಿ ಸಿಸಿಟಿವಿ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ಪರಿಶೀಲಿಸಬೇಕು ಸಿಸಿಟಿವಿ ಕಾರ್ಯನಿರ್ವಹಿಸದಿದ್ದರೆ ಪರವಾನಿಗೆ ನವೀಕರಣದ ಸಮಯದಲ್ಲಿ ಸಿಸಿಟಿವಿ ಕಾರ್ಯನಿರ್ವಹಣೆ ಬಗ್ಗೆ ಖಚಿತಪಡಿಸಿಕೊಂಡು ಪರವಾನಿಗೆ ನೀಡುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ದೀಪನ್ ಎಂ.ಎನ್ ಮಾತನಾಡಿ, ಜಿಲ್ಲೆಗೆ ಹೊರ ರಾಜ್ಯಗಳಿಂದ ಮಾದಕ ವಸ್ತುಗಳು ಸರಬರಾಜಾಗುತ್ತಿದ್ದು, ಸ್ಥಳೀಯ ಪ್ಲೆಡ್ಲರ್‌ಗಳು ಮತ್ತು ಪ್ರವಾಸಿಗರು ಮಾದಕ ವಸ್ತುಗಳ ಸೇವನೆಯಲ್ಲಿ ತೊಡಗುತ್ತಿರುವುದು ಕಂಡು ಬರುತ್ತಿದೆ, ಈ ಸಂಬಂಧ ಎಲ್ಲಾ ತಾಲೂಕುಗಳಲ್ಲಿ ಟೆಸ್ಟಿಂಗ್ ಕಿಟ್ ಇಡಲಾಗಿದ್ದು, 2025ರ ಸಾಲಿನಲ್ಲಿ ಮಾದಕ ವಸ್ತುಗಳ ಸೇವನೆ ಕುರಿತಂತೆ 126 ಪ್ರಕರಣ ದಾಖಲಿಸಿ 154 ಮಂದಿಯನ್ನು ಬಂಧಿಸಲಾಗಿದೆ ಎಂದರು.

ಜಿಲ್ಲೆಯ ಎಲ್ಲಾ ಶಾಲಾ ಕಾಲೇಜುಗಳಲ್ಲಿ, ರೈಲ್ವೆ ನಿಲ್ದಾಣಗಳಲ್ಲಿ ಪ್ರಮುಖ ಸಾರ್ವಜನಿಕ ಸ್ಥಳ ಮತ್ತು ಪ್ರವಾಸಿ ತಾಣಗಳಲ್ಲಿ ಕ್ಯೂಆರ್ ಕೋಡ್ ಸ್ಟಿಕರ್ ಅಳವಡಿಸಲಾಗುತ್ತಿದೆ. ಈ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿ ಸಾರ್ವಜನಿಕರು ಮಾದಕ ವಸ್ತುಗಳ ಸೇವನೆ ಮಾಡುವವರ ಅಥವಾ ಮಾರಾಟ ಮಾಡುವವರ ಮಾಹಿತಿ ನೀಡಬಹುದಾಗಿದ್ದು, ಮಾಹಿತಿದಾರರ ವಿವರವನ್ನು ಗೌಪ್ಯವಾಗಿಡಲಾಗುತ್ತದೆ ಎಂದರು.

ಎಲ್ಲಾ ಶಾಲಾ ಕಾಲೇಜುಗಳಲ್ಲಿ ಮಾದಕ ದ್ರವ್ಯ ವಿರೋಧಿ ಸಮಿತಿಯನ್ನು ಕಡ್ಡಾಯವಾಗಿ ರಚನೆ ಮಾಡುವಂತೆ ತಿಳಿಸಿದ ಅವರು ಈ ಬಗ್ಗೆ ಎಲ್ಲಾ ಶಾಲಾ ಕಾಲೇಜುಗಳು ಸಮಿತಿಯನ್ನು ರಚನೆಯಾಗಿರುವ ಬಗ್ಗೆ ಖಾತರಿ ಪಡಿಸಿಕೊಳ್ಳುವಂತೆ ಹಾಗೂ ಮಾದಕ ವಸ್ತುಗಳ ದುಷ್ಪರಿಣಾಮದ ಕುರಿತು ಆರೋಗ್ಯ ಮತ್ತು ಶಿಕ್ಷಣ ಇಲಾಖೆಯ ಸಹಯೋಗದಲ್ಲಿ ಅರಿವು ಮೂಡಿಸಲು ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳುವಂತೆ ತಿಳಿಸಿದರು.

ಅಬಕಾರಿ ಇಲಾಖೆ, ಕರಾವಳಿ ಕಾವಲು ಪಡೆ, ಇಂಡಿಯನ್ ಕೋಸ್ಟ್ ಗಾರ್ಡ್ ಹಾಗೂ ರೈಲ್ವೆ ಪೊಲೀಸ್‌ರಿಗೆ ಮಾದಕ ವಸ್ತುಗಳ ನಿಯಂತ್ರಣದ ಬಗ್ಗೆ ಹೆಚ್ಚಿನ ಅಧಿಕಾರ ಇರುವುದರಿಂದ ತಮ್ಮ ಹಂತದಲ್ಲಿ ಮಾದಕ ವಸ್ತುಗಳ ಸರಬರಾಜು ಮತ್ತು ಸೇವನೆ ಕಂಡು ಬಂದಲ್ಲಿ ಅಂತಹವರ ವಿರುದ್ಧ ಪ್ರಕರಣ ದಾಖಲಿಸಿ, ಅವರ ವಿವರವನ್ನು ಪೊಲೀಸ್ ಇಲಾಖೆಗೆ ನೀಡುವಂತೆ ತಿಳಿಸಿದ ಅವರು, ಕಾರವಾರ, ಗೋಕರ್ಣ ಮತ್ತು ಮುರ್ಡೇಶ್ವರದಂತಹ ಪ್ರಮುಖ ರೈಲ್ವೆ ನಿಲ್ದಾಣದಲ್ಲಿ ಅತ್ಯಾಧುನಿಕ ಫೇಸ್ ರೆಕಗ್ನೇಷನ್ ಕ್ಯಾಮರಾಗಳನ್ನು ಅಳವಡಿಸುವಂತೆ ರೈಲ್ವೆ ಪೊಲೀಸ್‌ರಿಗೆ ಸೂಚನೆ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಸಾಜೀದ್ ಮುಲ್ಲಾ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕೃಷ್ಣಮೂರ್ತಿ, ಕೋಸ್ಟ್ ಗಾರ್ಡ್ ಅಧಿಕಾರಿಗಳು, ರೈಲ್ವೆ ಪೊಲೀಸ್ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಭಕ್ತಿಭಾವದೊಂದಿಗೆ ಜರುಗಿದ ದುರ್ಗಾಮಾತಾ ದೌಡ

**ತಾಳಿಕೋಟೆ:** ನವರಾತ್ರೋತ್ಸವ ಅಂಗವಾಗಿ ದುರ್ಗಾ ಮಾತಾ ದೌಡ ಸಮಿತಿ ವತಿಯಿಂದ ಮಂಗಳವಾರರಂದು ಪಟ್ಟಣದಲ್ಲಿ ದುರ್ಗಾಮಾತಾ ದೌಡ ಕಾರ್ಯಕ್ರಮವು ಅಸಂಖ್ಯಾತ ಸುಮಂಗಲೆಯರಿಂದ ಹಾಗೂ ಯುವಕರಿಂದ ಭಕ್ತಿಭಾವದೊಂದಿಗೆ ಜರುಗಿತು.



ಈ ಕಾರ್ಯಕ್ರಮದ ನಿಮಿತ್ಯವಾಗಿ ರಾಜವಾಡೆಯಲ್ಲಿರುವ ಶಿವಭವಾನಿ ಮಂದಿರದಿಂದ ಪ್ರಾರಂಭಗೊಂಡ ಈ ಕಾರ್ಯಕ್ರಮಕ್ಕೆ ಶ್ರೀ ಖಾಸ್ಗತೇಶ್ವರ ಮಠದ ಬಾಲ ಶಿವಯೋಗಿ ಶ್ರೀ ಸಿದ್ದಲಿಂಗ ದೇವರು ಭಗವಾದ್ವಜಕ್ಕೆ ಪುಷ್ಪಹಾರ ಹಾಕಿ ಗೌರವಿಸಿ ಚಾಲನೆ ನೀಡಿದರು.

ಶಿವಭವಾನಿ ಮಂದಿರದ ಅರ್ಚಕ ರಾದ ವೇ.ಸಂತೋಷ ಬಟ್ ಜೋಶಿ ಅವರು ಶಿವಭವಾನಿಗೆ ಮಹಾ ಪೂಜೆಗೈಯುವದರೊಂದಿಗೆ ದುರ್ಗಾಮಾತಾ ದೌಡ ಪಥ ಸಂಚಲನ ಪ್ರಾರಂಭಕ್ಕೆ ಚಾಲನೆ ನೀಡಿದರು.ಅಸಂಖ್ಯಾತ ಯುವಕರು ಹಾಗೂ ಸುಮಂಗಲೆಯರು ಈ ಪಥ ಸಂಚಲನದಲ್ಲಿ ಪಾಲ್ಗೊಂಡು ಭಾರತಮಾತಾಕಿ ಜೈ, ಜೈಭವಾನಿ, ಜೈಶಿವಾಜಿ, ಮಹಾರಾಣಾ ಪ್ರತಾಪಕಿ ಜೈ ಎಂಬ ಭಕ್ತಿಭಾವದ ಸ್ಫೂರ್ತಿ ತುಂಬಿದ ಘೋಷಣೆಗಳು ಎಲ್ಲರನ್ನು ಶ್ರದ್ದೆ ಭಕ್ತಿಯತ್ತ ಕೊಂಡೊಯ್ದಿದ್ದೇನು ಕಡಿಮೇನಿಲ್ಲಾ. ರಾಜವಾಡೆಯಿಂದ ಪ್ರಾರಂಭಗೊಂಡ ದುರ್ಗಾಮಾತಾ ದೌಡ ಪಥ ಸಂಚಲನವು ಕಾಮನಕಟ್ಟಿ ಬಡಾವಣೆ, ಶ್ರೀ ಖಾಸ್ಗತೇಶ್ವರ ಮಠದ ರಸ್ತೆಗುಂಟಾ ಹಾಯ್ದು ರಜಪೂತ ಗಲ್ಲಿ, ಮಹಾಲ್ ಗಲ್ಲಿ, ನಗರೇಶ್ವರ ದೇವಸ್ಥಾನ ಬಡಾವಣೆ, ಕತ್ರಿಭಜಾರ ಮಾರ್ಗ, ಭಾವಸಾರ ಅಂಬಾಭವಾನಿ ಮಂದಿರದ ಮಾರ್ಗದ ಮುಂಭಾಗದಿಂದ ಮರಳಿ ಕತ್ರಿ ಭಜಾರ ಮಾರ್ಗವಾಗಿ ಶ್ರೀ ವಿಠ್ಠಲ ಮಂದಿರಕ್ಕೆ ಆಗಮಿಸಿ ಸಭೆಯಾಗಿ ಮಾರ್ಪಟ್ಟಿತು. ಸಭೆಯುಲ್ಲಿ ಮಾತನಾಡಿದ ಯುವ ಮುಖಂಡ ರಾಘವೇಂದ್ರ ವಿಜಾಪೂರ ಮಾತನಾಡಿ ದುರ್ಗಾಮಾತಾ ದೌಡ ಎಂಬುದು ಭಕ್ತಿಯ ಮಾರ್ಗವನ್ನು ತೋರುವ ದೇವತೆಯಾಗಿದ್ದು ದುರ್ಗಾಮಾತೆ ಶಿವನ ಪತ್ನಿ ಎಂದು ವ್ಯಾಪಕವಾಗಿ ಪರಿಗಣಿಸಲಾಗುತ್ತದೆ ಎಂದರು.

ಪ್ರಾದೇಶಿಕ ಸಂಪ್ರದಾಯಗಳಲ್ಲಿ ವಿಶೇಷವಾಗಿ ಗಣೇಶ ಕಾರ್ತಿಕೇಯ ಲಕ್ಷ್ಮೀ ಮತ್ತು ಸರಸ್ವತಿ ದೇವತೆಗಳ ತಾಯಿ ಎಂದು ಪರಿಗಣಿಸಲಾಗುತ್ತದೆ ಭಾರತ ಒಳಗೊಂಡು ಇನ್ನಿತರ ಹಲವಾರು ದೇಶಗಳಲ್ಲಿ ದುರ್ಗಾಮಾತೆಗೆ ಮಹಾ ಪೂಜೆಗೈಯಲಾಗುತ್ತದೆ ಎಂದು ವಿಶೇಷವಾಗಿ ದುರ್ಗಾಷ್ಠಮಿ, ದುರ್ಗಾ ಪೂಜೆ, ವಿಜಯದಶಮಿ ಹಾಗೂ ದೀಪಾವಳಿ ಹಬ್ಬ ಒಳಗೊಂಡು ದುರ್ಗಾಮಾತೆಗೆ ಹೆಚ್ಚಾಗಿ ಪೂಜಿಸಲಾಗುತ್ತದೆ ಎಂದರು.

ಇನ್ನೋರ್ವ ಯುವ ಮುಖಂಡ ಮಹಾಂತೇಶ ಮುರಾಳ ಅವರು ಮಾತನಾಡಿ ಸನಾತನ ಹಿಂದೂ ಧರ್ಮದ ಮಹಾ ಪೂಜಾ ವಿದಿ ವಿಧಾನಗಳಲ್ಲಿ ಪೂಜಿಸಲ್ಪಡುತ್ತಿರುವ 5 ದೇವತೆಗಳಲ್ಲಿ ದುರ್ಗಾಮಾತೆ ದೇವತೆ ಒಬ್ಬಳಾಗಿದ್ದಾಳೆ ಇಂದು ಜರುಗಿದ ದುರ್ಗಾಮಾತಾ ದೌಡ ಕಾರ್ಯಕ್ರಮ ಪ್ರತಿವರ್ಷ ದುರ್ಗಾ ಮಾತಾ ದೌಡ ಸಮಿತಿಯ ನೇತೃತ್ವದಲ್ಲಿ ನಡೆಯಲಿದೆ ಕಾರಣ ಎಲ್ಲರೂ ಭಕ್ತಿ ಶ್ರದ್ಧಾ ಭಾವನೆಯಿಂದ ಪಾಲ್ಗೊಂಡು ಶ್ರೀ ದೇವಿ ಕೃಪೆಗೆ ಪಾತ್ರರಾಗಬೇಕೆಂದರು. ದುರ್ಗಾದೌಡ ಕಾರ್ಯಕ್ರಮದ ಸಂಚಲನದಲ್ಲಿ ಕಾಮನಕಟ್ಟಿ ಬಡಾವಣೆ ಹಾಗೂ ರಜಪೂತ ಗಲ್ಲಿಯಲ್ಲಿ ಮತ್ತು ಶ್ರೀ ಅಂಬಾಭವಾನಿ ಮಂದಿರದ ಮುಂಭಾಗದಲ್ಲಿ ಭಗವಾದ್ವಜಕ್ಕೆ ಪುಷ್ಪಹಾರ ಹಾಕಿ ಗೌರವಿಸಲಾಯಿತಲ್ಲದೇ ಆರುತಿ ಬೆಳಗಿ ಭವ್ಯ ಸ್ವಾಗತ ಕೋರಲಾಯಿತು. ಈ ಕಾರ್ಯಕ್ರಮದ ನೇತೃತ್ವವನ್ನು ರಾಘವೇಂದ್ರ ಮಾನೆ, ವಾಸುದೇವ ಹೆಬಸೂರ, ರವಿ ಚಂದೂಕರ, ಲಂಕೇಶ ಪಾಟೀಲ, ಯಲ್ಲೇಶ ದಾಯಪುಲೆ, ಪ್ರಮೋದ ಅಗರವಾಲಾ, ಮಾನಸಿಂಗ್ ಕೊಕಟನೂರ, ವಿಠ್ಠಲ ಮೋಹಿತೆ, ಜೈಸಿಂಗ್ ಮೂಲಿಮನಿ, ರಾಘು ಚವ್ಹಾಣ, ಮಂಜು ಶೆಟ್ಟಿ, ಸುರೇಶ ಹಜೇರಿ, ಸುದೀರ ದೇಶಪಾಂಡೆ, ತಮ್ಮಣ್ಣ ದೇಶಪಾಂಡೆ, ಹಾಗೂ ಸುವರ್ಣಾ ಬಿರಾದಾರ, ಗೀತಾಬಾಯಿ ಗೌಡಗೇರಿ, ಭೋರಮ್ಮ ಕುಂಭಾರ ಒಳಗೊಂಡು ಅಸಂಖ್ಯಾತ ಪುರುಷರು, ಮಹಿಳೆಯರು ಪಾಲ್ಗೊಂಡು ಭಕ್ತಿಭಾವ ಮೇರೆದರು.

**ಜಿಲ್ಲಾ ಮಕ್ಕಳ ಕಲ್ಯಾಣ ಮತ್ತು ರಕ್ಷಣಾ ಸಮಿತಿ ಸಭೆಯಲ್ಲಿ ಜಿಲ್ಲಾಧಿಕಾರಿ ಸೂಚನೆ**

# ಮಕ್ಕಳ ರಕ್ಷಣೆಗೆ ಆಲಸ್ಯ ಬೇಡ

**ಬೆಳಗಾವಿ:** ಮಕ್ಕಳ ರಕ್ಷಣಾ ಕಾಯ್ದೆಗಳ ಸಮರ್ಪಕ ಅನುಷ್ಠಾನದ ಜೊತೆಗೆ ಮುನ್ನೆಚ್ಚರಿಕಾ ಕ್ರಮವಾಗಿ ಯಾವುದೇ ತೊಂದರೆಯಾಗದಂತೆ ಜಾಗೃತಿ ಅಭಿಯಾನಗಳನ್ನು ಹಮ್ಮಿಕೊಳ್ಳಬೇಕು. ಅಧಿಕಾರಿಗಳು ಮಕ್ಕಳ ರಕ್ಷಣೆ ವಿಷಯದಲ್ಲಿ ನಿರ್ಲಕ್ಷ್ಯ ತೋರದೆ ಜವಾಬ್ದಾರಿಯುತವಾಗಿ ಕರ್ತವ್ಯ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಅವರು ಸೂಚಿಸಿದರು.



ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಬುಧವಾರ "ಜಿಲ್ಲಾ ಮಕ್ಕಳ ಕಲ್ಯಾಣ ಮತ್ತು ರಕ್ಷಣಾ ಸಮಿತಿ ಹಾಗೂ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಎಲ್ಲ ವಲಯಗಳಲ್ಲಿ ಮಕ್ಕಳಿಗೆ ರಕ್ಷಣೆ ಒದಗಿಸಲು ಪ್ರತಿ ಇಲಾಖೆ ಕಾರ್ಯ ನಿರ್ವಹಿಸಬೇಕು. ನಿರಂತರ ಮಕ್ಕಳ ರಕ್ಷಣೆ ಕುರಿತು ಸಭೆಗಳನ್ನು ಆಯೋಜಿಸಬೇಕು. ಅದೇ ರೀತಿಯಲ್ಲಿ ರಕ್ಷಣಾ ಸಮಿತಿಗಳ ಸಹಯೋಗದಲ್ಲಿ ವ್ಯಾಪಕ ಜಾಗೃತಿ ಚಟುವಟಿಕೆಗಳನ್ನು ಹಮ್ಮಿಕೊಳ್ಳಬೇಕು ಎಂದು ಹೇಳಿದರು.

ಮಕ್ಕಳ ದೈಹಿಕ, ಮಾನಸಿಕ ಬೆಳವಣಿಗೆಗೆ ಪ್ರತಿ ಶಾಲೆಗಳಲ್ಲಿ ಆಟಗಳಲ್ಲಿ ಸಮಯ ನಿಗದಿಪಡಿಸುವಂತೆ ಕ್ಷೇತ್ರ ಶಿಕ್ಷಣಾಧಿಕಾರಿಗಳು ಶಾಲೆಗಳಿಗೆ ಸೂಚಿಸಬೇಕು. ಪ್ರತಿ ಶಾಲೆಗಳಲ್ಲಿ ಮಕ್ಕಳ ಸಹಾಯವಾಣಿ ಫಲಕ ಕಡ್ಡಾಯವಾಗಿ ಅಳವಡಿಸಬೇಕು.

ಬಾಲ್ಯ ವಿವಾಹಕ್ಕೆ ಸಹಾಯ ಮಾಡುವುದು ಕೂಡ ಅಪರಾಧವಾಗಿದೆ. ಕಾನೂನು ಉಲ್ಲಂಘನೆಗೆ ಕ್ರಿಮಿನಲ್ ಪ್ರಕರಣ ದಾಖಲಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು.

ಬಾಲ್ಯ ವಿವಾಹದ ಕುರಿತು ಕರೆಗಳು ಬಂದಲ್ಲಿ ಅಂತಹ ಕರೆಗಳನ್ನು ಗಂಭೀರವಾಗಿ ಪರಿಗಣಿ ಕೂಡಲೇ ಮಾಹಿತಿ ಸ್ಥಳಕ್ಕೆ ಧಾವಿಸಿ ಪ್ರಕರಣ ದಾಖಲಿಸಲು ಮುಂದಾಗಬೇಕು ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಹೇಳಿದರು.

ಶಾಲೆ ಬಿಟ್ಟುಹೋದ ಮಕ್ಕಳ ಮಾಹಿತಿ ಕಲೆಹಾಕಿ ಮರಳಿ ಶಾಲೆಗೆ ಕರೆ ತರುವ ಪ್ರಯತ್ನಕ್ಕೆ ಮುಂದಾಗಬೇಕು. ಮಕ್ಕಳ ಮೇಲಾಗುತ್ತಿರುವ ದೌರ್ಜನ್ಯಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಎಲ್ಲ ಇಲಾಖೆಗಳು ಸಮನ್ವಯದೊಂದಿಗೆ ಕಾರ್ಯನಿರ್ವಹಿಸಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಂದೀಪ ಪಾಟೀಲ ಅವರು ತಿಳಿಸಿದರು.

ನಗರ ಪೊಲೀಸ್ ಆಯುಕ್ತ ಭೂಷಣ್ ಗುಲಾಬರಾವ ಬೊರಸೆ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ರಾಮನಗೌಡ ಕನ್ನೊಳ್ಳಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಈಶ್ವರ ಗಡಾದಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ಚೇತನ ಕುಮಾರ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

# ಪೌರಕಾರ್ಮಿಕರ ಆರೋಗ್ಯ ತಪಾಸಣೆ, ಸನ್ಮಾನ ಸಮಾರಂಭ

**ಬಸವನಬಾಗೇವಾಡಿ:** ಪಟ್ಟಣದ ಎಲ್ಲ ಜನರ ಆರೋಗ್ಯ ಕಾಪಾಡುವಲ್ಲಿ ಪೌರಕಾರ್ಮಿಕರು ಮಹತ್ವದ ಪಾತ್ರ ವಹಿಸಿದ್ದಾರೆ. ಇವರ ಸೇವೆ ಅನುಪಮವಾಗಿದೆ ಎಂದು ಪುರಸಭೆ ಅಧ್ಯಕ್ಷೆ ಜಗದೇವಿ ಗುಂಡಳ್ಳಿ ಹೇಳಿದರು.



ಪಟ್ಟಣದ ಪುರಸಭೆ ಸಭಾಂಗಣದಲ್ಲಿ ಪುರಸಭೆ ಕಾರ್ಯಾಲಯವು ಪೌರಕಾರ್ಮಿಕರ ದಿನಾಚರಣೆಯಂಗವಾಗಿ ಬುಧವಾರ ಹಮ್ಮಿಕೊಂಡಿದ್ದ ಪೌರಕಾರ್ಮಿಕರ ಆರೋಗ್ಯ ತಪಾಸಣೆ ಹಾಗೂ ಸನ್ಮಾನ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪೌರಕಾರ್ಮಿಕರ ಪರಿಶ್ರಮದ ಫಲವಾಗಿ ಇಡೀ ಪಟ್ಟಣವು ಸ್ವಚ್ಛವಾಗಿರುತ್ತದೆ. ಪಟ್ಟಣದ ಸ್ವಚ್ಛತೆಗೆ ಪೌರಕಾರ್ಮಿಕರ ಕೊಡುಗೆ ವಿಶೇಷವಾಗಿದೆ. ಪೌರಕಾರ್ಮಿಕರ ದಿನಾಚರಣೆಯ ಮೂಲಕ ಅವರನ್ನು ಗೌರವಿಸುವ ಕಾರ್ಯ ಮಾಡಬೇಕು. ಇವರ ಸೇವೆ ಬೆಲೆ ಕಟ್ಟಲು ಸಾಧ್ಯವಿಲ್ಲ ಎಂದರು.

ಪುರಸಭೆ ಉಪಾಧ್ಯಕ್ಷ ಅಶೋಕ ಹಾರಿವಾಳ ಮಾತನಾಡಿ,ಪೌರಕಾರ್ಮಿಕರ ಸೇವೆ ಅನನ್ಯ. ಅವರನ್ನು ನಾವು ಅತ್ಯಂತ ಗೌರವದಿಂದ ಕಾಣುವಂತಾಗಬೇಕು. ನಾವು ವಾಸಿಸುವ ಪ್ರದೇಶ ಸ್ವಚ್ಛವಾಗಿರಲು ಪೌರಕಾರ್ಮಿಕರು ಸಲ್ಲಿಸುವ ಸೇವೆ ಶ್ಲಾಘನೀಯ. ಇದನ್ನು ಸಮಾಜ ತೀವ್ರವಾಗಿ ಪರಿಗಣಿಸಬೇಕಿದೆ. ಅವರ ಅಗತ್ಯಗಳ ಕುರಿತಾಗಿ ಜವಾಬ್ದಾರಿಯಾಗಿ ನಾವು ಚಿಂತನೆ ಮಾಡಬೇಕಿದೆ. ಇಲ್ಲಿನ ಕೆಲ ಪೌರಕಾರ್ಮಿಕರಿಗೆ ಮಾತ್ರ ಆರೋಗ್ಯ ಕಾರ್ಡ್ ಇವೆ. ಉಳಿದ ಪೌರಕಾರ್ಮಿಕರಿಗೂ ಆರೋಗ್ಯ ಕಾರ್ಡ್ ಸಿಗುವಂತೆ ಅಧಿಕಾರಿಗಳು ಗಮನಹರಿಸಬೇಕು. ಅವರ ಕುಟುಂಬ ಸದಸ್ಯರಿಗೂ ಉಚಿತವಾಗಿ ಆರೋಗ್ಯ ತಪಾಸಣೆಗೆ ಕಾರ್ಡ್ ಮಾಡಿಸಿಕೊಡಬೇಕೆಂದರು.

ಪುರಸಭೆ ಸಿಬ್ಬಂದಿಗಳು ಎಲ್ಲರೂ ಸಹಕಾರದೊಂದಿಗೆ ಕಾರ್ಯನಿರ್ವಹಿಸಬೇಕು. ಯಾವುದೇ ಕಾರಣಕ್ಕೂ ಕಾರ್ಯ ನಿರ್ವಹಿಸುವಾಗಿ ಬೇಧಭಾವ ಮಾಡದೇ ಎಲ್ಲರೂ ಒಂದು ಎಂಬ ಭಾವದೊಂದಿಗೆ ತಮ್ಮ ತಮ್ಮ ಕಾರ್ಯನಿರ್ವಹಿಸುವ ಮೂಲಕ ಪಟ್ಟಣದ ಅಭಿವೃದ್ಧಿಗೆ ಸಹಕಾರ ನೀಡಬೇಕು. ಪೌರಕಾರ್ಮಿಕರ ಸಮಸ್ಯೆಗಳಿಗೆ ಪುರಸಭೆ ಸರ್ವಸದಸ್ಯರು ಸದಾ ಸ್ಪಂದಿಸಿ ಅವರ ಬೇಡಿಕೆಗಳ ಈಡೇರಿಕೆಗೆ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದರು.

ತಾಲೂಕು ಆರೋಗ್ಯಾಧಿಕಾರಿ ಡಾ.ಕವಿತಾ ದೊಡಮನಿ ಮಾತನಾಡಿದರು. ಪೌರಕಾರ್ಮಿಕರ ಪರವಾಗಿ ಪೌರಕಾರ್ಮಿಕರ ಸಂಘದ ಅಧ್ಯಕ್ಷ ಪ್ರಕಾಶ ಮ್ಯಾಗೇರಿ ಮಾತನಾಡಿದರು.

ಕಾರ್ಯಕ್ರಮಯಲ್ಲಿ ಪುರಸಭೆ ಸದಸ್ಯರಾದ ರವಿ ಪಡಶೆಟ್ಟಿ, ಅಶೋಕ ಗುಳೇದ, ವಿಜಯ ನಾಯಕ, ಪ್ರವೀಣ ಪವಾರ, ಪುರಸಭೆ ಮುಖ್ಯಾಧಿಕಾರಿ ವಿದ್ಯಾಧರ ಕಲಾದಗಿ, ಪುರಸಭೆ ವ್ಯವಸ್ಥಾಪಕ ಸುರೇಶ ಬಾಗೇವಾಡಿ, ಅಭಿಯಂತರರಾದ ಮಹಾದೇವ ಜಂಬಗಿ, ಸಂತೋಷ ಗಿಡ್ಡಸಣ್ಣನವರ, ಸರ್ವ ಸಿಬ್ಬಂದಿ ಇದ್ದರು. ಪುರಸಭೆ ಆರೋಗ್ಯ ನಿರೀಕ್ಷಕ ಮಹೇಶ ಹಿರೇಮಠ ಸ್ವಾಗತಿಸಿ,ನಿರೂಪಿಸಿದರು. ಇದೇ ಸಂದರ್ಭದಲ್ಲಿ ಪೌರಕಾರ್ಮಿಕರ ದಿನಾಚರಣೆಯಂಗವಾಗಿ ಪುರಸಭೆ ಎಲ್ಲ ಪೌರಕಾರ್ಮಿಕರನ್ನು ಸನ್ಮಾನಿಸಲಾಯಿತು.

# ಸೆ.28ಕ್ಕೆ ಸಕ್ಕರೆ ಕಾರ್ಖಾನೆ ಮತದಾನ

**ಎಂ.ಕೆ. ಹುಬ್ಬಳ್ಳಿ:** ಇಲ್ಲಿನ ಮಲಪ್ರಭಾ ಸಹಕಾರಿ ಸಕ್ಕರೆ ಕಾರ್ಖಾನೆಯ 15 ನಿರ್ದೇಶಕ ಸ್ಥಾನಗಳಿಗೆ ಸೆ.28 ರಂದು ಬೆಳಗ್ಗೆ 9 ರಿಂದ ಸಂಜೆ 4 ರ ವರೆಗೆ ಕಾರ್ಖಾನೆಯ ಹೈಸ್ಕೂಲ್ ಆವರಣದಲ್ಲಿ ಮತದಾನ ನಡೆಯಲಿದೆ ಎಂದು ಚುನಾವಣಾಧಿಕಾರಿ, ಕಿತ್ತೂರು ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರಾದ ಪ್ರಭಾವತಿ ಫಕ್ಕೀರಪುರ ಹೇಳಿದರು.



ಮಂಗಳವಾರ ಕಾರ್ಖಾನೆ ಕಚೆರಿಯಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು, ಒಟ್ಟು 16,903 ಸದಸ್ಯ-ರಿಗೆ ಮತದಾನಕ್ಕೆ ಅವಕಾಶವಿದೆ. 15 ಸ್ಥಾನಗಳಿಗೆ ಚುನಾವಣೆ ನಡೆಯಲಿದೆ. ಒಟ್ಟು 44 ಜನ ಅಭ್ಯರ್ಥಿಗಳು ಅಂತಿಮವಾಗಿ ಚುನಾವಣಾ ಕಣದಲ್ಲಿದ್ದಾರೆ. ಎಲ್ಲ ಅಭ್ಯರ್ಥಿಗಳಿಗೆ ಚುನಾವಣಾ ಗುರುತಿನ ಚೀಟಿ ಹಂಚಲಾಗಿದೆ. 34 ಮತಗಟ್ಟೆ ಮತ್ತು ಸ್ಲಿಪ್ ಕೌಂಟರ್‌ಗಳನ್ನು ನಿರ್ಮಿಸಲಾಗಿದ್ದು, 170 ಪೋಲೀಂಗ್ ಅಧಿಕಾರಿಗಳಾಗಿ ಕಾರ್ಯನಿರ್ವಹಿಸಲಿದ್ದಾರೆ. ಮತದಾನ ನಂತರ ಮತ ಎಣಿಕೆಗೆ 45 ಟೇಬಲ್ ಹಾಕಲಾಗಿದ್ದು, ಒಟ್ಟು 225 ಸಿಬ್ಬಂದಿ ಕಾರ್ಯನಿರ್ವಹಿಸಲಿದ್ದಾರೆ. ಭದ್ರತೆಗಾಗಿ ಈ ವೇಳೆ ಅಗತ್ಯ ಪೋಲೀಸ್ ಭದ್ರತೆ ಇರಲಿದೆ. ಮತದಾನ ಗುರುತಿನ ಚೀಟಿಯಾಗಿ ಈ ಬಾರಿ ಕಾರ್ಖಾನೆ ಗುರುತಿನ ಚೀಟಿ ಜೊತೆಗೆ ಆಧಾರ್ ಕಾರ್ಡ್, ಮೋಟರ್ ಐಡಿ, ಪ್ಯಾನ್ ಕಾರ್ಡ್, ಪಾಸ್‌ಪೋರ್ಟ್ ಅಥವಾ ಡ್ರೈವಿಂಗ್ ಲೈಸನ್ಸ್ ಬಳಸಲು ಅವಕಾಶ ನೀಡಲಾಗಿದೆ. ಈಗಾಗಲೇ ಕಾರ್ಖಾನೆ ಮತದಾನ ಗುರುತಿನ ಚೀಟಿ ಪಡೆಯಲು ರೈತ ಸದಸ್ಯರಿಗೆ ಪ್ರಕಟಣೆ ಮೂಲಕ ತಿಳಿಸಲಾಗಿದೆ. ಅದಾಗ್ಯೂ ಸಾಕಷ್ಟು ಜನ ಗುರುತಿನ ಚೀಟಿ ಪಡೆಯದೇ ಇರಬಹುದು, ಅಥವಾ ಮರೆಯಬಹುದು. ಹಾಗಾಗಿ ಯಾರೂ ಕೂಡ ವಂಚಿತರಾಗಬಾರದೆಂಬ ಉದ್ದೇಶದಿಂದ ಈ ನಿರ್ಧಾರ ಕೈಗೊಳ್ಳಲಾಗಿದ್ದು, ಗುರುತಿನ ಚೀಟಿ ಪಡೆದು ಮತದಾರರ ಮಾಹಿತಿ ಹುಡುಕಲು ಪ್ರತ್ಯೇಕ ಕೌಂಟರ್ ತೆರೆಯಲಾಗಿದೆ ಎಂದು ವಿವರಿಸಿದರು. ಈ ವೇಳೆ ಕಾರ್ಖಾನೆ ವ್ಯವಸ್ಥಾಪಕ ನಿರ್ದೇಶಕ ಮೋಹನ ಹಿರೇಮಠ, ಕಿತ್ತೂರು ಪ್ರಾಧಿಕಾರ ಆಯುಕ್ತರ ಕಚೇರಿ ಅಧಿಕಾರಿ ಮಂಜುನಾಥ ಅಂಗಡಿ ಉಪಸ್ಥಿತರಿದ್ದರು.

# ಹಿರೇಕೊಪ್ಪ: ಹೆಚ್ಚುವರಿ ನ್ಯಾಯಬೆಲೆ ಅಂಗಡಿ ಮಂಜೂರು: ಅರ್ಜಿ ಆಹ್ವಾನ

**ಬೆಳಗಾವಿ,:** ಜಿಲ್ಲೆಯ ರಾಮದುರ್ಗ ತಾಲೂಕಿನ ಹಿರೇಕೊಪ್ಪ ಗ್ರಾಮದಲ್ಲಿ ಪ್ರಸ್ತುತ ಒಂದು ನ್ಯಾಯಬೆಲೆ ಅಂಗಡಿ ಕಾರ್ಯ ನಿರ್ವಹಿಸುತ್ತಿದ್ದು, ಸರ್ಕಾರದ ಅಧಿಸೂಚನೆಯಂತೆ ಇನ್ನೊಂದು ಹೊಸ ನ್ಯಾಯಬೆಲೆ ಅಂಗಡಿಗೆ ನಿರ್ವಹಿಸಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ದಿನಾಂಕ: 10-10-2025ರ ಒಳಗಾಗಿ ನಿಗಧಿಪಡಿಸಿದ ದಾಖಲಾತಿಗಳೊಂದಿಗೆ ರಾಮದುರ್ಗ ತಹಶೀಲ್ದಾರ ಕಚೇರಿಗೆ ಸಲ್ಲಿಸಬಹುದಾಗಿದೆ. ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ತಹಶೀಲ್ದಾರ ರಾಮದುರ್ಗ ಅಥವಾ ಉಪನಿರ್ದೇಶಕರ ಕಚೇರಿ, ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾಧಿಕಾರಿಗಳ ಕಚೇರಿ, ಬೆಳಗಾವಿ ಇಲ್ಲಿಗೆ ಸಂಪರ್ಕಿಸಬಹುದಾಗಿದೆ ಎಂದು ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕರ್ನಾಟಕ ಸರ್ಕಾರ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ [illegible]
ಜಿ: ಬೆಳಗಾವಿ
[illegible]
[illegible]
ಟೆಂಡರ್ ಪ್ರಕಟಣೆ
[illegible] 2025-26 [illegible] 1999, [illegible] 2000 [illegible]
1. [illegible] : 25/09/2025, 2. [illegible] : 16/10/2025 [illegible] 4.00 [illegible], 3. [illegible] 17/10/2025 [illegible] 11.00 [illegible], 4. [illegible] 17/10/2025 [illegible] 4.00 [illegible], 5. [illegible] 6. [illegible] 2.86 [illegible] 7. [illegible] C/O [illegible] 08336-222581
[illegible] C/O [illegible]
[illegible]



ತೇರದಾಳ ದಾನಿಗೊಂಡ ಸಮೂಹ ಶಿಕ್ಷಣ ಸಂಸ್ಥೆಯಲ್ಲಿ ನವರಾತ್ರಿ ನಿಮಿತ್ತ ಮೈಸೂರು ಚಾಮುಂಡೇಶ್ವರಿ ಮಾದರಿ ಪ್ರತಿಷ್ಠಾಪಿಸಿರುವ ಅಲಂಕಾರಿತ ದೇವಿ.

# ದಿ.ಉಮೇಶ ಕತ್ತಿ ಜೀವನ ಗ್ರಂಥ ಬಿಡುಗಡೆ

**ಹುಕ್ಕೇರಿ:** ಕಳೆದ ರಾಜ್ಯಸಭಾ ಚುನಾವಣೆಯಲ್ಲಿ ಹಿರಿಯರಾದ ಡಾ. ಪ್ರಭಾಕರ ಕೋರೆ, ರಮೇಶ ಅಣ್ಣಾ ಕತ್ತಿ ಸೇರಿದಂತೆ ಅನೇಕರ ಪೈಪೋಟಿ ಇದ್ದಾಗ ಹೈಕಮಾಂಡ್ ನನ್ನ ಹೆಸರನ್ನು ಸಿಫಾರಸ್ಸು ಮಾಡಿದಾಗ ನನಗೆ ದಿ. ಉಮೇಶ ಕತ್ತಿ ಅವರು ಸಂಪರ್ಕ ಮಾಡಿ ಒಳ್ಳೇದು ಆಯ್ತು ಏನೇ ಆಗಲಿ ಒಟ್ಟು ಬೆಳಗಾವಿ ಜಿಲ್ಲೆಯವರು ಆಯ್ಕೆ ಅದೆವು. ನಿನಗೆ ಏನು ಬೇಕು ಎಲ್ಲ ವ್ಯವಸ್ಥೆ ಮಾಡುತ್ತೇನೆ ಎಂದು ಹೇಳಿ ಸಂಪೂರ್ಣ ಜವಾಬ್ದಾರಿ ತಗೆದುಕೊಂಡು ಎಲ್ಲ ಕೆಲಸವನ್ನು ಅಣ್ಣನಂತೆ ನಿಂತು ನಾನು ರಾಜ್ಯಸಭಾ ಸದಸ್ಯ ಆಗಲು ಸಹಕರಿಸಿದರು ಎಂದು ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ ಹೇಳಿದರು.



ಅವರು ಸಮೀಪದ ಬೆಲ್ಲದ ಬಾಗೇವಾಡಿ ಗ್ರಾಮದ ವಿಶ್ವರಾಜ ಶುಗರ್ಸ ವೇದಿಕೆಯಲ್ಲಿ ಆಯೋಜಿಸಲಾಗಿದ್ದ ಮಾಜಿ ಸಚಿವ, ಉತ್ತರ ಕರ್ನಾಟಕ ಹೋರಾಟಗಾರ ದಿ. ಉಮೇಶ ಕತ್ತಿ ಅವರ ಜೀವನ ಗ್ರಂಥ ಬಿಡುಗಡೆ ಕಾರ್ಯಕ್ರಮದಲ್ಲಿ ಮಾತನಾಡಿ ಸಣ್ಣ ಪುಟ್ಟ ಕಾರ್ಯಗಳಿಗೆ ತಲೆ ಕೆಡಿಕೊಳ್ಳದ ಉಮೇಶ ಅಣ್ಣಾ ಅವರು ನಮ್ಮ ಭಾಗದ ಜನ ಮೈಸೂರು ಕೆ ಆರ್ ಎಸ್ ಮತ್ತು ಆಲಮಟ್ಟಿ ಡ್ಯಾಮ್ ವೀಕ್ಷಣೆಗೆ ಹೋಗುತ್ತಾರೆ ಅದರ ಬದಲಿಗೆ ನಮ್ಮ ಹೆಮ್ಮೆಯ ರಜಾ ಲಕ್ಕಮಗೌಡ ಹಿಡಕಲ್ ಜಲಾಶಯದಲ್ಲಿ ವಿನೂತನ ಮಾದರಿ ಡ್ಯಾಮ್ ಮಾಡಲು ನನ್ನೊಂದಿಗೆ ಚರ್ಚಿಸಿ ಅದರ ಸಾಕಾರಕ್ಕೆ ಶ್ರಮಿಸಿದ್ದರು, ಅದರ ಕೆಲಸ ಈಗ ಹಂತ ಹಂತವಾಗಿ ನಡೆದಿದೆ ಆದರೆ ಇಂದು ಅವರಿಲ್ಲ , ಅವರು ಅನೇಕರು ನಾಯಕರಗಳು ಸಹಾಯ, ಸಹಕಾರ ನೀಡಿದ್ದಾರೆ. ಜಾತಿ ರಾಜಕಾರಣ ಮಾಡಿದವರಲ್ಲ, ಈಗಿನ ಜಿಲ್ಲಾ ರಾಜಕಾರಣ ಜನರಿಗೆ ಮಾರಕ ಆಗುತ್ತಿದೆ ಎಂದರು.

# ಕರ್ನಾಟಕ ರಾಜ್ಯೋತ್ಸವ ಪೂರ್ವಭಾವಿ ಸಭೆ

**ಬೆಳಗಾವಿ:** ಕರ್ನಾಟಕ ರಾಜ್ಯೋತ್ಸವ ಆಚರಣೆ ಕುರಿತು ಪೂರ್ವಸಿದ್ಧತಾ ಸಭೆಯನ್ನು 09, ಅಕ್ಟೋಬರ, 2025 ರಂದು ಮುಂಜಾನೆ 11-00 ಗಂಟೆಗೆ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಭೆಯನ್ನು ಆಯೋಜಿಸಲಾಗಿದೆ. ಜಿಲ್ಲೆಯ ವಿವಿಧ ಕನ್ನಡಪರ ಸಂಘಟನೆಗಳ ಪದಾಧಿಕಾರಿಗಳು, ಕನ್ನಡಾಭಿಮಾನಿಗಳು ಸಭೆಗೆ ಆಗಮಿಸಿ ಸಲಹೆ ಸೂಚನೆಗಳನ್ನು ನೀಡಲು ಪ್ರಕಟಣೆಯಲ್ಲಿ ತಿಳಿಸಿದೆ.

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :197, Postal Reg No. PMG/KA/NK/BM/135/25-27 / POST AT Vantamury Colony Post Office